


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 22, ಸಂಚಿಕೆ: 2, ಪುಟಗಳು: 8, ಗುರುವಾರ, 10 ಅಕ್ಟೋಬರ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


ಸಮಸ್ತ ನಾಡಿನ ಜನತೆಗೆ ಆಯುಧ ಪೂಜೆ, ವಿಜಯದಶಮಿ ಹಬ್ಬದ ಶುಭಾಷಯಗಳು






ಸುಭಾಷಿತ

ಇತರರಿಗೆ ನೋವನ್ನುಂಟು ಮಾಡುವ ಮಾತುಗಳನ್ನು ಆಡಬಾರದು.

। ಮಹಾವೀರ

## ಪಂಚಾಂಗ

(ಗುರುವಾರ 10, ಅಕ್ಟೋಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಆಶ್ವಯುಜ ಮಾಸ, ಶುಕ್ಲ ಪಕ್ಷ,
- ಸಪ್ತಮಿ/ಅಷ್ಟಮಿ,
- ಗುರುವಾರ, ಪೂರ್ವಾಷಾಡ ನಕ್ಷತ್ರ.
- ರಾಹುಕಾಲ: 01:39 ರಿಂದ 03:08
- ಗುಳಿಕ ಕಾಲ: 09:11 ರಿಂದ 10:40
- ಯಮಗಂಡಕಾಲ: 06:12 ರಿಂದ 07:42

# ಉದ್ಯಮಿ ರತನ್ ಟಾಟಾ ವಿಧಿವಶ

## ಸಿಎಂ ಸೇರಿ ಹಲವು ಗಣ್ಯರಿಂದ ಸಂತಾಪ | ಕಂಬನಿ ಮಿಡಿದ ದೇಶ

**ಮುಂಬೈ:** ಅನಾರೋಗ್ಯದಿಂದ ಮುಂಬೈನ ಬ್ರೀಚ್ ಕ್ಯಾಂಡಿ ಆಸ್ಪತ್ರೆಗೆ ದಾಖಲಾಗಿದ್ದ ಟಾಟಾ ಸಮೂಹದ ಮುಖ್ಯಸ್ಥ ರತನ್ ಟಾಟಾ (86) ಅವರು ಬುಧವಾರ ತಡರಾತ್ರಿ ವಿಧಿವಶರಾಗಿದ್ದಾರೆ. ಅವರ ನಿಧನಕ್ಕೆ ರಾಜ್ಯದ ಪ್ರಮುಖ ನಾಯಕರೂ ಕಂಬನಿ ಮಿಡಿದಿದ್ದಾರೆ. ಸಿಎಂ ಸಿದ್ದರಾಮಯ್ಯ, ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ಡಿಸಿಎಂ ಡಿ.ಕೆ ಶಿವಕುಮಾರ್ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರನ್ನು ಸೋಮವಾರ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆರ್‌ಪಿಜಿ ಎಂಟರ್‌ಪ್ರೈಸಸ್‌ನ ಅಧ್ಯಕ್ಷ ಹರ್ಷ್ ಗೋಯೆಂಕಾ ಎಕ್ಸ್‌ನಲ್ಲಿ ಪೋಸ್ಟ್ ಹಾಕಿದ್ದು, ರತನ್ ಟಾಟಾ ಅವರ ನಿಧನಕ್ಕೆ ದುಃಖ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಗಣ್ಯರು ತಮ್ಮ ಎಕ್ಸ್ ಖಾತೆಗಳಲ್ಲಿ ಸಂತಾಪ ನುಡಿಗಳನ್ನು ಹಂಚಿಕೊಂಡಿದ್ದಾರೆ.

ದೇಶದ ಹೆಮ್ಮೆಯ ಉದ್ಯಮಿ, ಟಾಟಾ ಸಮೂಹದ ಮುಖ್ಯಸ್ಥರಾದ ರತನ್ ಟಾಟಾ ಅವರ ನಿಧನದ ಸುದ್ದಿ ದುಃಖವುಂಟುಮಾಡಿದೆ. ಟಾಟಾ ಸಂಸ್ಥೆಯ ಮೂಲಕ ಲಕ್ಷಾಂತರ ಜನರಿಗೆ ಉದ್ಯೋಗ ನೀಡಿದ್ದು ಮಾತ್ರವಲ್ಲ, ಭಾರತದ ಉದ್ಯಮ ವಲಯವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೊಸ ಎತ್ತರಕ್ಕೆ ಕೊಂಡೊಯ್ದ ದೂರದೃಷ್ಟಿಯ ವ್ಯಕ್ತಿ.



**ಸಿದ್ದರಾಮಯ್ಯ:** ದೇಶದ ಹೆಮ್ಮೆಯ ಉದ್ಯಮಿ, ಟಾಟಾ ಸಮೂಹದ ಮುಖ್ಯಸ್ಥರಾದ ರತನ್ ಟಾಟಾ ಅವರ ನಿಧನದ ಸುದ್ದಿ ದುಃಖವುಂಟುಮಾಡಿದೆ. ಟಾಟಾ ಸಂಸ್ಥೆಯ ಮೂಲಕ ಲಕ್ಷಾಂತರ ಜನರಿಗೆ ಉದ್ಯೋಗ ನೀಡಿದ್ದು ಮಾತ್ರವಲ್ಲ, ಭಾರತದ ಉದ್ಯಮ ವಲಯವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೊಸ ಎತ್ತರಕ್ಕೆ ಕೊಂಡೊಯ್ದ ದೂರದೃಷ್ಟಿಯ ವ್ಯಕ್ತಿ. ರತನ್ ಟಾಟಾ ಅವರು ತಮ್ಮ ಬದುಕು ಮತ್ತು ಸಾಧನೆಗಳ ಮೂಲಕ ಅಜರಾಮರ. ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ.



**ಹೆಚ್.ಡಿ ಕುಮಾರಸ್ವಾಮಿ:** ರತನ್ ಟಾಟಾ ಅವರ ನಿಧನದ ಸುದ್ದಿ ಕೇಳಿ ನನಗೆ ಅತೀವ ದುಃಖವಾಗಿದೆ. ಲೋಕೋಪಕಾರಿ ಮತ್ತು ಕೈಗಾರಿಕೋದ್ಯಮಿಯಾಗಿ ಅವರ ಪರಂಪರೆಯು ಅಸಂಖ್ಯಾತ ಜೀವನ ಮತ್ತು ಸಮುದಾಯಗಳನ್ನು ಆಳವಾಗಿ ಪ್ರಭಾವಿಸಿದೆ. ಅವರ ದೂರದೃಷ್ಟಿ, ಸಹಾನುಭೂತಿ ಮತ್ತು ಸಾಮಾಜಿಕ ಕಾರಣಗಳಿಗಾಗಿ ಅಚಲವಾದ ಸಮರ್ಪಣೆ ಯಾವಾಗಲೂ ನೆನಪಿನಲ್ಲಿ ಉಳಿಯುತ್ತದೆ. ಈ ಸವಾಲಿನ ಸಮಯದಲ್ಲಿ ನಮ್ಮ ಆಲೋಚನೆಗಳು ಮತ್ತು ಪ್ರಾರ್ಥನೆಗಳು ಅವರ ಕುಟುಂಬದೊಂದಿಗೆ ಇವೆ.



**ಡಿ.ಕೆ ಶಿವಕುಮಾರ್:** ಖ್ಯಾತ ಕೈಗಾರಿಕೋದ್ಯಮಿ ರತನ್ ಟಾಟಾ ನಿಧನದ ಸುದ್ದಿ ಕೇಳಿ ನೋವಾಗಿದೆ. ಅವರ ಸರಳತೆ, ಸಹಾನುಭೂತಿ ಮತ್ತು ಸಮಗ್ರತೆಗೆ ಹೆಸರುವಾಸಿಯಾಗಿದ್ದಾರೆ. ಅವರು ನಿಜವಾಗಿಯೂ ಪಾಲಿಸಬೇಕಾದ ಮತ್ತು ಆಚರಿಸಬೇಕಾದ ಪರಂಪರೆಯನ್ನು ಬಿಟ್ಟು ಹೋಗಿದ್ದಾರೆ. ಭಾರತದ ಅತ್ಯುತ್ತಮ ಪುತ್ರರಲ್ಲಿ ಒಬ್ಬರಿಗೆ ನಾವಿಂದು ಅಂತಿಮ ವಿದಾಯ ಹೇಳುತ್ತಿದ್ದೇವೆ. ಅವರ ಕುಟುಂಬ ಹಾಗೂ ಪ್ರೀತಿಪಾತ್ರರಿಗೆ ದುಃಖ ಸಹಿಸುವ ಶಕ್ತಿಯನ್ನು ಆ ದೇವರು ಕರುಣಿಸಲಿ.

ಪುಟ 2



1937-2024

## ಸರ್ಕಾರಿ ಗೌರವಗಳೊಂದಿಗೆ ಇಂದು ಅಂತ್ಯಕ್ರಿಯೆ

**ಮುಂಬೈ:** ಕೈಗಾರಿಕೋದ್ಯಮಿ ರತನ್ ಟಾಟಾ ಅವರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗುವುದು ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಹೇಳಿದ್ದಾರೆ.

ಅನಾರೋಗ್ಯ ಹಿನ್ನೆಲೆ ಮುಂಬೈನ ಬ್ರೀಚ್ ಕಾಂಡಿ ಆಸ್ಪತ್ರೆಗೆ ದಾಖಲಾಗಿದ್ದ ಕೈಗಾರಿಕೋದ್ಯಮಿ ರತನ್ ಟಾಟಾ ಬುಧವಾರ ಕೊನೆಯುಸಿರೆಳೆದಿದ್ದಾರೆ. ಈ ಹಿನ್ನೆಲೆ ಅನೇಕ ಗಣ್ಯರು, ರಾಜಕಾರಣಿಗಳು ರತನ್ ಟಾಟಾ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ರತನ್ ಟಾಟಾ ಅವರ ನಿಧನದ ಕುರಿತು ಏಕನಾಥ್ ಶಿಂಧೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಟಾಟಾ ಅವರಿಗೆ ಗೌರವ ಸಲ್ಲಿಸುವ ಸಲುವಾಗಿ ಇಂದು (ಗುರುವಾರ) ಮಹಾರಾಷ್ಟ್ರದಲ್ಲಿ ಶೋಕಾಚರಣೆ ಮಾಡಲಾಗುತ್ತದೆ. ಗೌರವ ಸೂಚಕವಾಗಿ ಮಹಾರಾಷ್ಟ್ರದ ಸರ್ಕಾರಿ ಕಚೇರಿಗಳಾದ್ಯಂತ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಹಾರಿಸಲಾಗುವುದು. ಇಂದು ನಿಗದಿಯಾಗಿದ್ದ ಮನರಂಜನಾ ಕಾರ್ಯಕ್ರಮಗಳನ್ನು ರದ್ದುಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಪುಟ 2

## ಅವಮಾನಿಸಿದ್ದ ಕಂಪನಿಯನ್ನೇ ಖರೀದಿಸಿ ಮೆರೆದಿದ್ದ ಯಶಸ್ವಿ ಉದ್ಯಮಿ ರತನ್ ಟಾಟಾ!

ಮಹಾನ್ ವಾಣಿಜ್ಯ ಸಾಮ್ರಾಜ್ಯವನ್ನು ಆಳಿದ ರತನ್ ಟಾಟಾ ಅವರು ವಯೋಸಹಜ ಕಾಯಿಲೆಯಿಂದ ಕೊನೆಯುಸಿರೆಳೆದಿದ್ದಾರೆ. ಈ ಬೆನ್ನಲ್ಲೇ ಅವರ ಸಾಧನೆಗಳ ಬಗ್ಗೆ ಮೆಲುಕು ಹಾಕಲಾಗುತ್ತಿದೆ. ಅದರ ಒಂದು ತುಣುಕು ಇಲ್ಲಿದೆ.

1980-90ರ ದಶಕದಲ್ಲಿ ಭಾರತದಲ್ಲಿ ಯಾವುದೇ ಸ್ವದೇಶಿ ಕಂಪನಿಗಳು ಕಾರುಗಳನ್ನು ಉತ್ಪಾದಿಸುತ್ತಿರಲಿಲ್ಲ. ಆಗೇನಿದ್ದರೂ ವಿದೇಶಿ ಕಂಪನಿಗಳ ಸಹಭಾಗಿತ್ವದಲ್ಲಿ ಭಾರತದಲ್ಲಿ ಕಾರು ಉತ್ಪಾದನೆಯಾಗುತ್ತಿತ್ತು. ಜೊತೆಗೆ ವಿದೇಶಿ ಕಂಪನಿಗಳ ಕಾರುಬಾರೇ ಜೋರಾಗಿತ್ತು. ಈ ಹಂತದಲ್ಲಿ ರತನ್ ಟಾಟಾ ಅವರು ಮೊದಲ ಬಾರಿಗೆ ಪ್ರಯಾಣಿಕ ವಾಹನಗಳ ವಿಭಾಗಕ್ಕೆ ಲಗ್ಗೆ ಇಡುವ ಪ್ರಯತ್ನ ಮಾಡಿದರು. 1998ರಲ್ಲಿ ಭಾರತದಲ್ಲಿ ಟಾಟಾ ಕಂಪನಿಯು ಪ್ಯಾಸೆಂಜರ್ ವಾಹನದ ಮಾರುಕಟ್ಟೆಗೆ 'ಟಾಟಾ ಇಂಡಿಕಾ' ಕಾರ್‌ನೊಂದಿಗೆ ಸ್ವದೇಶಿ ಮಾರುಕಟ್ಟೆಗೆ ಪ್ರವೇಶಿಸಿತ್ತು.

ರತನ್ ಟಾಟಾ ಅವರು ವೈಯಕ್ತಿಕವಾಗಿ ಈ ಕಾರಿನ ಮೇಲೆ ಬಹಳಷ್ಟು ನಿರೀಕ್ಷೆ ಇರಿಸಿಕೊಂಡಿದ್ದರು. ಆದರೆ ಅವರ ನಿರೀಕ್ಷೆ ಹುಸಿಯಾಗಿತ್ತು. ಭಾರತೀಯರು ಈ ಕಾರುಗಳನ್ನು ತಿರಸ್ಕರಿಸಿದ್ದರು. ಇದು ರತನ್ ಟಾಟಾ ಅವರಿಗೆ ಎಲ್ಲಿಲ್ಲದ ನೋವು ತಂದಿತ್ತು. ಕಂಪನಿ ಭಾರಿ ನಷ್ಟ ಅನುಭವಿಸುವಂತೆ ಮಾಡಿತ್ತು. ಇದರಿಂದಾಗಿ ತಮ್ಮ ವಾಹನ ತಯಾರಿಕೆ ಉದ್ಯಮವನ್ನೇ ಮಾರಾಟ ಮಾಡಲು ರತನ್ ಟಾಟಾ ನಿರ್ಧರಿಸಿದ್ದರು.

**ಫೋರ್ಡ್‌ಗೆ ಮಾರಾಟ ಪ್ರಯತ್ನ:** ಪ್ರಯಾಣಿಕ ವಾಹನ ಉದ್ಯಮ ಕೈಹಿಡಿಯಲ್ಲ ಎಂಬ ನಿರಾಸೆ ಹಿನ್ನೆಲೆಯಲ್ಲಿ, ಇಡೀ ಪ್ರಯಾಣಿಕ ವಾಹನ ಕಂಪನಿಯನ್ನೇ ಮಾರಾಟ ಮಾಡಲು ರತನ್ ನಿರ್ಧರಿಸಿದರು. ಅದರಂತೆ ರತನ್ ಟಾಟಾ ಮತ್ತು ಅವರ ತಂಡ ಅಮೆರಿಕದ ಫೋರ್ಡ್ ಕಂಪನಿಯ ಅಂದಿನ ಮುಖ್ಯಸ್ಥರಾದ ಬಿಲ್ ಫೋರ್ಡ್ ಅವರನ್ನು ಭೇಟಿಯಾಗಿ ಅವರಿಗೆ ತಮ್ಮ ಇಡೀ ಪ್ಯಾಸೆಂಜರ್ ತಯಾರಿಕೆ ಉದ್ಯಮವನ್ನು ಮಾರಾಟ ಮಾಡಲು ಪ್ರಸ್ತಾಪ ಮುಂದಿಟ್ಟರು.

ಪುಟ 2




## ಸಂಕ್ಷಿಪ್ತ ಸುದ್ದಿ

### ಅತ್ಯಾಚಾರ ಆರೋಪ: ಎಫ್‌ಐಆರ್ ದಾಖಲಾದ ಬೆನ್ನಲ್ಲೇ ಮಹಿಳೆ ವಿರುದ್ಧವೇ ದೂರು

**ಬೆಂಗಳೂರು:** ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ವಿರುದ್ಧ ಕೇಳಿ ಬಂದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿ ಮತ್ತೊಂದು ವಿಚಾರ ಹೊರಬಿದ್ದಿದೆ.



ಸ್ವತಃ ವಿನಯ್ ಕುಲಕರ್ಣಿ ಅವರು ಮಹಿಳೆ, ಖಾಸಗಿ ಚಾನೆಲ್ ಮುಖ್ಯಸ್ಥನ ವಿರುದ್ಧ ಬ್ಲ್ಯಾಕ್ ಮೇಲ್ ಆರೋಪ ಮಾಡಿ ದೂರು ದಾಖಲಿಸಿದ್ದಾರೆ. ಈ ಸಂಬಂಧ ಎರಡು ಎಫ್ ಐಆರ್ ದಾಖಲಿಸಿ ಸಂಜಯನಗರ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಸದ್ಯ ಆರೋಪಕ್ಕೆ ಸಂಬಂಧಿಸಿದಂತೆ ಸಾಕ್ಷಿ ಒದಗಿಸುವಂತೆ ನೋಟಿಸ್ ಕಳಿಸಲಾಗಿದೆ.

ಈವರೆಗೆ ಸಂತ್ರಸ್ತೆ, ಕುಲಕರ್ಣಿಯಿಂದ ಯಾವುದೇ ಸಾಕ್ಷಿ ನೀಡಲಾಗಿಲ್ಲ. ಕರೆ ಮಾಡಿ ಹಣಕ್ಕಾಗಿ ಬ್ಲ್ಯಾಕ್ ಮೇಲ್ ಮಾಡಿದ್ದಾರೆಂದು ವಿನಯ್ ದೂರು ನೀಡಿದ್ದಾರೆ. ಖಾಸಗಿ ಚಾನೆಲ್ ಮುಖ್ಯಸ್ಥನ ವಿರುದ್ಧ ವಿನಯ್ ಕುಲಕರ್ಣಿ ಗಂಭೀರ ಆರೋಪ ಮಾಡಿದ್ದಾರೆ.

ಪುಟ 2

### ಪೈಲಟ್ ಸಾವು, ಟರ್ಕಿಶ್ ಏರ್‌ಲೈನ್ಸ್ ನ್ಯೂಯಾರ್ಕ್‌ನಲ್ಲಿ ತುರ್ತು ಭೂಸ್ಪರ್ಶ



**ನ್ಯೂಯಾರ್ಕ್:** ಪೈಲಟ್ ಸಾವನ್ನಪ್ಪಿದ ಹಿನ್ನೆಲೆಯಲ್ಲಿಸಿಯಾಟಲ್ ನಿಂದ ಇಸ್ತಾನ್ ಬುಲ್‌ಗೆ ಹೊರಟಿದ್ದ ಟರ್ಕಿಶ್ ಏರ್ ಲೈನ್ಸ್ ವಿಮಾನವು ನ್ಯೂಯಾರ್ಕ್‌ನಲ್ಲಿ ತುರ್ತು ಭೂಸ್ಪರ್ಶ ಮಾಡಲಾಯಿತು. ಏಕಾಏಕಿ ಕ್ಯಾಪ್ಟನ್ ಕುಸಿದುಬಿದ್ದಿದ್ದರು ಎಂದು ವಿಮಾನಯಾನ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಂಗಳವಾರ ರಾತ್ರಿ ಸಿಯಾಟಲ್‌ನಿಂದ 204 ಫ್ಲೈಟ್ ಟೇಕ್ ಆಫ್ ಆದ ನಂತರ ಪೈಲಟ್ ಇಲ್ಸೆಹಿನ್ ಪೆಹ್ಲಿವಾನ್, ಪ್ರಜ್ಞೆ ಕಳೆದುಕೊಂಡರು. ಟರ್ಕಿಶ್ ಏರ್ಲೈನ್ಸ್ ವಕ್ತಾರ ಯಾಹ್ಯಾ ಉಸ್ತುನ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ತಕ್ಷಣವೇ ಚಿಕಿತ್ಸೆ ಸಿಕ್ಕರೂ, ಅವರನ್ನು ಉಳಿಸಲು ಸಾಧ್ಯವಾಗಲಿಲ್ಲ, ನಂತರ ಮತ್ತೋರ್ವ ಪೈಲಟ್ ಮತ್ತು ಸಹ-ಪೈಲಟ್ ನಿಯಂತ್ರಣವಹಿಸಿಕೊಂಡು ನ್ಯೂಯಾರ್ಕ್ ನಲ್ಲಿ ವಿಮಾನ ಕೆಳಗಿಳಿಸಿದರು.

ಪುಟ 2

## ರೇಣುಕಾಸ್ವಾಮಿ ಕೊಲೆ: ಆರೋಪಿ ಪ್ರದೋಷ್ ಬೆಳಗಾವಿಯಿಂದ ಬೆಂಗಳೂರಿಗೆ ಶಿಫ್ಟ್



**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ 14ನೇ ಆರೋಪಿ ಪ್ರದೋಶ್ ಎಸ್. ರಾವ್ ಅವರನ್ನು ಮತ್ತೆ ಬೆಳಗಾವಿ ಜೈಲಿನಿಂದ ಬೆಂಗಳೂರಿನ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವಂತೆ ಜೈಲು ಅಧಿಕಾರಿಗಳಿಗೆ ಹೈಕೋರ್ಟ್ ನಿರ್ದೇಶಿಸಿದೆ.

ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ರೇಣುಕಾಸ್ವಾಮಿ ಕೊಲೆ ಪ್ರಕರಣದ ಎರಡನೇ ಆರೋಪಿ ನಟ ದರ್ಶನ್ ಸಿಗರೇಟ್ ಸೇದುತ್ತಾ ಕಾಫಿ ಕುಡಿಯುತ್ತಿದ್ದ ಚಿತ್ರ ವೈರಲ್ ಆದ ಹಿನ್ನೆಲೆಯಲ್ಲಿ ಪ್ರಕರಣದ ಎಲ್ಲ ಆರೋಪಿಗಳನ್ನು ರಾಜ್ಯದ ವಿವಿಧ ಜೈಲುಗಳಿಗೆ ಸ್ಥಳಾಂತರಿಸಲಾಗಿತ್ತು. ಅದರಂತೆ ಪ್ರದೋಶ್‌ನನ್ನು ಬೆಳಗಾವಿ ಜೈಲಿಗೆ ಕಳುಹಿಸಲಾಗಿತ್ತು.

ಪುಟ 2

## ಬಾಮೈದ ಮಾಡಿದ ತಪ್ಪಿಗೆ ತನ್ನ ಕತ್ತು ಸೀಳಿಕೊಂಡು ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ



**ಬೆಂಗಳೂರು:** ಮಾನ ಮರ್ಯಾದಿಗೆ ಅಂಜಿ ತನ್ನ ಕತ್ತನ್ನ ತಾನೇ ಸೀಳಿಕೊಂಡು ವ್ಯಕ್ತಿಯೊಬ್ಬ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಅಮೃತಹಳ್ಳಿ ಠಾಣಾ ವ್ಯಾಪ್ತಿಯ ಜಕ್ಕೂರಿನ ಬಳಿ ನಡೆದಿದೆ. 45 ವಯಸ್ಸಿನ ಮೋಹನ್ ಕುಮಾರ್ ಎಂಬಾತ ಚಾಕುವೊಂದರಿಂದ ತನ್ನ ಕತ್ತನ್ನ ತಾನೇ ಸೀಳಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಇದೇ ಅಮೃತಹಳ್ಳಿ ಠಾಣಾ ವ್ಯಾಪ್ತಿಯ ನಿವಾಸಿಯಾಗಿರೋ ಮೋಹನ್ ಕುಮಾರ್ ಪೇಂಟಿಂಗ್ ಕೆಲಸ ಮಾಡ್ಕೊಂಡಿದ್ದ. ಆತನ ಪತ್ನಿ ಗಾರ್ಮೆಂಟ್ಸ್ ಒಂದರಲ್ಲಿ ಕೆಲಸ ಮಾಡ್ತಿದ್ದರು. ಆಗೋ ಹೀಗೋ ಕುಟುಂಬ ಚೆನ್ನಾಗಿಯೇ ನಡೀತಿತ್ತು. ಆದ್ರೆ ಇತ್ತೀಚೆಗೆ ಈತನ ಬಾಮೈದ ಮಾಡಿದ್ದ ಕೆಲಸ ಮೋಹನ್ ಕುಮಾರ್ ಗೆ ತಲೆ ತಗ್ಗಿಸುವಂತೆ ಮಾಡಿತ್ತು. ವಿವಿ ಪುರಂ ಠಾಣಾ ವ್ಯಾಪ್ತಿಯ ಮನೆಯೊಂದರಲ್ಲಿ ಚಿನ್ನಾಭರಣ ಕಳ್ಳತನ ಮಾಡಿ ಅರೆಸ್ಟ್ ಆಗಿದ್ದ. ಕಳ್ಳತನ ಮಾಡಿದ್ದವ ಇದೇ ಮೋಹನ್ ಕುಮಾರ್ ಮನೇಲಿ ಕದ್ದಿದ್ದ ಚಿನ್ನ ತಂದಿಟ್ಟಿದ್ದ.

ಪುಟ 2

## ಜಗಳೂರು ಕೆರೆಯಲ್ಲಿ ಮೀನುಗಳ ಮಾರಣಹೋಮ



**ದಾವಣಗೆರೆ:** ಜಿಲ್ಲೆಯ ಜಗಳೂರು ಪಟ್ಟಣದ ಹೊರ ವಲಯದಲ್ಲಿರುವ ಕೆರೆಯಲ್ಲಿ ಸಾವಿರಾರು ಮೀನುಗಳ ಮಾರಣಹೋಮ ನಡೆದಿದೆ. ಮೀನುಗಳು ಸತ್ತು ದಡ ಸೇರುತ್ತಿವೆ, ಆದ್ರೆ ಸಾವಿಗೆ ಕಾರಣ ಮಾತ್ರ ನಿಗೂಢವಾಗಿದೆ.

ಪುಟ 2

## ರಾಜ್ಯಾದ್ಯಂತ ರಕ್ಕಸ ಮಳೆಗೆ ಜನಜೀವನ ತತ್ತರ!

**ಹಾವೇರಿ:** ರಾಜ್ಯಾದ್ಯಂತ ಮತ್ತೆ ವರುಣನ ಆರ್ಭಟ ಮುಂದುವರೆದಿದೆ. ಕೆಲ ದಿನಗಳಷ್ಟು ಬಿಡುವು ನೀಡಿದ್ದ ಮಳೆ ಈಗ ಮತ್ತೆ ಸುರಿಯುತ್ತಿದ್ದು, ಮಳೆಯಿಂದ ಹಲವು ಅವಾಂತರ ಸೃಷ್ಟಿಯಾಗುತ್ತಿದೆ. ಇನ್ನು ಗುಡುಗು ಸಹಿತ ಸುರಿಯುತ್ತಿರುವ ಮಳೆಗೆ ಜನ ಜೀವನ ಅಸ್ತವ್ಯಸ್ತಗೊಂಡಿದೆ. ಮಳೆ ಜೊತೆಗೆ ವಿಪರೀತ ಗಾಳಿ ಬೀಸುತ್ತಿರುವುದರಿಂದ ಮರಗಳು ಧರೆಗುರುಳಿದೆ. ಮಳೆ ರಾಯನ ಅಟ್ಟಹಾಸಕ್ಕೆ ಜನರು ಬೆಚ್ಚಿ ಬಿದ್ದಿದ್ದಾರೆ. ಇನ್ನು ರಾಜ್ಯದ ಹಲವೆಡೆ ಮಳೆ ಧಾರಾಕಾರ ಹೊಯ್ಯುತ್ತಿದ್ದು, ಇದರ ಕಂಪ್ಲೀಟ್ ಡಿಟೇಲ್ಸ್ ಇಲ್ಲಿದೆ ನೋಡಿ.

**ಹಾವೇರಿಯಲ್ಲಿ ವರುಣನ ಆರ್ಭಟಕ್ಕೆ ನಲುಗಿದ ಜನ!:** ರಾಜ್ಯದ ಅನೇಕ ಕಡೆ ಮಳೆರಾಯನ ಅಬ್ಬರ ಜೋರಾಗಿದೆ. ಹಾವೇರಿಯಲ್ಲಿ ಮಳೆ ಜೋರಾಗಿ ಸುರಿಯುತ್ತಿದ್ದು, ಜನರು ಪರದಾಡುವಂತಾಗಿದೆ. ಇನ್ನು ವರುಣ ಅಬ್ಬರಕ್ಕೆ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಆಟೋ ಒಂದು ಕೊಚ್ಚಿ ಹೋಗಿದೆ. ಈ ಘಟನೆ ನಗರದ ನಾಗೇಂದ್ರನಮಟ್ಟಿಯ ರೈಲ್ವೆ ಬ್ರಿಡ್ಜ್ ಬಳಿ ನಡೆದಿದೆ. ಮಳೆ ವಿಪರೀತವಾಗಿ ಹೊಡೆಯುತ್ತಿದ್ದು, ಮಳೆ ಅವಾಂತರಕ್ಕೆ ಜನ ಕಂಗಾಲಾಗಿದ್ದಾರೆ.



**ಪ್ರಾಣದ ಹಂಗು ತೊರೆದ ಆಟೋ ಚಾಲಕ:** ಇನ್ನು ನೀರಿನ ರಭಸಕ್ಕೆ ಕೊಚ್ಚಿಹೋಗುತ್ತಿದ್ದ ಆಟೋ ಮುಳುಗಡೆಯಾಗಿದೆ. ನಾಗರಾಜ್ ಕೊಳಚಿ ಎಂಬುವವರಿಗೆ ಸೇರಿದ ಹೊಸ ಆಟೋ ಇದಾಗಿದ್ದು, ಆಟೋದಲ್ಲಿ ಓರ್ವ ಮಗು ಸೇರಿದಂತೆ ಮಹಿಳೆ ಇದ್ದರು. ಆಟೋ ಚಾಲಕ ಜೀವದ ಹಂಗು ತೊರೆದು ಅವರಿಬ್ಬರ ಪ್ರಾಣವನ್ನು ಕಾಪಾಡಿದ್ದಾನೆ. ಈ ಆಟೋ ಸಿಟಿಯಿಂದ ನಾಗೇಂದ್ರನಮಟ್ಟಿಗೆ ತೆರಳುತ್ತಿತ್ತು. ಮಳೆ ರಭಸಕ್ಕೆ ಆಟೋ ಸುಮಾರು ಎರಡು ನೂರು ಮೀಟರ್‌ನಷ್ಟು ದೂರ ತೇಲಿ ಹೋಗಿತ್ತು.

**ಮಳೆ ಅವಾಂತರಕ್ಕೆ ಜನ ತತ್ತರ:** ಕಳೆದ ಒಂದು ಗಂಟೆಯಿಂದ ಸತತವಾಗಿ ಸುರಿಯುತ್ತಿರೋ ಮಳೆರಾಯ ಅನೇಕ ಅನಾಹುತಗಳನ್ನು ಸೃಷ್ಟಿಸಿದೆ. ಮಳೆಯ ಆರ್ಭಟಕ್ಕೆ ಅನೇಕ ಅನಾಹುತಗಳು ನಡೆದಿದ್ದು, ಘಟನಾ ಸ್ಥಳಕ್ಕೆ ನಗರಸಭೆಯ ಅಧ್ಯಕ್ಷೆ ಶಶಿಕಲಾ ಮಾಳಗಿ ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಪುಟ 2

## ಸಿಎಂ ಕೆಳಗಿಳಿಸಲು ಕಾಂಗ್ರೆಸ್ಸಿಗರಿಗೇ ಹೆಚ್ಚು ಆತುರ

**ದಾವಣಗೆರೆ:** ಕಾಂಗ್ರೆಸ್ ಸಚಿವರು, ಶಾಸಕರು, ಮುಖಂಡರು ಮೇಲಿಂದ ಮೇಲೆ ಡಿನ್ನರ್‌ಪಾರ್ಟಿ, ಬ್ರೇಕ್ ಫಾಸ್ಟ್ ಪಾರ್ಟಿ, ಟೀ ಪಾರ್ಟಿ ಅಂತ ಮೀಟಿಂಗ್ ಮೇಲೆ ಮೀಟಿಂಗ್ ಮಾಡುತ್ತಿದ್ದಾರೆ. ಇದು ಸಿದ್ದರಾ ಮಯ್ಯ ಅವರು ಆಲೋಚನೆ ಮಾಡಬೇಕಾದ ವಿಷಯ ಎಂದು ಬಿಜೆಪಿ ಮಾಜಿ ಸಚಿವ ಸಿ.ಟಿ.ರವಿ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿ, ಸಿಎಂ ಯಾರಿಗೂ ಬಗ್ಗಲ್ಲ, ಜಗ್ಗಲ್ಲ, ಹೆದರಲ್ಲ ಅಂತ ಹೇಳುತ್ತಿ ದ್ದಾರೆ. ಆದರೆ ಇದು ಪ್ರಜಾಪ್ರಭುತ್ವ. ಇಲ್ಲಿ ಇಂಥದ್ದೆಲ್ಲ ನಡೆಯುವುದಿಲ್ಲ. ಸಂವಿಧಾನಕ್ಕೆ ಪ್ರತಿಯೊಬ್ಬರೂ ತಲೆಬಾಗಬೇಕು. ಜನರಿಗೆ ಹೆದರಲೇಬೇಕು ಎಂದು ಹೇಳಿದ್ದಾರೆ.

ಪುಟ 2

## ದಸರಾ ಸಂಭ್ರಮದ ನಡುವೆ ETF ಸಿಬ್ಬಂದಿಗೆ ಸಂಬಳ ನೀಡದ ಸರ್ಕಾರ



**ಚಿಕ್ಕಮಗಳೂರು:** ದಸರಾ ಸಂಭ್ರಮದ ನಡುವೆ ರಾಜ್ಯ ಸರ್ಕಾರ ಚಿಕ್ಕಮಗಳೂರಿನಲ್ಲಿ ETF ಸಿಬ್ಬಂದಿಗೆ ಸಂಬಳ ನೀಡುವುದನ್ನೇ ಮರೆತು ಹೋಗಿದೆ. ಸಂಬಳ, ಊಟವೂ ಇಲ್ಲದೆ ETF ಸಿಬ್ಬಂದಿ ಕಾಡಾನೆಗಳನ್ನು ಕಾಯುತ್ತಿದ್ದಾರೆ. ಕಾಡಾನೆಗಳು ನಾಡಿಗೆ ಬಾರದಂತೆ ತಡೆಯುತ್ತಿರುವ ಇಟಿಎಫ್ ಸಿಬ್ಬಂದಿಗೆ ಸಂಬಳ, ಊಟದ ಹಣಕ್ಕೆ ರಾಜ್ಯ ಸರ್ಕಾರ ಅನುದಾನ ನೀಡಿಲ್ಲ.

ಅರಣ್ಯ ಇಲಾಖೆ ಆಗಸ್ಟ್ ವರೆಗೂ ಸಿಬ್ಬಂದಿಗೆ ಊಟದ ಭತ್ಯೆ, ಸಂಬಳ ನೀಡಿದೆ. ಆದರೆ ಕಾಂಗ್ರೆಸ್ ಸರ್ಕಾರ 2 ತಿಂಗಳಿನಿಂದ ಸಂಬಳ, ಊಟ, ಭತ್ಯೆ ನೀಡಿಲ್ಲ.

ಪುಟ 2

29 ಕವಿಗಳ ಕವಿತೆಯ ವಾಚನ | ನೆರೆದಿರುವ ಪ್ರೇಕ್ಷಕರಿಂದ ಕರತಾಡನ

# ಸಮೃದ್ಧಿ ಕವಿಗೋಷ್ಠಿಯಲ್ಲಿ ಕವಿತೆಗಳ ಸುರಿಮಳೆ



**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾ ಕವಿಗೋಷ್ಠಿಯ ಪಂಚ ಕಾವ್ಯೋತ್ಸವದಲ್ಲಿ ದೇವರಾಜ ಹುಣಸಿಕಟ್ಟಿ ಅವರು 'ಬೆಳಕನ್ನು ಮಾರಲು ಬಂದವನು ಎಂಬ ಕಾವ್ಯ ವಚನ, ಮಲ್ಲಿಕಾರ್ಜುನ ಅಮ್ಟೆ ಅವರು ಯುದ್ಧ ಏನನ್ನು ಸಾಧಿಸಲಾರದು ಎಂಬ ಕಾವ್ಯ ವಾಚನ, ರಜಿಯಾ ಡಿ.ಬಿ ಅವರು ಹೇಗೆ ಕರೆ ತರಲಿ ಎಂಬ ಕಾವ್ಯ ವಾಚನ, ರವಿಕುಮಾರ್ ಕಟ್ಟಿಮನೆ ಎಂ ಎಸ್ ಅವರು ಸಂಶೋಧನೆ ಎಂಬ ಕಾವ್ಯ ವಾಚನವನ್ನು, ಡಾ. ರಾಮಲಿಂಗೇಶ್ವರ ಅವರು ಕಾಲ ಸಮುದ್ರದ ಪ್ರಳಯ ಎಂಬ ಕಾವ್ಯ ವಾಚನಗಳಿಗೆ ಕವಿಪ್ರಿಯರು ಹಾಗೂ ನೆರೆದಿರುವ ಪ್ರೇಕ್ಷಕರು ದಾಸೋಹರಾದರು.

ಇಂದು ನಾಡಹಬ್ಬ ಮೈಸೂರು ದಸರಾ ಅಂಗವಾಗಿ ಜಗನ್ಮೋಹನ ಅರಮನೆಯಲ್ಲಿ ನಡೆದ ಸಮೃದ್ಧ ಕವಿಗೋಷ್ಠಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಲೇಖಿಕಿಯರ ಸಂಘದ ಅಧ್ಯಕ್ಷರಾದ ಡಾ. ಎಚ್.ಎಲ್ ಪುಷ್ಪ ಅವರು ಮಾತನಾಡಿ, ಪ್ರಖ್ಯಾತ ನಾಡಹಬ್ಬ ಮೈಸೂರು ದಸರಾಗೆ ತನ್ನದೇ ಆದ ಸಾಂಸ್ಕೃತಿಕ ಹಾಗೂ ಸಾಹಿತ್ಯಿಕ ಹಿನ್ನಲೆ ಇರುವಂಥದ್ದು ಇಂಥ ಕವಿಗೋಷ್ಠಿಗೆ 125 ಜನ ಕವಿಗಳಿಗೆ ಆಹ್ವಾನ ಸಿಕ್ಕಿದೆ. ಕವಿತೆ ಕೇಂದ್ರಬಿಂದು, ಜೇಡ ತನ್ನ ಬಲೆಯನ್ನು ನೇಯುವ ಹಾಗೆ ಒಂದು ವಸ್ತುವನ್ನು ನೋಡಿ ಕವಿಯು ಕವಿತೆಯನ್ನು ನೇಯುತ್ತಾನೆ.

ಇಂತಹ ಕಾರ್ಯಕ್ರಮವು ಸಹಜವಾಗಿ ಸರ್ಕಾರದ ಆಯೋಜನೆಯಾಗಿದೆ. ಸಾಮಾಜಿಕ ನ್ಯಾಯದ ಅಡಿಯಲ್ಲಿ ಕೆಲವೊಂದು ಬಾರಿ ಕೆಲವು ಅವಕಾಶ ಸಿಗದೇ ಇರುವುದು ಸಹಜ ಎಂದರು. ಪಂಪನ ಕಾಲದ ಸಾಹಿತ್ಯದಿಂದ ಆಧುನಿಕ ಸಾಹಿತ್ಯದ ವರೆಗೂ ವಿವರಿಸುತ್ತಾ ವಿಶೇ?ವಾಗಿ ದಲಿತ ಕಾವ್ಯ, ಸಮಾಜವನ್ನು ಪ್ರಶ್ನಿಸುವಂಥ ಕಾವ್ಯಗಳು ಹಾಗೂ ಸಾರ್ವಕಾಲಿಕ ಕಾವ್ಯಗಳ ಬಗ್ಗೆ ವಿವರಿಸುತ್ತಾ ಇವು ನಮ್ಮ ದೈನಂದಿನ ಜೀವನದ ಮೇಲೆ ಹೇಗೆ ಪ್ರಭಾವ ಬೀರುತ್ತದೆ ಎಂಬುದನ್ನು ವಿವರಿಸಿದರು.

ಕವಿತೆಯನ್ನು ಓದುವಂತೆ ಮಾಡಿ ಅದನ್ನು ನಾವುಗಳು ಆಲಿಸಿಕೊಳ್ಳುವುದು ಒಂದು ರೀತಿಯ ಸೊಬಗು, ಅನೇಕ ವೃದ್ಧಾಶ್ರಮ, ಜೈಲು ಖೈದಿಗಳ ಕವಿತೆಗಳ ವಾಚನವನ್ನು ನೋಡಿದ್ದೇವೆ. ಕವಿತೆಗಳು ದಾರಿತಪ್ಪಿದ ರಾಜಪ್ರಭುತ್ವಗಳು ಹಾಗೂ ಪ್ರಭುತ್ವಗಳನ್ನು ಪ್ರಶ್ನಿಸಲಿವೆ ಎಂಬುದು ನಾವು ಕಂಡಿದ್ದೇವೆ. ಲಿಖಿತ ಸಂವಿಧಾನದ ಮೂಲಕ ಕಾವ್ಯಗಳನ್ನು ಕಟ್ಟುತ್ತಾ ಬಂದಿದೆ. ಕಾವ್ಯ ನಮ್ಮ ಬದುಕನ್ನು ಹೇಗೆ ರೂಪಿಸುತ್ತೆ ಎಂಬುದನ್ನು ನಾವು ಕಾಣಬಹುದಾಗಿದೆ ಎಂದು ತಿಳಿಸಿದರು.

ರಗಳೆಗಳ ಕವಿ ರನ್ನ 9 ನೇ ಕವಿರಾಜ ಮಾರ್ಗ ಕೃತಿಗಳು ನಾಡಿನ ಹೆಮ್ಮೆ ಹಾಗೂ ಸೌಹಾರ್ದತೆ ಸಾಕ್ಷಿಯಾಗಿದೆ. ಇನ್ನು ಕುವೆಂಪುರವರ 'ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು' ಕಾವ್ಯ, ಒಂದು ದೇಶ ಒಂದು ಜನ ಒಂದು ಜಾತಿ ಒಂದು ಎಂಬ ಸಂದೇಶದ ಕಾವ್ಯಗಳು, ವಿಶೇ?ವಾಗಿ ದಲಿತ ಕಾವ್ಯ, ಲೈಂಗಿಕ ಕಾವ್ಯಗಳು ಕವಿತೆಗಳು ನೈಜ್ಯ ಹಾಗೂ ಪ್ರಾಮಾಣಿಕತೆ ರೂಪವಾಗಿದೆ. ಸಿದ್ಧಲಿಂಗಯ್ಯ ರವರ, ಯಾರಿಗೆ ಬಂತು, ಎಲ್ಲಿಗೆ ಬಂತು ಸ್ವಾತಂತ್ರ್ಯ, ಹೋರಾಟದ ಕವಿತೆ, ನಮ್ಮ ಎಲುಬಿನ ಅಂದದೊಳಗೆ ಮಂದಿರ ಮಸೀದಿ ಎಂಬ ಸರ್ವಕಾಲಿಕ ಕವಿತೆಗಳು ಧರ್ಮ ಮುಖ್ಯವೋ ಮನು?ತ್ವ ಮುಖ್ಯವೋ ಎಂಬ ಸಂದೇಶದ ಕವಿತೆಗಳನ್ನು ಸ್ಮರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕರಾದ ಅಬ್ದುಲ್ ರಶೀದ್ ಅವರು, ಒಂದೇ ವೇದಿಕೆಯಲ್ಲಿ ಎಲ್ಲಾ ರೀತಿಯ ಕವಿಗಳನ್ನು ಸೇರಿಸಿ ಕವಿತೆ ವಾಚನಗೊಳಿಸಿದ್ದು ನಿಜಕ್ಕೂ ಕವಿಗೋಷ್ಠಿ ವೇದಿಕೆಗೆ ಹೆಚ್ಚು ಮೆರಗು ತಂದಿದೆ. ಕವಿತೆಗಳು ಯಾವುದೇ ರೀತಿಯ ಗೊಂದಲಕ್ಕೆ ಒಳಗಾಗದೆ ಕೇಳುಗರಿಗೆ ಹಿತ ಎನಿಸುವಂತೆ ಸಮೃದ್ಧ ಕವಿಗೋಷ್ಠಿ ಯಶಸ್ವಿಗೊಂಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಕವಿತೆ ವಾಚನ ಮಾಡಿದ ಎಲ್ಲಾ ಕವಿ ಹಾಗೂ ಕವಯತ್ರಿಯರಿಗೆ ಸನ್ಮಾನ ಹಾಗೂ ಕಿರು ಕಾಣಿಕೆಯನ್ನು ನೀಡಿ ಗೌರವಿಸಲಾಯಿತು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ. ಕವಿತಾ ರೈ ಅವರು ಮಾತನಾಡಿ, ಬೇಡನೊಬ್ಬ ರಾಮಾಯಣ ರಚಿಸಿದ, ಬೆಸ್ತನೊಬ್ಬ ಮಹಾಭಾರತವನ್ನು ರಚಿಸಿದ ಹೀಗೆ ಅವರು ಕಟ್ಟಿದ ಕಾವ್ಯಗಳ ಹಾದಿಯಲ್ಲಿ ನಾವು ಇಂದು ಸಾಗಿದ್ದೇವೆ. ಹಲವಾರು ಕವಿ ಹಾಗೂ ಕವಯತ್ರಿಯರ ಕಾವ್ಯಗಳ ಧ್ವನಿಯು ಒಂದು ಅಸ್ವಸ್ಥ ಹಾಗೂ ಅನಾರೋಗ್ಯ ಸಮಾಜದ ಉಳಿಗಾಲವಾಗಿದೆ.

ಕಾವ್ಯಗಳಲ್ಲಿ ಹಲವಾರು ಸಮುದಾಯಗಳ ಪ್ರಾತಿನಿಧ್ಯವನ್ನು ಕಾಣಬಹುದು. ವರ್ತಮಾನದಲ್ಲಿ ಕವಿತೆಗಳ ವಿಚಾರಧಾರೆಯು ಬಹಳ ಮುಖ್ಯವಾದದ್ದು, ನಾನು ಅನೇಕ ಕವಿಗಳನ್ನು ಓದುಕೊಂಡು ಅವರನ್ನು ಅನುಸರಿಸಿಕೊಂಡಿದ್ದೇನೆ ಎಂದು ಸಂತಸ ವ್ಯಕ್ತಪಡಿಸಿದರು.

ಈ ದೇಶದಲ್ಲಿ ಮನುವಾದ, ಮೂಲಭೂತವಾದದ ಪರಿಕಲ್ಪನೆಗಳಿಗೆ ಸಾಹಿತಿಗಳ ಮೂಲಕ ಸಾರ್ಥಕತೆ ಸಿಕ್ಕಿದೆ ಆ ವಿಚಾರದಲ್ಲಿ ಇನ್ನ?ಟ್ಟು ಸಾಹಿತಿಗಳು ಬರಬೇಕೆಂದು ಆಶಿಸಿದರು. ಇದೇ ಸಂದರ್ಭದಲ್ಲಿ 78 ರ ಹರೆಯದ ದೇಶದಲ್ಲಿ ನಮಗೊಂದು ಆಧಾರ ಸಿಕ್ಕಿದೆ ಎಂಬ ಕವಿತೆ ವಾಚನವನ್ನು ಪ್ರಸ್ತುತ ಪಡಿಸಿದರು. ಕವಿಗೋಷ್ಠಿಯಲ್ಲಿ ಕೆ.ಆರ್ ಕ್ಷೇತ್ರದ ಶಾಸಕರಾದ ಟಿ.ಎಸ್ ಶ್ರೀವತ್ಸ ಅವರು ಮಾತನಾಡಿ, ದಸರಾದ ವಿವಿಧತೆಯಲ್ಲಿ ಒಂದಾದ ಕವಿಗೋಷ್ಠಿಯು ತನ್ನದೇ ಆದ ಪ್ರಾಮುಖ್ಯತೆ ಮತ್ತು ವೈಶಿಷ್ಟ್ಯತೆಯನ್ನು ಒಳಗೊಂಡಿದೆ. ನಾನು ನಿಮ್ಮಲ್ಲಿ ಒಬ್ಬನಾಗಿ ಕವಿತೆ ಕೇಳಲು ಬಂದಿದ್ದೇನೆ ಎಂದು ಹೇಳಿದರು. ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ.ಎಂ ಗಾಯತ್ರಿ, ಡಿ.ಸಿ.ಪಿ.ಮುತ್ತುರಾಜ್, ದಸರಾ ಕವಿಗೋಷ್ಠಿ ಉಪ ಸಮಿತಿಯ ಕಾರ್ಯಾಧ್ಯಕ್ಷರಾದ ಎನ್. ಕೆ.ಲೋಲಾಕ್ಷಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ.ಎನ್ ಮಲ್ಲಿಕಾರ್ಜುನಸ್ವಾಮಿ ಹಾಗೂ ಕವಿಗೋಷ್ಠಿ ಸಮಿತಿಯ ಸದಸ್ಯರುಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಯೋಗ ಚಾರಣ, ದುರ್ಗಾ ನಮಸ್ಕಾರಕ್ಕೆ ಸಾಕ್ಷಿಯಾದ ಚಾಮುಂಡಿ ಬೆಟ್ಟದ ದೇವಸ್ಥಾನದ ಆವರಣ

**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾದ 7ನೇ ದಿನವಾದ ಇಂದು ಯೋಗ ದಸರಾ ಉಪಸಮಿತಿ ವತಿಯಿಂದ ಚಾಮುಂಡಿ ಬೆಟ್ಟದ ತಪ್ಪಲು ಮತ್ತು ದೇವಸ್ಥಾನದ ಆವರಣದಲ್ಲಿ 'ಯೋಗ ಚಾರಣ ಮತ್ತು ದುರ್ಗಾ ನಮಸ್ಕಾರ' ಕಾರ್ಯಕ್ರಮವನ್ನು ನಡೆಸಲಾಯಿತು.

ಯೋಗ ಅಧಿಕಾರೇತರ ಉಪಸಮಿತಿಯ ಅಧ್ಯಕ್ಷರಾದ ಎಂ.ಮಹೇಶ್ ಅವರು ಸಮಾರಂಭವನ್ನು ಉದ್ಘಾಟನೆ ಮಾಡಿದರು. ಯೋಗ ಸರಪಳಿಯಲ್ಲಿ ಯೋಗಪಟುಗಳು, ವಿದ್ಯಾರ್ಥಿಗಳು ಹಾಗೂ ಯುವಕರು, ಹಿರಿಯ, ಸಾರ್ವಜನಿಕರು ಸೇರಿದಂತೆ ಮೈಸೂರಿನ ವಿವಿಧೆಡೆಯಿಂದ ಆಗಮಿಸಿದ್ದ ಸುಮಾರು 250 ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಬೆಳಗ್ಗೆ 7 ಗಂಟೆಗೆ ಚಾಮುಂಡಿ ಬೆಟ್ಟದ ಆವರಣದಲ್ಲಿ ನೆರೆದಿದ್ದ ಜನರ ದೃಶ್ಯವು ಮೈಸೂರಿನ ಸೊಬಗನ್ನು ಹೆಚ್ಚಿಸಿತು.

ಯೋಗ ಚಾರಣ ಮತ್ತು ದುರ್ಗಾ ನಮಸ್ಕಾರ ಸೇರಿ ವಿವಿಧ ಭಂಗಿಗಳ ಪ್ರದರ್ಶನ: ಯೋಗಪಟುಗಳು ಯೋಗ ಚಾರಣ ಮತ್ತು ದುರ್ಗಾ ನಮಸ್ಕಾರ, ಸೂರ್ಯ ನಮಸ್ಕಾರ, ವಜ್ರಾಸನ, ಶ್ವಾನಾಸನ, ತ್ರಿಕೋನಾಸನ, ಶವಾಸನ, ಸಿದ್ಧಾಸನ, ಅರ್ಧಚಕ್ರಾಸನ ಸೇರಿದಂತೆ ಯೋಗದ ವಿವಿಧ ಭಂಗಿಗಳನ್ನು ಪ್ರದರ್ಶನ ನೀಡಿದರು. ಸಾಂಸ್ಕೃತಿಕ ಕಾರ್ಯಕ್ರಮವು ಯೋಗ ದಸರಾಗೆ ಮತ್ತ?ಟ್ಟು ಮೆರುಗು ತಂದಿತು. ಜೆ.ಎಸ್.ಎಸ್. ಸಮೂಹದ ಮುಖ್ಯಸ್ಥರಾದ ಶ್ರೀಹರಿ, ಯೋಗ ದಸರಾ ಉಪಸಮಿತಿಯ ವಿಶೇಷಾಧಿಕಾರಿಗಳಾದ ಕೆ.ರಮ್ಯ, ಕಾರ್ಯಾಧ್ಯಕ್ಷರಾದ ಅನಂತರಾಜು, ಕಾರ್ಯದರ್ಶಿ ಪು?ಪ, ಚಾಮುಂಡಿ ಬೆಟ್ಟದ ಗ್ರಾಮ ಪಂಚಾಯತಿ ಅಧ್ಯಕ್ಷರಾದ ನಾಗಮ್ಮ ಮತ್ತು ಉಪಾಧ್ಯಕ್ಷರಾದ ರವಿಕುಮಾರ್.ವೈ. ಎಸ್. ಸೇರಿದಂತೆ ಇನ್ನಿತರು ಉಪಸ್ಥಿತರಿದ್ದರು.

## ಕಾವೇರಿ ಐದನೇ ಹಂತ ನೀರಿನ ಯೋಜನೆ ಲೋಕಾರ್ಪಣೆ

**ಬೆಂಗಳೂರು:** ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಕಾವೇರಿ ಐದನೇ ಹಂತ ಕುಡಿಯುವ ನೀರಿನ ಯೋಜನೆ ಲೋಕಾರ್ಪಣೆ ಸಮಾರಂಭವನ್ನು ಅಕ್ಟೋಬರ್ 16 ರಂದು ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ತೊರಕಾಡನಹಳ್ಳಿ (ಟಿ.ಕೆ.ಹಳ್ಳಿ)ಯ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ಲೋಕಾರ್ಪಣೆ ಮಾಡಲಿದ್ದಾರೆ. ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್, ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವರಾದ ಕು. ಶೋಭಾ ಕರಂದ್ಲಾಜೆ, ಕೇಂದ್ರ ಜಲಶಕ್ತಿ ಮತ್ತು ರೈಲ್ವೇ ರಾಜ್ಯ ಖಾತೆ ಸಚಿವರಾದ ವಿ.ಸೋಮಣ್ಣ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ. ರಾಜ್ಯ ಸಂಪುಟ ದರ್ಜೆಯ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು, ಹಿರಿಯ ಅಧಿಕಾರಿಗಳು ಸೇರಿದಂತೆ ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಉತ್ತರ-2-1, ದಕ್ಷಿಣ-1-1, ದಕ್ಷಿಣ -2-1, ನೈರುತ್ಯ -1, ನೈರುತ್ಯ - 4, ಪೂರ್ವ -1-2, ಪೂರ್ವ -2-2, ಆಗ್ನೇಯ - 2, ಆಗ್ನೇಯ 5, ಪಶ್ಚಿಮ-1-2 ಮತ್ತು ಪಶ್ಚಿಮ-2-2, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಅಕ್ಟೋಬರ್ 10 ರಂದು ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು, ಜೆ.ಪಿ.ನಗರ-2, ಕೊತ್ತನೂರು ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರಕೆರೆ ಮೈಕೋ ಲೇಔಟ್, ಜೆ.ಪಿ.ನಗರ 13, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಬೈರಸಂದ್ರ, ಎಲ್.ಎಲ್. ಆರ್, ಚಿಕ್ಕಲಾಲ್‌ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ -1, ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ-1, ಇಟ್ಟಮಡು, ಬನಗಿರಿನಗರ, ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನನಗರ, ಬಾಣಸವಾಡಿ, ಓ.ಎಂ.ಬಿ.ಆರ್., ಲಿಂಗರಾಜಪುರಂ, ಕಸ್ತೂರಿನಗರ, ಹಲಸೂರು, ದೊಮ್ಮಲೂರು, ಮಾರತ್‌ಹಳ್ಳಿ, ಕೋರಮಂಗಲ- 12, ವಿಜಯನಗರ ಓ.ಎಚ್.ಟಿ, ಮೂಡಲಪಾಳ್ಯ, ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ.ವಿ ಲೇಔಟ್, ಮೂಡಲಪಾಳ್ಯ ಸೇವಾ ಠಾಣೆಗಳಲ್ಲಿ ಅದಾಲತ್ ನಡೆಯಲಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಬೆಂಗಳೂರು:** ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ಇಲಾಖೆಯಿಂದ ವಿಮಾದಾರರು ಮತ್ತು ಅವರ ಕುಟುಂಬದವರಿಗೆ ದ್ವಿತೀಯ ಹಂತದ ಚಿಕಿತ್ಸೆಯನ್ನು ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ಇಲಾಖೆಯ ಜೊತೆ ಖಾಸಗಿ ಆಸ್ಪತ್ರೆಗಳೊಂದಿಗೆ 2024 ಡಿಸೆಂಬರ್ 01 ರಿಂದ 2026ರ ನವೆಂಬರ್ 30 ರವರೆಗೆ 2 ವರ್ಷದ ಅವಧಿಗೆ ಹೊಂದಾಣಿಕೆ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಅಕ್ಟೋಬರ್ 30 ರ ಸಂಜೆ 5.30 ರೊಳಗೆ ಸಲ್ಲಿಸಬೇಕು. ಅರ್ಜಿ ನಮೂನೆಗಳನ್ನು ಪಡೆಯಲು ಮತ್ತು ಅರ್ಜಿಗಳನ್ನು ಸಲ್ಲಿಸಲು ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ನಿರ್ದೇಶನಲಯ, ಎಸ್. ನಿಜಲಿಂಗಪ್ಪ ರಸ್ತೆ, 2ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು 560 010 ಅಥವಾ ದೂರವಾಣಿ ಸಂಖ್ಯೆ: 080-23324216 ಅಥವಾ ಜಾಲತಾಣ https://esisms.karnataka.gov.in ನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

## ಬೃಹತ್ ಜಾಗೃತಿ ಜಾಥಾ

**ಬೆಂಗಳೂರು:** ರಾಷ್ಟ್ರೀಯ ಸೇವಾ ಯೋಜನೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರುಗಳ ಸಹಯೋಗದೊಂದಿಗೆ Tobacco Free Youth Campaign 2.0 ಅಂಗವಾಗಿ ಬೃಹತ್ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಅಕ್ಟೋಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ವಿಧಾನಸೌಧದ ಗಾಂಧಿ ಪ್ರತಿಮೆಯ ಮುಂಭಾಗದಿಂದ ಶ್ರೀ ಕಂಠೀರವ ಕ್ರೀಡಾಂಗಣದವರೆಗೆ ಹಮ್ಮಿಕೊಳ್ಳಲಾಗಿದೆ. ಬೃಹತ್ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರಾದ ದಿನೇಶ್ ಗುಂಡೂರಾವ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಹಾಗೂ ಮತ್ತಿತರ ಗಣ್ಯರ ಸಮ್ಮುಖದಲ್ಲಿ 5000ಕ್ಕೂ ಹೆಚ್ಚು ಎನ್.ಎಸ್.ಎಸ್. ಸ್ವಯಂ ಸೇವಕರು / ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಡಾ. ಪ್ರತಾಪ್ ಲಿಂಗಯ್ಯ, ರಾಜ್ಯ ಎನ್. ಎಸ್. ಎಸ್. ಅಧಿಕಾರಿ, ಮೊಬೈಲ್ ಸಂಖ್ಯೆ: 9742301000 ಸಂಪರ್ಕಿಸಬಹುದಾಗಿದೆ.

## ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ಪಡೆಯಲು ಅರ್ಜಿ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ವತಿಯಿಂದ 2024-25ನೇ ಸಾಲಿನಲ್ಲಿ ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ಪಡೆಯಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ಕನಿಷ್ಠ 20ಕ್ಕಿಂತ ಹೆಚ್ಚು ಕುರಿ/ಮೇಕೆಗಳನ್ನು ಹೊಂದಿರುವ ಅರ್ಹ ಸಂಚಾರಿ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಚಾರಿ ಕುರಿಗಾರರ ಗುರುತಿನ ಚೀಟಿ ಪಡೆಯಲು, ಕನಿಷ್ಠ 20ಕ್ಕಿಂತ ಹೆಚ್ಚು ಕುರಿ/ಮೇಕೆಗಳನ್ನು ಹೊಂದಿದ್ದಲ್ಲಿ ಅರ್ಹರಿರುತ್ತಾರೆ. ಸಂಚಾರಿ ಕುರಿಗಾರರು ತಮ್ಮ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಪಶು ಚಿಕಿತ್ಸಾಲಯ/ಪಶು ಚಿಕಿತ್ಸಾಲಯ/ಪಶು ಆಸ್ಪತ್ರೆಗಳ ಪಶು ವೈದ್ಯಾಧಿಕಾರಿಗಳು/ಮುಖ್ಯ ಪಶು ವೈದ್ಯಾಧಿಕಾರಿಗಳನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಿ ನಿಗದಿತ ಅರ್ಜಿ ನಮೂನೆಯನ್ನು ಪಡೆದು ವಲಸೆ ಹೋಗುವುದಕ್ಕೆ ಸಂಬಂಧಪಟ್ಟಂತೆ ಸ್ಥಳೀಯ ಗ್ರಾಮಲೆಕ್ಕಾಧಿಕಾರಿಗಳಿಂದ ಮಹಜರ ಪ್ರಮಾಣ ಪತ್ರ ಪಡೆದು ಹಾಗೂ ಸಂಬಂಧಿಸಿದ ಪಶು ವೈದ್ಯಾಧಿಕಾರಿಗಳಿಂದ ಕನಿಷ್ಠ 20 ಕುರಿ/ಮೇಕೆಗಳನ್ನು ಹೊಂದಿರುವ ದೃಢೀಕರಣ ಪತ್ರ ಪಡೆದು ಸೂಕ್ತ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅದೇ ಪಶು ಚಿಕಿತ್ಸಾಲಯ/ಪಶು ಆಸ್ಪತ್ರೆ/ ಕಛೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಉಪ ನಿರ್ದೇಶಕರ ಕಛೇರಿ, ಬೆಂಗಳೂರು ವಿಭಾಗ, ಮೊಬೈಲ್ ಸಂಖ್ಯೆ: 9740171450 ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ ಬಾಲಕಿಯರ ವಿದ್ಯಾರ್ಥಿನಿಲಯಗಳು ಚಿಕ್ಕಬಳ್ಳಾಪುರ ಮತ್ತು ಚಿಂತಾಮಣಿ ತಾಲ್ಲೂಕು ಹಾಗೂ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯಗಳು ಗೌರಿಬಿದನೂರು ಮತ್ತು ಬಾಗೇಪಲ್ಲಿ ತಾಲ್ಲೂಕುಗಳ 2024-25ನೇ ಶೈಕ್ಷಣಿಕ ಸಾಲಿನ ಪ್ರವೇಶಕ್ಕೆ (ಪಿಯುಸಿ ಮತ್ತು ಪಿಯುಸಿ ಸಮಾನಾಂತರ ಕೋರ್ಸಿನ, ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಅರ್ಹ ವಿದ್ಯಾರ್ಥಿಗಳಿಂದ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ (ಖಊಕ ಕಠಡಿಣಚಿಟ) ಆನ್ ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ನವೆಂಬರ್ 11 ರವರೆಗೆ ವಿಸ್ತರಿಸಲಾಗಿದೆ.ವಿದ್ಯಾರ್ಥಿನಿಲಯಗಳಲ್ಲಿ ಶೇ.75ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ (ಮುಸ್ಲಿಂ, ಕ್ರೈಸ್ತ, ಜೈನ್, ಪಾರ್ಸಿ, ಬೌದ್ಧ) ಹಾಗೂ ಶೇ 25ರಷ್ಟು ಹಿಂದುಳಿದ ವರ್ಗ, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಭವನ, ಎಸ್.ಎ8, 2ನೇ ಮಹಡಿ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ. ದೂರವಾಣಿ: 08156-277049 ತಾಲ್ಲೂಕು ವಿಸ್ತರಣಾಧಿಕಾರಿಗಳು, ಸಂಬಂಧಿಸಿದ ನಿಲಯ ಪಾಲಕರು ಇವರನ್ನು ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜಭವನಕ್ಕೆ ಮಾಲ್ಡೀವ್ಸ್ ಅಧ್ಯಕ್ಷ ಭೇಟಿ

### ಆತ್ಮೀಯವಾಗಿ ಸ್ವಾಗತ ಕೋರಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ



**ಬೆಂಗಳೂರು:** ಭಾರತದ ಪ್ರವಾಸದಲ್ಲಿರುವ ಗೌರವಾನ್ವಿತ ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಜ್ಜು ಮತ್ತು ಪ್ರಥಮ ಮಹಿಳೆ ಸಾಜಿದಾ ಮೊಹಮ್ಮದ್ ಅವರು ಇಂದು ಬೆಂಗಳೂರಿಗೆ ಆಗಮಿಸಿದ್ದು, ಕರ್ನಾಟಕದ ರಾಜಭವನಕ್ಕೆ ಸೌಹಾರ್ದಯುತ ಭೇಟಿ ನೀಡಿದರು.

ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹಾಗೂ ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಜ್ಜು ಮತ್ತು ಪ್ರಥಮ ಮಹಿಳೆ ಸಾಜಿದಾ ಮೊಹಮ್ಮದ್ ಅವರನ್ನು ಹೂಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು.

ಮಾಲ್ಡೀವ್ಸ್‌ನಿಂದ ಬಂದಿರುವ ಅತಿಥಿಗಳಿಗೆ ಸ್ವಾಗತ ಕೋರಿ ಮಾತನಾಡಿದ ಗೌರವಾನ್ವಿತ ರಾಜ್ಯಪಾಲರು, ಗೌರವಾನ್ವಿತ ರಾಷ್ಟ್ರಪತಿ, ಗೌರವಾನ್ವಿತ ಉಪರಾಷ್ಟ್ರಪತಿ ಮತ್ತು ಗೌರವಾನ್ವಿತ ಪ್ರಧಾನ ಮಂತ್ರಿಯವರೊಂದಿಗಿನ ಗೌರವಾನ್ವಿತ ಮಾಲ್ಡೀವ್ಸ್ ಅಧ್ಯಕ್ಷರ ಉತ್ತೇಜಕ ಸಭೆಗಳು ಮತ್ತು ಸೌಜನ್ಯದ ಭೇಟಿಗಳು ದ್ವಿಪಕ್ಷೀಯ ಸಂಬಂಧಗಳ ಕುರಿತು ನಮ್ಮ ಎರಡು ದೇಶಗಳ ಜನರ ನಡುವಿನ ಸೌಹಾರ್ದ ಸಂಬಂಧವನ್ನು ಮತ್ತಷ್ಟು ಬಲಪಡಿಸಿದೆ ಎಂದು ಹೇಳಿದರು.

ಮಾಲ್ಡೀವ್ಸ್ ಹಿಂದೂ ಮಹಾಸಾಗರ ಪ್ರದೇಶದಲ್ಲಿ ಭಾರತದ ಪ್ರಮುಖ ಪಾಲುದಾರ ಮತ್ತು ನಿಕಟ ಸ್ನೇಹಿತ ಮತ್ತು ನೆರೆಯ ರಾಷ್ಟ್ರವಾಗಿದೆ, ಭಾರತವು ಶತಮಾನಗಳ-ಹಳೆಯ ಸಾಂಸ್ಕೃತಿಕ, ಆರ್ಥಿಕ, ವ್ಯಾಪಾರ ಮತ್ತು ಜನರ ಸಂಬಂಧಗಳನ್ನು ಹೊಂದಿದೆ. ಭಾರತದ 'ನೆರೆಹೊರೆ ಮೊದಲು' ಮತ್ತು 'ಸಾಗರ್ ವಿಷನ್' ನೀತಿಯಲ್ಲಿ ಮಾಲ್ಡೀವ್ಸ್ ಪ್ರಮುಖ ಸ್ಥಾನವನ್ನು ಹೊಂದಿದೆ. ಕರೆನ್ಸಿ ಸ್ವಾಪ್ ಸೌಲಭ್ಯದ ಸಹಿಯು ಮಾಲ್ಡೀವ್ಸ್‌ನೊಂದಿಗಿನ ನಮ್ಮ ಸ್ನೇಹ ಸಂಬಂಧಗಳಿಗೆ ಸರ್ಕಾರದ ಬಲವಾದ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಇತ್ತೀಚಿನ ದಿನಗಳಲ್ಲಿ, ವಾಯು ಸಂಪರ್ಕ ಮತ್ತು ವೀಸಾ ಸೌಲಭ್ಯಗಳ ವಿಸ್ತರಣೆಯು ನಮ್ಮನ್ನು ಪರಸ್ಪರ ಹತ್ತಿರಕ್ಕೆ ತಂದಿದೆ. ರುಪೇ ಕಾರ್ಡ್ ಅನ್ನು ಮಾಲ್ಡೀವ್ಸ್‌ನಲ್ಲಿ ಪ್ರಾರಂಭಿಸಲಾಗಿದೆ ಎಂಬುದನ್ನು ತಿಳಿದು ಸಂತೋಷವಾಗಿದೆ ಎಂದು ಹೇಳಿದರು.

ಮಾಲ್ಡೀವ್ಸ್ ಅಡ್ಡುವಿನಲ್ಲಿ ಭಾರತೀಯ ದೂತಾವಾಸ ಮತ್ತು ಬೆಂಗಳೂರಿನಲ್ಲಿ ಮಾಲ್ಡೀವ್ಸ್ ದೂತಾವಾಸವನ್ನು ತೆರೆಯುವ ಬಗ್ಗೆ ಚರ್ಚೆಗಳು ನಡೆದಿವೆ. ಈ ವಿಷಯ ಶೀಘ್ರದಲ್ಲೇ ಕಾರ್ಯರೂಪಕ್ಕೆ ಬರುತ್ತದೆ ಎಂಬ ವಿಶ್ವಾಸವಿದೆ. ಇದು ಭಾರತೀಯರಿಗೆ ಮಾಲ್ಡೀವ್ಸ್‌ಗೆ ಭೇಟಿ ನೀಡಲು ಮತ್ತು ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು ಸಹಾಯ ಮಾಡುತ್ತದೆ. ನಿಮ್ಮ ಭೇಟಿಯ ಸಮಯದಲ್ಲಿ ಪ್ರಾಜೆಕ್ಟ್‌ಗಳ ಉದ್ಘಾಟನೆ ಮತ್ತು ಹಲವಾರು ತಿಳುವಳಿಕಾ ಒಪ್ಪಂದಗಳು, ಶ್ರೇಷ್ಠತೆ, ನಮ್ಮ ಬಲವಾದ ಅಭಿವೃದ್ಧಿ ಪಾಲುದಾರಿಕೆಯನ್ನು ಪ್ರತಿಬಿಂಬಿಸುತ್ತದೆ - ಇದು ನಮ್ಮ ಆಧಾರವಾಗಿದೆ. ಇದು ದ್ವಿಪಕ್ಷೀಯ ಸಂಬಂಧಗಳ ಪ್ರಮುಖ ಆಧಾರವಾಗಿದೆ. ಘನತೆವೆತ್ತ ಅಧ್ಯಕ್ಷರು, ಅಭಿವೃದ್ಧಿ, ಸಹಕಾರ, ಸಾಮರ್ಥ್ಯ ವೃದ್ಧಿ, ವ್ಯಾಪಾರ ಮತ್ತು ವಾಣಿಜ್ಯ, ಭಾರತ-ಮಾಲ್ಡೀವ್ಸ್ ಸಂಬಂಧಗಳು ಮತ್ತಷ್ಟು ಶಕ್ತಿ ಒದಗಿಸಲಿದೆ ಎಂದು ರಾಜ್ಯಪಾಲರು ತಿಳಿಸಿದರು.

ಮಾಲ್ಡೀವ್ಸ್ ಅಧ್ಯಕ್ಷರೊಂದಿಗೆ ಒಂದು ವ್ಯಾಪಾರ ನಿಯೋಗ ಬಂದಿರುವುದು ಸಂತೋಷಕರ. ಬೆಂಗಳೂರು ಭಾರತದ ಐಟಿ ಕೇಂದ್ರವಾಗಿದೆ. ಬೆಂಗಳೂರಿನಲ್ಲಿ ವ್ಯಾಪಾರ ಸಮುದಾಯದೊಂದಿಗಿನ ನಿಮ್ಮ ಸಂವಹನವು ನಮ್ಮ ಆರ್ಥಿಕ ಮತ್ತು ವಾಣಿಜ್ಯ ಸಂಬಂಧಗಳನ್ನು ಇನ್ನಷ್ಟು ಬಲಪಡಿಸುತ್ತದೆ ಎಂಬ ನಂಬಿಕೆ ಇದೆ. ಗೌರವಾನ್ವಿತರೇ, ಭಾರತಕ್ಕೆ ಭೇಟಿ ನೀಡಿದ್ದಕ್ಕಾಗಿ ಮತ್ತು ನಮ್ಮ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸಲು ನಿಮ್ಮ ಆಲೋಚನೆಗಳನ್ನು ಹಂಚಿಕೊಂಡಿದ್ದಕ್ಕಾಗಿ ನಿಮಗೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಮಾಲ್ಡೀವ್ಸ್‌ನ ಜನರ ಪ್ರಗತಿ ಮತ್ತು ಸಮೃದ್ಧಿಗೆ ನಾವು ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡುತ್ತೇವೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಮಾಲ್ಡೀವ್ಸ್ ಅಧ್ಯಕ್ಷರು ಮತ್ತು ಪ್ರಥಮ ಮಹಿಳೆ ನೇತೃತ್ವದ ಮಾಲ್ಡೀವ್ಸ್‌ನ ನಿಯೋಗ ಬೆಂಗಳೂರಿಗೆ ಭೇಟಿ ನೀಡಿರುವುದು ಹಾಗೂ ಮಾಲ್ಡೀವ್ಸ್ ಪ್ರಥಮ ಮಹಿಳೆ ಬೆಂಗಳೂರಿನಲ್ಲಿ ವಿದ್ಯಾರ್ಥಿಯಾಗಿದ್ದರು ಎಂಬುದು ತಿಳಿದು ಸಂತೋಷವಾಗಿದೆ. ಮಾಲ್ಡೀವ್ಸ್ ಸರ್ಕಾರವು ಬೆಂಗಳೂರಿನ ಪ್ರಮುಖ ಐಟಿ ಉದ್ಯಮದೊಂದಿಗೆ ಸಹಭಾಗಿತ್ವವನ್ನು ಹೊಂದಲು ಆಸಕ್ತಿ ಹೊಂದಿದೆ ಎಂಬುದನ್ನು ಅರ್ಥಮಾಡಿಕೊಳ್ಳಲಾಗಿದೆ. ಬೆಂಗಳೂರು ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯುತ್ತೇವೆ ಮತ್ತು ಸ್ಟಾರ್ಟ್-ಅಪ್‌ಗಳು, ಕೃತಕ ಬುದ್ಧಿಮತ್ತೆ, ಜಾಗತಿಕ ಸಾಮರ್ಥ್ಯ ನಿರ್ಮಾಣ ಕೇಂದ್ರಗಳು ಮತ್ತು ಇನ್ನೋವೇಶನ್ ಹಬ್‌ಗಾಗಿ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿದ್ದೇವೆ ಎಂದು ಮಾಹಿತಿ ನೀಡಿದರು.

ಮಾಲ್ಡೀವ್ಸ್ ಅಧ್ಯಕರಾದ ಡಾ. ಮೊಹಮ್ಮದ್ ಮುಯಿಜ್ಜು ಮಾತನಾಡಿ, ಭಾರತಕ್ಕೆ ಭೇಟಿ ನೀಡಲು ಆಹ್ವಾನ ನೀಡಿದಂತಹ ಗೌರವಾನ್ವಿತ ರಾಷ್ಟ್ರಪತಿ, ಪ್ರಧಾನಿ ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಹಾಗೆಯೇ, ಬೆಂಗಳೂರಿನಲ್ಲಿ ಆತ್ಮೀಯವಾಗಿ ಬರಮಾಡಿಕೊಂಡು, ಆತಿಥ್ಯ ನೀಡಿದ ರಾಜ್ಯಪಾಲರಿಗೆ ಹಾಗೂ ಮುಖ್ಯಮಂತ್ರಿಗಳಿಗೂ ಧನ್ಯಾವಾದಗಳನ್ನು ಸಲ್ಲಿಸುತ್ತೇನೆ. ಭಾರತದಲ್ಲಿ ಬಹಳ ಹೆಸರು ಮಾಡಿರುವ ಕರ್ನಾಟಕ ರಾಜ್ಯಕ್ಕೆ ಅದರಲ್ಲೂ ಬೆಂಗಳೂರಿಗೆ ಭೇಟಿ ನೀಡಿರುವುದು ಬಹಳ ಖುಷಿಯಾಗಿದೆ. ಕರ್ನಾಟಕದಲ್ಲಿ ಮಾಲ್ಡೀವ್ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಸಹಕಾರ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಕಾರ್ಯದರ್ಶಿಗಳಾದ ಸತ್ಯವತಿ.ಜಿ ಸೇರಿದಂತೆ ' ಗಣ್ಯರು ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ವಿಜಯಪುರ ಪಟ್ಟಣದ ಗಾಂಧಿಚೌಕದಲ್ಲಿ ನೆಲೆಸಿರುವ ಶ್ರೀ ಹರಿಹರ ಸಂಗಮ ಸುಕ್ಷೇತ್ರ, ಶ್ರೀ ನಗರೇಶ್ವರ ಸ್ವಾಮಿ ದೇವಾಲಯದಲ್ಲಿ ನವರಾತ್ರಿ ಉತ್ಸವ 2024 ರ ಶರನ್ನವರಾತ್ರಿಯ ಆರನೆಯ ದಿನದ ಪೂಜೆಯ ಅಂಗವಾಗಿ ಶ್ರೀ ಅನ್ನಪೂರ್ಣಾಂಭ ಅಮ್ಮನವರಿಗೆ ಶ್ರೀ ಮೀನಾಕ್ಷಿ ಅಲಂಕಾರದೊಂದಿಗೆ ಪೂಜೆಯನ್ನು ಪ್ರಮೀಳಾ ಅಶ್ವಥಪ್ಪ ಹಾಗೂ ಸೌಮ್ಯಾ ವಿ. ಕೇಶವ ಮತ್ತು ಕುಟುಂಬದವರು ಏರ್ಪಡಿಸಿದ್ದರು.

## ಸಂಚಾರಿ/ವಲಸೆ ಕುರಿಗಾಹಿಗಳ ಗುರುತಿನ ಚೀಟಿ ಪಡೆಯಲು ಅರ್ಜಿ ಆಹ್ವಾನ

**ಮೈಸೂರು:** ಪಶುಪಾಲನೆ ಮತು ಪಶು ವೈದ್ಯಕೀಯ ಸೇವಾ ಇಲಾಖೆ ಹಾಗೂ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ 2024-25 ನೇ ಸಾಲಿನ ಸಂಚಾರಿ/ ವಲಸೆ ಕುರಿಗಾಹಿಗಳಿಗೆ ಗುರುತಿನ ಚೀಟಿ ಪಡೆಯಲು ಕನಿಷ್ಠ 20 ಕುರಿಗಳನ್ನು ಹೊಂದಿರುವ ಸಂಚಾರಿ/ ವಲಸೆ ಹೋಗುವ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಚಾರಿ/ವಲಸೆ ಕುರಿಗಾಹಿಗಳು ಗುರುತಿನ ಚೀಟಿಯನ್ನು ಪಡೆಯಲು ತಮ್ಮ ವ್ಯಾಪ್ತಿಗೆ ಬರುವ ಸ್ಥಳೀಯ ಪಶುವೈದ್ಯಾಧಿಕಾರಿಗಳಿಂದ ಮಾಹಿತಿಯೊಂದಿಗೆ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿ ಹಾಗೂ ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 31 ರೊಳಗೆ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕರು(ಆಡಳಿತ) ರವರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೈಸೂರು ಜಿಲ್ಲೆಯ 09 ತಾಲ್ಲೂಕುಗಳ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು(ಆಡಳಿತ), ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಪಶು ಆಸ್ಪತ್ರೆ ಹಾಗೂ ಸಹಾಯಕ ನಿರ್ದೇಶಕರ ಕಛೇರಿ ಅಥವಾ ದೂ.ಸಂ: 9845623137 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ. ದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಂದ ದೂರು ಸ್ವೀಕಾರ

**ಮೈಸೂರು:** ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳ ವತಿಯಿಂದ ಅಕ್ಟೋಬರ್ 16 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಸರಗೂರು ತಾಲ್ಲೂಕು ತಹಶೀಲ್ದಾರ್‌ರವರ ಕಛೇರಿಯ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಬಗ್ಗೆ ಸಂಬಂಧಪಟ್ಟ ಸಾರ್ವಜನಿಕ/ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಕ್ರಮಬದ್ಧವಾಗಿ ಭರ್ತಿ ಮಾಡಿದ ದೂರುಗಳನ್ನು ಅಗತ್ಯ ದಾಖಲಾತಿಗಳೊಡನೆ ನೀಡಬಹುದಾಗಿದ್ದು, ಸಾರ್ವಜನಿಕರು ಕರ್ತವ್ಯ ಲೋಪವೆಸಗುವ ಭ್ರ?ಟ ಸರ್ಕಾರಿ ಅಧಿಕಾರಿ / ನೌಕರರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದು ಎಂದು ಮೈಸೂರು ವಿಭಾಗದ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಮೈಸೂರು ಜಿಲ್ಲಾ ಪ್ರವಾಸ

**ಮೈಸೂರು:** ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ, ಮೈಕ್ರೋ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಅವರು ಅಕ್ಟೋಬರ್ 10 ಮತ್ತು 11 ರಂದು ಮೈಸೂರು ಜಿಲ್ಲಾ ಪ್ರವಾಸವನ್ನು ಕೈಗೊಂಡಿದ್ದು, ಅಂದು ಮಧ್ಯಾಹ್ನ 3.30 ಗಂಟೆಗೆ ಮೈಸೂರಿಗೆ ಆಗಮಿಸುವರು. ಸಂಜೆ 4 ಗಂಟೆಗೆ ಚಾಮುಂಡಿ ಬೆಟ್ಟದ ಮೆಟ್ಟಿಲ ಮೂಲಕ ತೆರಳಿ ಸಂಜೆ 5.15 ಕ್ಕೆ ಚಾಮುಂಡೇಶ್ವರಿ ದೇವಿಯ ದರ್ಶನ ಮಾಡಲಿದ್ದಾರೆ. 5.30 ಕ್ಕೆ ಮೈಸೂರಿನ ರಾಡಿಸನ್ ಬ್ಲೂ ಹೋಟೆಲ್ ಗೆ ತೆರಳಿ ವಾಸ್ತವ್ಯ ಹೂಡಲಿದ್ದಾರೆ. ಅಕ್ಟೋಬರ್ 11 ರಂದು ಬೆಳಗ್ಗೆ 8.30 ಗಂಟೆಗೆ ಅರಮನೆ ಆವರಣದಲ್ಲಿ ಮಾವುತರಿಗೆ ಉಪಹಾರವನ್ನು ನೀಡಲಿದ್ದಾರೆ ಎಂದು ಖಾಸಗಿ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560099.
ದೂ.: 080-27835122 ಫ್ಯಾಕ್ಸ್ : 080-27836569 www.anekal.tpa.gov.in www.e-vinyasa.kar.nic.in

ಸಂಖ್ಯೆ: ಆಯೋಪ್ರಾ/ಭೂ.ಉ.ನಿ/10/2024-25 ದಿನಾಂಕ: 09.10.2024

### ಪ್ರಕಟಣೆ

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69ರ ತಿದ್ದುಪಡಿ ಕಾಯ್ದೆಯಂತೆ)**

ಆನೇಕಲ್ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 151 ಬಿಎಂಆರ್ 2013, ಬೆಂಗಳೂರು ದಿನಾಂಕ: 03.09.2014ರಂದು ಅನುಮೋದನೆ ನೀಡಲಾಗಿದ್ದು, ಐದು ವರ್ಷಗಳ ಅವಧಿಯು ಈಗಾಗಲೇ ಪೂರ್ಣಗೊಂಡಿದ್ದು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69(2) ರನ್ವಯ ಮಹಾಯೋಜನೆಯಲ್ಲಿ ಸಾರ್ವಜನಿಕ ಉಪಯೋಗಗಳಿಗೆ ಕಾಯ್ದಿರಿಸಿರುವ ಪ್ರದೇಶದ ಭೂ ಉಪಯೋಗವು ರದ್ದಾಗುತ್ತದೆ. ಆದ್ದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69ರನ್ವಯ ಈ ಕೆಳಕಂಡ ಭೂ ಉಪಯೋಗ ನಿಗದಿಪಡಿಸಲು ಅರ್ಜಿದಾರರು ಕೋರಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69(3)ರ ಅಡಿಯಲ್ಲಿ ಈ ಕೆಳಕಂಡಂತೆ ಭೂ ಉಪಯೋಗ ನಿಗದಿಪಡಿಸುವ ಸಂಬಂಧ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ **ಸದಸ್ಯ-ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್** ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮ | ಸ. ನಂ. | ವಿಸ್ತೀರ್ಣ ಎ/ಗುಂ | ಅನುಮೋದಿತ ಮಹಾಯೋಜನೆ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1 | ಶ್ರೀ ಪಿ. ಕೃಷ್ಣಮೂರ್ತಿ ಬಿನ್ ಲೇ. ಪಿಳ್ಳಪ್ಪ | ಆನೇಕಲ್ | ಕಸಬಾ | ಸಬ್‌ಮಂಗಲ | 89/2ಎ1 (ಹಳೇ ಸ.ನಂ. 89/2 | 0-18.12 | ಸಾರಿಗೆ ಮತ್ತು ಸಂಪರ್ಕ | ವಸತಿ |
| 2 | | | | | 89/6 (ಹಳೇ ಸ.ನಂ. 89/2ಎ1) | 0-9.04 | | |

ಸಹಿ/-,
ಸದಸ್ಯ-ಕಾರ್ಯದರ್ಶಿ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್

ವಾಸಾಸಂಇ/ವಾಪ್ರ/ಎಲ್‌ಸಿ/2446/2024-25

# 17ರಂದು ವಾಲ್ಮೀಕಿ ಜಯಂತಿ ಅಚ್ಚುಕಟ್ಟು ಆಚರಣೆಗೆ ತೀರ್ಮಾನ



**ಕೋಲಾರ:** ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ವಾಲ್ಮೀಕಿ ಭವನದ ಜಾಗದ ಒತ್ತುವರಿ ತೆರವು ವಿಚಾರದ ಸಂಬಂಧವಾಗಿ ಎರಡು ಗುಂಪುಗಳ ನಡುವೆ ಉಂಟಾದ ಭಿನ್ನಾಭಿಪ್ರಾಯದಿಂದ ಗೊಂದಲ ಉಂಟಾಗಿ ಒಂದು ಗುಂಪು ಸಭೆಯನ್ನು ಬಹಿಷ್ಕರಿಸಿ ನಿರ್ಗಮಿಸಿತು ಮತ್ತೊಂದು ಗುಂಪು ಸಭೆಯಲ್ಲಿ ಭಾಗವಹಿಸಿ 17 ರಂದು ವಾಲ್ಮೀಕಿ ಜಯಂತಿಯನ್ನು ಜಿಲ್ಲಾಡಳಿತದ ಶಿಷ್ಟಾಚಾರದ ಪ್ರಕಾರ ಯಶಸ್ವಿಯಾಗಿ ನೆರವೇರಿಸಲು ತೀರ್ಮಾನಿಸಿತು.

ಜಿಲ್ಲಾಧಿಕಾರಿ ಅಕ್ರಂಪಾಷ ಮಾತನಾಡಿ ಈಗ ನಾವು ಪೂರ್ವಭಾವಿ ಸಭೆ ಕರೆದಿರುವುದು ವಾಲ್ಮೀಕಿ ಜಯಂತಿ ಸಿದ್ಧತೆ ಬಗ್ಗೆ ಪೂರ್ವ ಸಭೆಯಾಗಿದೆ. ಇದರಲ್ಲಿ ವಾಲ್ಮೀಕಿ ಜಯಂತಿ ಬಗ್ಗೆ ಮಾತ್ರ ಸಲಹೆಗಳನ್ನು ನೀಡಬೇಕು. ಒತ್ತುವರಿ ತೆರವು ವಿಚಾರವಾಗಿ ವಾಲ್ಮೀಕಿ ಜಯಂತಿ ಮುಗಿದ ನಂತರ ಇನ್ನೊಂದು ದಿನ ಪ್ರತ್ಯೇಕ ಸಭೆ ಕರೆಯೋಣ ಎಂದರು.

ನಗರಸಭೆ ಸದಸ್ಯ ಅಂಬರೀಶ್, ಬಾಲಗೋವಿಂದ, ವೆಂಕಟರಾಮ್, ದಲಿತ ಮುಖಂಡರಾದ ವಿಜಯಕುಮಾರ್, ಪಂಡಿತ್ ಮುನಿವೆಂಕಟಪ್ಪ, ಡಾ.ಚಂದ್ರಶೇಖರ್ ಮುಂತಾದವರು ಜಿಲ್ಲಾಡಳಿತ ಪರವಾಗಿ ಬೆಂಬಲಕ್ಕೆ ನಿಂತು ಸಭೆಯು ಮುಂದುವರೆಯಲು ಸಹಕಾರ ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣಾಧಿಕಾರಿ ಶ್ರೀನಿವಾಸ್ ಅವರು ಸಭೆಯಲ್ಲಿ ವಾಲ್ಮೀಕಿ ಜಯಂತಿಯ ಅಜೆಂಡವನ್ನು ಮಂಡಿಸಿ ಪ್ರತಿವರ್ಷದಂತೆ ಈ ವರ್ಷವು 17ರಂದು ಬೆಳಗ್ಗೆ 9 ಗಂಟೆಗೆ ನಗರದ ವಾಲ್ಮೀಕಿ ವೃತ್ತದಲ್ಲಿ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ ಸಮರ್ಪಿಸಿ ವಾಲ್ಮೀಕಿ ಭಾವಚಿತ್ರಗಳನ್ನು ಹೊತ್ತ ಪಲ್ಲಕ್ಕಿಗಳ ಮೆರವಣಿಗೆಗಳಿಗೆ ಚಾಲನೆ ನೀಡಲಾಗುವುದು. ಪ್ರತಿ ಗ್ರಾಮ ಪಂಚಾಯಿತಿ ಹಾಗೂ ವಿವಿಧ ಸಂಘಟನೆಗಳಿಂದ ಪಲ್ಲಕ್ಕಿಗಳು ತರಲಾಗುವುದು. ಜಯಂತಿ ಸಂದರ್ಭದಲ್ಲಿ ತಿಂಡಿ, ಊಟ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಳು, ವೇದಿಕೆ ವ್ಯವಸ್ಥೆ, ಅಲಂಕಾರಗಳು, ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ, ಮೆರವಣಿಗೆಯಲ್ಲಿ ಭಾಗವಹಿಸಿದ್ದ ಸ್ತಬ್ಧ ಚಿತ್ರಗಳಿಗೆ ನೆನಪಿನ ಕಾಣಿಕೆ ನೀಡುವುದು ಸಂಬಂಧಿಸಿದಂತೆ ವಿವರಿಸಿದರು.

ನಂತರ ಜಿಲ್ಲಾಧಿಕಾರಿಗಳು ಮಾತನಾಡಿ ನಾನು ಬಂದ ನಂತರ ಇದು ಎರಡನೇ ವಾಲ್ಮೀಕಿ ಜಯಂತಿಯಾಗಿದೆ. ಕಳೆದ ವರ್ಷವು ವಾಲ್ಮೀಕಿ ಭವನದ ಒತ್ತುವರಿ ತೆರವು ಆಗುವವರೆಗೆ ಉದ್ಘಾಟನೆ ಮಾಡಲು ಬಿಡುವುದಿಲ್ಲ ಎಂದು ಹಕ್ಕೆ ಬಿದ್ದಾಗ ಸಮಾಧಾನ ಪಡಿಸಿ ಉದ್ಘಾಟನೆ ನೆರವೇರಿಸಲಾಯಿತು ಈಗ ಆ ಪ್ರಕರಣ ನ್ಯಾಯಾಲಯದಲ್ಲಿದೆ, ನ್ಯಾಯಾಲಯದ ಆದೇಶವನ್ನು ಎಲ್ಲರೂ ಪಾಲಿಸೋಣ ಅಗತ್ಯವಾದರೆ ಪ್ರತ್ಯೇಕ ವಕೀಲರನ್ನು ನೇಮಿಸೋಣ,ಕಾರ್ಯಕ್ರಮದಲ್ಲಿ ಯಾರಿಗೂ ಧಕ್ಕೆಯಾಗದಂತೆ ಆಚರಿಸೋಣ. ಯಾರಾದರೂ ಕಾರ್ಯಕ್ರಮಗಳಿಗೆ ಅಡ್ಡಿ ಪಡಿಸಿದರೆ ಎಸ್.ಪಿ. ಅವರು ಕಾನೂನು ಕ್ರಮ ಜರುಗಿಸಲಿದ್ದಾರೆ ಎಂದರು. ನಗರಸಭಾ ಸದಸ್ಯ ಅಂಬರೀಶ್ ಮಾತನಾಡಿ ವಾಲ್ಮೀಕಿ ಜಯಂತಿಗೆ ಪ್ರತಿವರ್ಷ ಅಡ್ಡಿ ಪಡಿಸುವುದು ಕೆಲವರಿಗೆ ಅಭ್ಯಾಸವಾಗಿದೆ. ಅದರೆ ನಾವುಗಳು ಜಿಲ್ಲಾಡಳಿತ ಪರವಾಗಿ ಇರುತ್ತೇವೆ. ಪ್ರತಿ ಪಂಚಾಯಿತಿಯಿಂದಲೂ ಪಲ್ಲಕ್ಕಿಗಳು ಬರಲು ಸೂಚಿಸಲಾಗಿದೆ ಎಂದರು.

ಮಾಲೂರಿನ ವೆಂಕಟರಾಮ್ ಮಾತನಾಡಿ ವಾಲ್ಮೀಕಿ ಭವನವನ್ನು ಸರ್ಕಾರವು 5 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಿ ಕೊಟ್ಟಿರುವುದನ್ನು ಸದ್ಬಳಸಿ ಕೊಳ್ಳದ ಸಣ್ಣ ಪುಟ್ಟ ಕಾರಣಗಳಿಗೆ ಮುನಿಸಿಕೊಂಡು ಬಳಸಿ ಕೊಳ್ಳದೆ ಇರುವುದು ಸಮಂಜಸವಲ್ಲ ಯಾವ ತಾಲ್ಲೂಕಿನಲ್ಲಿ ಆಚರಿಸುವುದಿಲ್ಲವೋ ಅವರುಗಳು ಜಿಲ್ಲಾ ಕೇಂದ್ರದ ಕಾರ್ಯಕ್ರಮದಲ್ಲಿ ಕೈ ಜೋಡಿಸ ಬೇಕೆಂದು ಮನವಿ ಮಾಡಿದರು, ದಲಿತ ಮುಖಂಡ ವಿಜಯ ಕುಮಾರ್ ಮಾತನಾಡಿ ಯಾವುದೇ ಕಾರಣಕ್ಕೂ ಸಂಘಟನೆಗಳು ವಿಭಜನೆಯಾಗದಂತೆ ಒಗ್ಗಟ್ಟನ್ನು ಕಾಪಾಡಿ ಕೊಳ್ಳಬೇಕೆಂದು ಸಲಹೆ ನೀಡಿದರು,

ಪಂಡಿತ್ ಮುನಿವೆಂಕಟಪ್ಪ ಮಾತನಾಡಿ ಎಸ್.ಸಿ.ಎಸ್ .ಟಿ.ಗಳು ಒಂದಾಗಿ ಜಿಲ್ಲಾಡಳಿತಕ್ಕೆ ಬಲತುಂಬುವ ಕೆಲಸ ಮಾಡಬೇಕು, ಅಪ್ಪ ಅಮ್ಮ ಜಗಳದಲ್ಲಿ ಕೂಸು ಬಡವಾದಂತೆ ಸಮುದಾಯಕ್ಕೆ ವಂಚನೆಯಾಗುವಂತಾದು ಎಂದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್.ಬಿ. ಅಪರ ಜಿಲ್ಲಾಧಿಕಾರಿ ಮಂಗಳಾ ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ಬೆಂ.ಗ್ರಾ. ಜಿಲ್ಲೆ: ಒಂದು ವರ್ಷದ ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2024-25ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ಪತ್ರಿಕೋದ್ಯಮ ಪದವೀಧರರು ವೃತ್ತಿಯಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ 12 ತಿಂಗಳ ಅಪ್ರೆಂಟಿಸ್ ತರಬೇತಿಯನ್ನು ಹಮ್ಮಿಕೊಂಡಿದ್ದು ಅರ್ಹ ಪತ್ರಿಕೋದ್ಯಮ ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸುತ್ತಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಚೇರಿಯಲ್ಲಿ ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪಡೆದಿರುವ ಪರಿಶಿಷ್ಟ ಜಾತಿಗೆ ಸೇರಿದ, ಇಬ್ಬರು ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಪ್ರತಿ ಅಪ್ರೆಂಟಿಸ್ ಮಾಹೆಯಾನ ರೂ.15000/- ಗಳ ಸ್ಟೈಫಂಡ್(ಗೌರವ ಸಂಭಾವನೆ) ನೀಡಲಾಗುವುದು.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದಂದು ಅಭ್ಯರ್ಥಿಗಳ ವಯಸ್ಸು 35 ವರ್ಷದೊಳಗಿರಬೇಕು. ಅರ್ಜಿಯೊಂದಿಗೆ ಆಧಾರ್, ಎಸ್. ಎಸ್. ಎಲ್.ಸಿ ಅಂಕಪಟ್ಟಿ, ಪದವಿ ಮತ್ತು ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ ಹಾಗೂ ಇನ್ನಿತರ ಪೂರಕ ದಾಖಲೆಗಳನ್ನು ತ್ರಿ-ಪ್ರತಿಯಲ್ಲಿ 2024 ರ ಅಕ್ಟೋಬರ್ 28 ರೊಳಗಾಗಿ ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ನಂ.17, ಭಗವಾನ್ ಮಾಹಾವೀರ ರಸ್ತೆ, ವಾರ್ತಾ ಸೌಧ, 2ನೇ ಮಹಡಿ, ಇನ್ಫೆಂಟ್ರಿ ರಸ್ತೆ, ಬೆಂಗಳೂರು-560001 ಗೆ ಸಲ್ಲಿಸುವುದು.

ಆಸಕ್ತರು ಅರ್ಹತೆಗಳು, ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಮೇಲೆ ತಿಳಿಸಿರುವ ಇಲಾಖೆ ಕಚೇರಿಯ ಇ-ಮೇಲ್ ruralinformation@gmail.com ಅನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಲ್ಡೀವ್ಸ್ ಅಧ್ಯಕ್ಷರಿಗೆ ಸ್ವಾಗತ

**ಬೆಂಗಳೂರು ಗ್ರಾಮಾಂತರ:** ಮಾಲ್ಡೀವ್ಸ್ ಗಣರಾಜ್ಯದ ಅಧ್ಯಕ್ಷರಾದ ಗೌರವಾನ್ವಿತ ಡಾ. ಮೊಹಮ್ಮದ್ ಮುಯಿಜ್ಜು ಮತ್ತು ಪ್ರಥಮ ಮಹಿಳೆ ಶ್ರೀಮತಿ ಸಾಜಿದಾ ಮೊಹಮ್ಮದ್ ಹಾಗೂ ಅವರ ನಿಯೋಗ ಬೆಂಗಳೂರಿನ ಭೇಟಿಗಾಗಿ ಬುಧವಾರದಂದು ನವದೆಹಲಿಯಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದರು. ಮಾಲ್ಡೀವ್ಸ್ ಗಣರಾಜ್ಯದ ಗೌರವಾನ್ವಿತ ಅಧ್ಯಕ್ಷರನ್ನು ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರು ಆತ್ಮೀಯವಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಇಂಡಿಯಾ ಮಾಲ್ಡೀವ್ಸ್ ಹೈ ಕಮಿಷನರ್ ಮುನು ಮಹವರ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಕಾರ್ಯದರ್ಶಿ ಸತ್ಯವತಿ ಜಿ., ಬೆಂಗಳೂರು ನಗರ ಪೋಲೀಸ್ ಆಯುಕ್ತರಾದ ಬಿ.ದಯಾನಂದ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಡಾ. ಎನ್. ಶಿವಶಂಕರ್ ಸೇರಿದಂತೆ ಗಣ್ಯರು, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಶ್ರೀ ರಂಭಾಪುರಿ ಜಗದ್ಗುರುಗಳ ಅಭಿಮತ

# ತಾನು ಎಲ್ಲರಿಗಾಗಿ ಅನ್ನುವುದೇ ಧರ್ಮ

**ಮಾನವ ಧರ್ಮ ಮಂಟಪ-ಅಬ್ಬಿಗೇರಿ-**

ಧರ್ಮ ಅರ್ಥ ಕಾಮ ಮೋಕ್ಷಗಳೆಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸದಿದ್ದಲ್ಲಿ ಮಾನವ ಜೀವನ ವ್ಯರ್ಥವಾಗಿ ಹೋಗುತ್ತದೆ. ಅಂತರಂಗ ಬಹಿರಂಗ ಶುದ್ಧಿಗೆ ವೀರಶೈವ ಧರ್ಮ ಆದ್ಯತೆಯನ್ನು ಕೊಟ್ಟಿದೆ. ತಾನು ಎಲ್ಲರಿಗಾಗಿ ಅನ್ನುವುದು ನಿಜವಾದ ಧರ್ಮ. ಎಲ್ಲರೂ ತನಗಾಗಿ ಅನ್ನುವುದು ಅಧರ್ಮವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಏಳನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಧುನಿಕ ಯುಗದಲ್ಲಿ ಪ್ರಗತಿಪರ ವಿಚಾರ ಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ದೇಶ ಮತ್ತು ಧರ್ಮ ಮಾನವನ ಎರಡು ಕಣ್ಣು ಇದ್ದ ಹಾಗೆ. ಕ್ರಿಯಾಶೀಲ ಬದುಕು ಜೀವನದ ಶ್ರೇಯಸ್ಸಿಗೆ ಕಾರಣವಾಗುತ್ತದೆ. ಜಾತಿ ಜನಾಂಗಳ ಗಡಿ ಮೀರಿ ಮಾನವೀಯ ಉದಾತ್ತ ಮೌಲ್ಯಗಳೊಂದಿಗೆ ಬಾಳಬೇಕೆಂಬುದನ್ನು ಎಲ್ಲರೂ ಅರಿಯಬೇಕು. ಬಿತ್ತಿದ ಬೀಜಕ್ಕೆ ನೀರು ಗೊಬ್ಬರ ಎಷ್ಟು ಮುಖ್ಯವೋ ಅಷ್ಟೇ ನೀತಿಗೆ ಧರ್ಮವೂ ಅವಶ್ಯಕವಾಗಿದೆ. ಪರಿಶುದ್ಧ ಮತ್ತು ಪವಿತ್ರವಾದ ಜೀವನ ರೂಪಿತಗೊಳ್ಳಲು ಸತ್ಯ ಮತ್ತು ಪ್ರಾಮಾಣಿಕತೆ ಬೇಕು. ಮನುಷ್ಯನ ಶಾಂತಿ ನೆಮ್ಮದಿಗೆ ತತ್ವ ಸಿದ್ಧಾಂತಗಳು ಮೂಲ ನೆಲೆಯಾಗಿವೆ. ಕಾಯಕ ಮತ್ತು ದಾಸೋಹದ ಮೂಲಕ ಸಾಮಾಜಿಕ ಸತ್ಕ್ರಾಂತಿ ಎಸಗಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಶಿವಾಗಮಗಳಲ್ಲಿ ವೀರಶೈವ ಧರ್ಮದ ಮೂಲ ಬೇರುಗಳನ್ನು ಕಾಣಬಹುದು. ವೀರಶೈವ ಧರ್ಮ ವೃಕ್ಷದ ಬೇರು ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರಾದರೆ ಶಿವಶರಣರು ಆ ವೃಕ್ಷದ ಹೂ ಹಣ್ಣು ಇದ್ದಂತೆ. ಧರ್ಮದ ದೋಣಿಗೆ ರಂಧ್ರ ಕೊರೆಯುವ ಕೆಲಸವನ್ನು ಯಾರೂ ಮಾಡಬಾರದು. ಅಖಂಡತೆಗೆ ಇರುವ ಬೆಲೆ ಒಡಕಿಗೆ ಸಿಗಲಾರದೆಂಬ ಸತ್ಯವನ್ನು ಅರಿತು ಬಾಳಬೇಕಾಗುತ್ತದೆ. ನವರಾತ್ರಿಯ ಏಳನೇ ದಿನ ಕಾಳರಾತ್ರಿ ಹೆಸರಿನಲ್ಲಿ ದೇವಿಯನ್ನು ಆರಾಧಿಸುತ್ತಾರೆ. ಭೂತ ಪ್ರೇತಾತ್ಮ ಮತ್ತು ಋಣಾತ್ಮಕ ಶಕ್ತಿಯನ್ನು ನಾಶ ಮಾಡುವ ಅದ್ಭುತ ಶಕ್ತಿಯಿದೆ. ಈ ದೇವಿ ಆರಾಧನೆಯಿಂದ ಆಪತ್ತು ಸಂಕಟಗಳು ದೂರವಾಗಿ ಜ್ಞಾನ ಶಕ್ತಿ ಮತ್ತು ಸಂಪತ್ತು ಕರುಣಿಸುತ್ತಾಳೆ ಎಂದರು.

ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ.ವಿಜಯೇಂದ್ರ ಮಾತನಾಡಿ ಜನರ ಮನೆ ಮನಗಳಲ್ಲಿ ಅಡಗಿರುವ ದುಷ್ಟ ದುರ್ಗುಣಗಳನ್ನು ನಾಶ ಮಾಡಿ ಶಿಷ್ಟ ಸಂಸ್ಕೃತಿ ಬೆಳೆಸುವುದೇ ಗುರು ಪೀಠಗಳ ಧ್ಯೇಯವಾಗಿದೆ. ಸಮರ ಜೀವನವನ್ನು ಅಮರ ಜೀವನದೆಡೆಗೆ ಕರೆದೊಯ್ಯುವುದೇ ಗುರು ಪೀಠಗಳ ಧ್ಯೇಯವಾಗಿದೆ. ಧರ್ಮ ಮತ್ತು ಧರ್ಮಾಚರಣೆ ಮರೆತರೆ ಅಪಾಯ



ತಪ್ಪಿದ್ದಲ್ಲ. ಶ್ರೀ ರಂಭಾಪುರಿ ಜಗದ್ಗುರುಗಳು ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಸದಾ ಶ್ರಮಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವೆಂದರು.

ಉಪನ್ಯಾಸ: ಸಂಸ್ಕೃತಿ ಚಿಂತಕ ಮೈಸೂರಿನ ಎ.ಆರ್. ರಘುರಾಮ್ ಮಾತನಾಡಿ ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ-ರಾಷ್ಟ್ರ ಪ್ರಜ್ಞೆ ಬೆಳೆಸುವ ನಿಟ್ಟಿನಲ್ಲಿ ಮಹತ್ಕಾರ್ಯವಾಗಬೇಕು. ಯುವ ಜನಾಂಗ ಧರ್ಮದ ದಾರಿಯಲ್ಲಿ ನಡೆದರೆ ಈ ದೇಶದ ಅಮೂಲ್ಯ ಸಂಪತ್ತು ಅವರಾಗುತ್ತಾರೆ. ಯುವ ಶಕ್ತಿ ದೇಶದ ಶಕ್ತಿ ಅಷ್ಟೇ ಅಲ್ಲ ಆಸ್ತಿಯಾಗಿದ್ದಾರೆ. ಇಂಥ ಸಮಾರಂಭಗಳ ಮೂಲಕ ಯುವ ಜನಾಂಗವನ್ನು ಸನ್ಮಾರ್ಗದಲ್ಲಿ ತರಲು ಸಾಧ್ಯವಾಗುವುದೆಂದರು.

ಮೈಸೂರು ಅರಮನೆ ಜಪದಕಟ್ಟೆಮಠದ ಡಾ||ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯರು ನೇತೃತ್ವ ವಹಿಸಿ ಮಾತನಾಡಿ ಹುಟ್ಟು ಎಷ್ಟು ಸಹಜವೋ ಅಷ್ಟೇ ಹುಟ್ಟಿದ ಮನುಷ್ಯನಿಗೆ ಮರಣ ನಿಶ್ಚಿತ. ಈ ಹುಟ್ಟು ಸಾವುಗಳ ಮಧ್ಯದ ಬದುಕು ಸಮೃದ್ಧಿಗೊಳಿಸಿಕೊಳ್ಳುವುದು ಅವರವರ ಜವಾಬ್ದಾರಿಯಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ಧರ್ಮ ಯಜ್ಞ ಬಾಳಿನ ಅಂಧಕಾರ ಕಳೆಯಲು ದಿಕ್ಸೂಚಿಯಾಗಿದೆ. ಗ್ರಾಮ ಚಿಕ್ಕದಾದರೂ ಬಹು ದೊಡ್ಡ ಕಾರ್ಯಕ್ರಮ ಹಮ್ಮಿಕೊಂಡಿದ್ದು ಎಲ್ಲರ ಸೌಭಾಗ್ಯವೆಂದರು. ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಸಮ್ಮುಖ ವಹಿಸಿ ಮಾತನಾಡಿದರು. ಪ್ರಶಸ್ತಿ ಪ್ರದಾನ: ಅ.ಭಾ.ವೀರಶೈವ ಶಿವಾಚಾರ್ಯ ಸಂಸ್ಥೆಯ ಗೌರವಾಧ್ಯಕ್ಷರಾದ-ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳಿಗೆ ''ಶಿವಾಚಾರ್ಯ ರತ್ನ'' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ಮಳಲಿ ಸಂಸ್ಥಾನ ಮಠದ ಡಾ.ನಾಗಭೂಷಣ ಶಿವಾಚಾರ್ಯರು ಪ್ರಶಸ್ತಿ ವಾಚನ ಮಾಡಿದರು. ಪ್ರಶಸ್ತಿ ಪುರಸ್ಕೃತರಾದ ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ನಮ್ಮ ಜೀವನ ಇತಿಹಾಸದಲ್ಲಿ ಇಂದಿನ ದಿನ ಅತ್ಯಂತ ಪವಿತ್ರವಾದ ದಿನ. ಜೀವನ ಪರ್ಯಂತರ ಶಿವಾಚಾರ್ಯ ಸಂಸ್ಕೃತಿ-ವೀರಶೈವ ಧರ್ಮದ ಆದರ್ಶ ಮೌಲ್ಯಗಳ ಸಂರಕ್ಷಣೆಗಾಗಿ ಸದಾ ಶ್ರಮಿಸುತ್ತೇವೆ ಎಂದರು.

ವಿ.ಪ.ಸದಸ್ಯ ಸಿ.ಟಿ.ರವಿ ಮಾತನಾಡಿ ಧರ್ಮ ಸಂಸ್ಕೃತಿಯ ಪುನರುತ್ಥಾನಕ್ಕಾಗಿ ಎಲ್ಲರೂ ಶ್ರಮಿಸಬೇಕಾಗಿದೆ. ಧರ್ಮ ಧರ್ಮಗಳಲ್ಲಿ ವ್ಯಕ್ತಿ ವ್ಯಕ್ತಿಗಳ ಮಧ್ಯೆ ಸುಮಧುರ ಬಾಂಧವ್ಯ ಬೆಳೆದು ಬಂದಾಗ ಸಮಾಜದಲ್ಲಿ ಶಾಂತಿ ನೆಲೆಗೊಳ್ಳುವುದು. ಈ ದಿಶೆಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಶ್ರಮಿಸಿ ಮಾರ್ಗದರ್ಶನ ನೀಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಜಗದೀಶ ಗುಡಗುಂಟಿಮಠ ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ ಅನ್ವರಿ, ಮಾಜಿ ಶಾಸಕ ಅಮರೇಗೌಡ ಪಾಟೀಲ ಬಯ್ಯಾಪುರ ಭಾಗವಹಿಸಿ ಮಾತನಾಡಿದರು. ನರೇಗಲ್ಲಿನ ಬಸವರಾಜ ದಿಂಡೂರ ಮಾತನಾಡಿ ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಮಾನವ ಧರ್ಮಕ್ಕೆ ಜಯವಾಗಲಿ ಎಂಬ ವಾಣಿ ಸಾರ್ವಕಾಲಿಕವಾಗಿದೆ.

ಗುರುರಕ್ಷೆ: ರಾಜೇಶ್ವರ ಶಿವಾಚಾರ್ಯರು ಮೆಹಕರ, ಬಳ್ಳಾರಿ ಕಲ್ಯಾಣಮಠದ ಕಲ್ಯಾಣ ಸ್ವಾಮಿಗಳು, ತ್ರಿಪುರಾಂತ-ಬಸವಕಲ್ಯಾಣದ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಹುಬ್ಬಳ್ಳಿಯ ಡಾ. ಎನ್.ಎ.ಚರಂತಿಮಠ, ಬಸವರಾಜ ಮಳಗಿ, ಶಂಕರಣ್ಣ ಕೊತಬಾಳ, ರುದ್ರಗೌಡ್ರು ಕುರುಡಗಿ, ವೀರಮ್ಮ ಹಿರೇಮಠ, ರೇಣುಕಪ್ರಸಾದಸ್ವಾಮಿ ಹಿರೇಮಠ, ಗದಗಿನ ಮಹದೇವಗೌಡ ತೆಲೆಗೌಡ್ರ, ರಾಜಣ್ಣ ಮಲ್ಲಾಡದ, ಅಜ್ಜಣ್ಣ ಮಲ್ಲಾಡದ, ಮಂಜಣ್ಣ ಬೆಲೇರಿ, ವೆಂಕಟೇಶ್ವರ ದ್ಯಾಸಲಕೇರಿ, ಲಿಂಗಸುಗೂರಿನ ಬಸವರಾಜ ಮತ್ತು ಶಿವಕುಮಾರ ನಂದಿಕೋಲಮಠ, ಮಲ್ಲಣ್ಣ ವಾರದ, ಡಾ|| ಬಸನಗೌಡ್ರು, ಪಾಟೀಲ ರಾಯಚೂರು ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

# ''ಕಾರ್ಖಾನೆಗಳಲ್ಲಿ ನಡವಳಿಕೆ ಆಧಾರಿತ ಸುರಕ್ಷತೆ'' ತರಬೇತಿ

**ಬೆಂಗಳೂರು:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ, ಹುಬ್ಬಳ್ಳಿಯಲ್ಲಿ ಸಂಸ್ಥೆಯ ತಾಂತ್ರಿಕ ಸಿಬ್ಬಂದಿಗಳಿಗೆ ''ಕಾರ್ಖಾನೆಗಳಲ್ಲಿ ನಡವಳಿಕೆ ಆಧಾರಿತ ಸುರಕ್ಷತೆ'' ತರಬೇತಿ ಕಾರ್ಯಾಗಾರವನ್ನು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗಾ.ಎಂ, ಉದ್ಘಾಟಿಸಿದರು.

ನಂತರ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗಾ. ಎಂ, ಮಾತನಾಡಿ, ಸಂಸ್ಥೆಯ ಏಳಿಗೆಗಾಗಿ ಸಾರ್ವಜನಿಕ ಸೇವೆ ಸಲ್ಲಿಸುತ್ತಿರುವ ಸಂಸ್ಥೆಯ ಚಾಲಕರು, ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ ಕೆಲಸದ ಸ್ಥಳಗಳಲ್ಲಿ ಸುರಕ್ಷತೆ ಬಹುಮುಖ್ಯವಾದ ಹಿನ್ನೆಲೆಯಲ್ಲಿ ಈ ತರಬೇತಿಯನ್ನು ಆಯೋಜಿಸಲಾಗಿದೆ. ನಮ್ಮ ಸಂಸ್ಥೆಯ ತಾಂತ್ರಿಕ ಸಿಬ್ಬಂದಿಗಳು ಘಟಕಗಳಲ್ಲಿ ಕಾರ್ಯ ನಿರ್ವಹಿಸುವಾಗ ಸುರಕ್ಷತಾ ಕ್ರಮಗಳನ್ನು ಅನುಸರಿಸುವದರಿಂದ ಯಾವುದೇ ಅವಘಡಗಳಾಗದೆ ಕಾರ್ಯ ನಿರ್ವಹಿಸಬಹುದಾಗಿದೆ, ಎಂದು ಹೇಳಿದರು ಹಾಗೂ ಈ ಕಾರ್ಯಾಗಾರದ ಪ್ರಯೋಜನ ಪಡೆಯಲು ಸಿಬ್ಬಂದಿಗಳಿಗೆ ಕರೆ ನೀಡಿದರು.

ಕಾರ್ಯಾಗಾರದ ಉಪನ್ಯಾಸ ಹಾಗೂ ತರಬೇತಿಯನ್ನು ಹುಬ್ಬಳ್ಳಿ ವಲಯದ ಕಾರ್ಖಾನೆಗಳು ಮತ್ತು ಬಾಯ್ಲರ್ ಇಲಾಖೆ ಜಂಟಿ ನಿರ್ದೇಶಕರಾದ ರವೀಂದ್ರ, ರಾಠೋಡ ಮಾತನಾಡಿ, ಕಾರ್ಯ ಸ್ಥಳಗಳಲ್ಲಿ ಸ್ವಚ್ಛತೆಗೆ ಮತ್ತು ಸುರಕ್ಷತೆಗೆ ವಿಶೇಷ ಗಮನ ನೀಡಬೇಕು. ಇದರಿಂದ ಉತ್ತಮ ವಾತಾವರಣದಲ್ಲಿ ಕೆಲಸ ನಿರ್ವಹಿಸುವದರಿಂದ ಕೆಲಸದಲ್ಲಿ ಮತ್ತು ಸಿಬ್ಬಂದಿಗಳ ಆರೋಗ್ಯದಲ್ಲಿ ಅತ್ಯುತ್ತಮ ಕೊಡುಗೆ ನೀಡಲು ಸಾಧ್ಯ. ಸಾರಿಗೆ ಸಂಸ್ಥೆಯ ತಾಂತ್ರಿಕ ಸಿಬ್ಬಂದಿಗಳು ತಮ್ಮ ಕೆಲಸದ ಸ್ಥಳಗಳಲ್ಲಿ ಇನ್ನೊಬ್ಬರಿಗೆ ಸುರಕ್ಷತೆಯ ಬಗ್ಗೆ ತಿಳಿ ಹೇಳುವ ಮೂಲಕ ಎಲ್ಲರಲ್ಲೂ ಜಾಗೃತೆ ಮೂಡಿಸಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿಗಳಾದ ಪಿ.ವೈ.ನಾಯಕ, ಮುಖ್ಯ ಯಾಂತ್ರಿಕ ಅಭಿಯಂತರರಾದ, ಬಸವರಾಜ ಅಮ್ಮನವರ, ಪ್ರಾದೇಶಿಕ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಸುಮನಾ.ಯು, ವಿಭಾಗಗಳ ಕಾರ್ಮಿಕ ಕಲ್ಯಾಣಾಧಿಕಾರಿಗಳು ಹಾಗೂ ಇತರ ಅಧಿಕಾರಿಗಳು ಮತ್ತು ಸಂಸ್ಥೆಯ ತಾಂತ್ರಿಕ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಆರ್ ಎಂ ರಾಜೇಂದ್ರ, ಕಾರ್ಯಕ್ರಮವನ್ನು ವಂದಿಸಿದರು ಹಾಗೂ ವಿರೂಪಾಕ್ಷ ಕಟ್ಟೀಮನಿ ಕಾರ್ಯಕ್ರಮವನ್ನು ನಿರೂಪಿಸಿದರು.

# ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಪ್ರವಾಸ



**ಬೆಂಗಳೂರು:** ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು, ಸಮಿತಿಯ ಅಧ್ಯಕ್ಷರಾದ ಪಿ.ಎಂ. ನರೇಂದ್ರಸ್ವಾಮಿಯವರ ಅಧ್ಯಕ್ಷತೆಯಲ್ಲಿ ಸಮಿತಿಯ ಅಧ್ಯಕ್ಷರು ಸೇರಿದಂತೆ 20 ಜನ ಸದಸ್ಯರು ಅಕ್ಟೋಬರ್ 18 ಮತ್ತು 19 ರಂದು ಹಾವೇರಿ, ದಾವಣಗೆರೆ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಜಿಲ್ಲಾಮಟ್ಟದ ಪ್ರಗತಿ ಪರಿಶೀಲನೆ ನಡೆಸಲಿದೆ.

ಸದರಿ ಸಮಿತಿಯು ಈ ಜಿಲ್ಲೆಗಳಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಯದವರ ಅಭಿವೃದ್ಧಿಗೆ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳ / ಕಾರ್ಯಕ್ರಮಗಳ ಪ್ರಗತಿ ಕುರಿತಂತೆ ಪ್ರವಾಸದ ಸಮಯದಲ್ಲಿ ಆಯಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ / ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಭೆ ಸೇರಿ ಚರ್ಚೆ ಚರ್ಚೆ ನಡೆಸಲಿದೆ.

ಹಾವೇರಿ, ದಾವಣಗೆರೆ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಾಯದವರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಂಘ ಸಂಸ್ಥೆಗಳಿಂದ ಹಾಗೂ ಈ ಸಮುದಾಯದ ಜನಸಾಮಾನ್ಯರು ಸಾರ್ವಜನಿಕ ಹಿತಾಸಕ್ತಿಯುಳ್ಳ ಮನವಿಗಳನ್ನು ಆಯಾ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬಹುದಾಗಿದೆ. ಸಮಿತಿಯ ಪರವಾಗಿ ಜಿಲ್ಲಾಧಿಕಾರಿಗಳು ಮನವಿಗಳನ್ನು ಸ್ವೀಕರಿಸಿ, ಪ್ರಗತಿ ಪರಿಶೀಲನಾ ಸಭೆಯ ದಿನದಂದು ಸಮಿತಿಯ ಮಾನ್ಯ ಅಧ್ಯಕ್ಷರಿಗೆ ಸಲ್ಲಿಸುವಂತೆ ಕರ್ನಾಟಕ ವಿಧಾನ ಸಭೆಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ (ಪಿ.ಯು.ಸಿ ಮತ್ತು ಪಿ.ಯು.ಸಿ ಸಮನಾಂತರ ಕೋರ್ಸಿನ ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು, ಮತ್ತು ಸ್ನಾತಕೊತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು, ಮತ್ತು ಸ್ನಾತಕೊತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಉಚಿತ ಪ್ರವೇಶಾಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಬೌದ್ಧ, ಸಿಖ್, ಪಾರ್ಸಿ, ಇತರೆ ವರ್ಗದ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ಪಂಗಡ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು https://shp.karnataka.gov.in ಅನ್ನು ಸಂಪರ್ಕಿಸಿ ಆನ್ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು 2024ರ ನವ್ವೆಂಬರ್ 11 ಕೊನೆಯ ದಿನವಾಗಿದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರಕ್ಕಾಗಿ ಇಲಾಖೆಯ ವೆಬ್ ಸೈಟ್ https://dom.karnataka.gov.in/bengaluru_rural/public ನ್ನು ನೋಡಬಹುದು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990 ಅಥವಾ ತಾಲ್ಲೂಕು ನಿಲಯಪಾಲಕರನ್ನು ಸಂಪರ್ಕಿಸುವುದು. ದೊಡ್ಡಬಳ್ಳಾಪುರ ತಾಲ್ಲೂಕು ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಕಂಟನಕುಂಟೆ- ಶ್ರೀಮತಿ ರಾಧಾಮಣಿ ದೂರವಾಣಿ ಸಂಖ್ಯೆ. 9886400832, ನೆಲಮಂಗಲ ತಾಲ್ಲೂಕು ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಜಯನಗರ- ಶ್ರೀ ಕೃಷ್ಣ ಎಂ.ಆರ್ ದೂರವಾಣಿ ಸಂಖ್ಯೆ. 8317403213, ಹೊಸಕೋಟೆ ತಾಲ್ಲೂಕು ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ದಂಡುಪಾಳ್ಯ- ಶ್ರೀ ಪುಟ್ಟಸ್ವಾಮಿ ದೂರವಾಣಿ ಸಂಖ್ಯೆ. 8431917410, ದೇವನಹಳ್ಳಿ ತಾಲ್ಲೂಕು ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ದೇವನಹಳ್ಳಿ ಟೌನ್- ಶ್ರೀ ತಿಪ್ಪೇಸ್ವಾಮಿ ಎನ್ ದೂರವಾಣಿ ಸಂಖ್ಯೆ. 9731017483 ಎಂದು ಬೆಂಗಳೂರು ಗ್ರಾಮಾಂತರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೈಗಾರಿಕಾ ಕ್ಲಸ್ಟರ್ ಕಾರ್ಯಕ್ರಮದಡಿ ಸಾಮಾನ್ಯ ಸೌಲಭ್ಯ ಕೇಂದ್ರ ಸ್ಥಾಪನೆ

**ಚಾಮರಾಜನಗರ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಕೇಂದ್ರ ಸರ್ಕಾರದ ಕೈಗಾರಿಕಾ ಕ್ಲಸ್ಟರ್ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಒಂದೇ ಬಗೆಯ ಉತ್ಪನ್ನವನ್ನು ತಯಾರಿಸುತ್ತಿರುವ ಕೈಗಾರಿಕಾ ಘಟಕಗಳು, ಕುಶಲಕರ್ಮಿಗಳು ತಮಗೆ ಅವಶ್ಯವಿರುವ ಸಾಮಾನ್ಯ ಸೌಲಭ್ಯ ಕೇಂದ್ರವನ್ನು (ಯೋಜನಾ ಮೊತ್ತ ಗರಿಷ್ಟ 10 ಕೋಟಿ ರೂ.) ಸ್ಥಾಪಿಸಿಕೊಳ್ಳಬಹುದಾಗಿದೆ. ಎಸ್.ಪಿ.ವಿ ವತಿಯಿಂದ ಶೇ. 10ರಷ್ಟು ವಂತಿಕೆಯನ್ನು ಭರಿಸಬೇಕಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಸಕ್ತ ಉದ್ದಿಮೆದಾರರು ನಗರದ ಜಿಲ್ಲಾ ಕೈಗಾರಿಕಾ ಕೇಂದ್ರವನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ವಿವಿಧ ಯೋಜನೆಗಳಡಿ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಸರ್ಕಾರದ ವಿವಿಧ ಯೋಜನೆಗಳಡಿ ಅರ್ಜಿ ಅಹ್ವಾನ ಮಾಡಲಾಗಿದೆ.ಕರ್ನಾಟಕ ರಾಜ್ಯಾದ್ಯಂತ ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಪರಿಶಿಷ್ಟ ಜಾತಿ ಆದಿಕರ್ನಾಟಕ, ಆದಿಮಾದಿಗ, ಚಮ್ಮಾರ, ಡೋರ, ಸಮಗಾರ, ಮೋಚಿ ಜನಾಂಗದವರಿಗೆ 2024-25ನೇ ಸಾಲಿಗೆ ಸಂಬಂಧಿಸಿದಂತೆ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಅಕ್ಟೋಬರ್ 30 ರೊಳಗೆ ಸಲ್ಲಿಸಬೇಕು. ಯೋಜನೆಗಳ ವಿವರ: ಕೌಶಲ್ಯಾ ಉನ್ನತೀಕರಣ ಯೋಜನೆ, ಸ್ವಾವಂಬಿ,ಸಂಚಾರಿ ಮಾರಾಟ ಮಳಿಗೆ ಕಾಯಕ ಸ್ಫೂರ್ತಿ ಯೋಜನೆ, ಚರ್ಮ ಶಿಲ್ಪಿ ಯೋಜನೆ, ಪಾದುಕೆ ಕುಟೀರ ಯೋಜನೆ, ಚರ್ಮಕಾರರ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ನೇರ ಸಾಲ ಯೋಜನೆ, ಮಾರುಕಟ್ಟೆ ಸಹಾಯ ಯೋಜನೆ ಮತ್ತು ಚರ್ಮಕಾರರ ವಸತಿ ಯೋಜನೆ ಈ ಯೋಜನೆಗಳಿಗೆ ಅರ್ಹ ಚರ್ಮ ಕುಶಲಕರ್ಮಿಗಳು ''ಸೇವಾ ಸಿಂಧು'' ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಂಯೋಜಕ ಜೆ. ಜೈಕುಮಾರ್, ಮೊಬೈಲ್ ನಂ:9742979143 ಗೆ ಸಂಪರ್ಕಿಸಬಹು.

# ಚಿಕ್ಕನಾಯಕನಹಳ್ಳಿ ತಾಲ್ಲೂಕು ಸರ್ಕಾರಿ ನೌಕರರ ಸಂಘದ ನಿರ್ದೇಶಕರ ಚುನಾವಣೆ

**ಹುಳಿಯಾರು:** ರಾಜ್ಯ ಸರ್ಕಾರಿ ನೌಕರರ ಸಂಘದ 2024-2029 ಅವಧಿಯ ಚಿಕ್ಕನಾಯಕನಹಳ್ಳಿ ತಾಲೂಕು ಹಾಗೂ ಯೋಜನಾ ಶಾಖೆಗಳ ನಿರ್ದೇಶಕರ ಚುನಾವಣೆಗೆ ಅಧಿಸೂಚನೆ ಹೊರಡಿಸಲಾಗಿದೆ ಎಂದು ತಾಲೂಕು ನೌಕರರ ಸಂಘದ ಅಧ್ಯಕ್ಷ ಆರ್.ಪರಶಿವಮೂರ್ತಿ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಅಕ್ಟೋಬರ್ 18 ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ, 19 ನಾಮಪತ್ರ ಪರಿಶೀಲನೆ, 21 ಉಮೇದುವಾರಿಕೆ ವಾಪಸ್ಸು ಪಡೆಯುವದು, 28 ರಂದು ಬೆಳಗ್ಗೆ 9 ರಿಂದ ಸಂಜೆ 4 ರವರೆವಿಗೆ ಚುನಾವಣೆ ನಡೆಯಲಿದೆ ಎಂದು ತಿಳಿಸಿದ್ದಾರೆ. ತಾಲೂಕ ಶಾಖೆ ಅಧ್ಯಕ್ಷರು, ಖಜಾಂಚಿ, ಹಾಗೂ ರಾಜ್ಯ ಪರಿಷತ್ತ ಸ್ಥಾನದ ಚುನಾವಣೆ ಅಕ್ಟೋಬರ್ 30 ರಿಂದ ನವೆಂಬರ್ 16 ರವರೆಗೆ ಸಂಘದ ಶಾಖೆ ನಿಗದಿ ಪಡಿಸುವ ಸ್ಥಳದಲ್ಲಿ ಚುನಾವಣೆ ನಡೆಯಲಿದೆ ಎಂದು ಪರಶಿವಮೂರ್ತಿ ತಿಳಿಸಿದ್ದಾರೆ.

# 17ರಂದು ವಾಲ್ಮೀಕಿ ಜಯಂತಿ ಮಹೋತ್ಸವ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಮಹೋತ್ಸವ ಕಾರ್ಯಕ್ರಮವನ್ನು ಅಕ್ಟೋಬರ್17 ರಂದು ಬೆಳಿಗ್ಗೆ 10:30ಗಂಟೆಗೆ ನಗರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರು ನೆರವೇರಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಇ. ಪ್ರದೀಪ್ ಈಶ್ವರ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ. ಮಲ್ಲೇಶ್ ಬಾಬು, ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ಶಾಸಕರಾದ ಚಿದಾನಂದ ಎಂ. ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ನಗರಸಭೆ ಅಧ್ಯಕ್ಷ ಎ.ಗಜೇಂದ್ರ ರವರು ಭಾಗವಹಿಸಲಿದ್ದಾರೆ.



ಅತಿಥಿಗಳಾಗಿ ಸರ್ಕಾರದ ಕಾರ್ಯದರ್ಶಿಗಳು ಮೂಲಭೂತ ಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳಾ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಿ.ರಂದೀಪ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿರ್ದೇಶಕರಾದ ಟಿ.ಯೋಗೇಶ್ ರವರು ಭಾಗವಹಿಸಲಿದ್ದಾರೆ.

ಮುಖ್ಯ ಭಾಷಣಕಾರರಾಗಿ ಉಪನ್ಯಾಸಕರು ಹಾಗೂ ಆಕಾಶವಾಣಿ ಮತ್ತು ದೂರದರ್ಶನ ಚಂದನ ವಾಹಿನಿಯ ಜಿಲ್ಲಾ ವರದಿಗಾರರಾದ ಎನ್.ಚಂದ್ರಶೇಖರ್ ರವರು ಭಾಗವಹಿಸುವರು.

ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಜಿಲ್ಲಾ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರು, ಸರ್ಕಾರಿ ನೌಕರರ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಮಹರ್ಷಿ ವಾಲ್ಮೀಕಿ ಸಂಘ ಪದಾಧಿಕಾರಿಗಳು, ವಾಲ್ಮೀಕಿ ಜನಾಂಗದ ಮುಖಂಡರುಗಳು ಹಾಗೂ ದಲಿತ ಸಂಘಟನೆಗಳ ಮುಖಂಡರುಗಳು/ ಪದಾಧಿಕಾರಿಗಳು ಸಮಸ್ತ ನಾಗರೀಕ ಬಂಧುಗಳು ಭಾಗವಹಿಸಲಿದ್ದಾರೆ.

# ಡಿ.14ರಂದು ರಾಷ್ಟ್ರೀಯ ಜನತಾ ನ್ಯಾಯಾಲಯ

**ಕೋಲಾರ:** ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜಿಮಾಡಿಕೊಳ್ಳುವ ಕುರಿತು ತಿಳಿಸುವ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣವನ್ನು ಇತ್ಯರ್ಥ ಮಾಡಿಕೊಳ್ಳಬಹುದು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಧಿಕಾರ ಬೆಂಗಳೂರು, ಇವರ ನಿರ್ದೇನದಂತೆ ಕೋಲಾರ ಜಿಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ಬಂಗಾರಪೇಟೆ, ಶ್ರೀನಿವಾಸಪುರ, ಮಾಲೂರು, ಮುಳಬಾಗಿಲು ಮತ್ತು ಕೆ.ಜಿ.ಎಫ್ ತಾಲ್ಲೂಕು ನ್ಯಾಯಾಲಯಗಳಲ್ಲಿ 14-12-2024 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ರಾಷ್ಟ್ರೀಯ ಜನತಾ ನ್ಯಾಯಾಲಯ ಹಮ್ಮಿಕೊಳ್ಳಲಾಗುತ್ತಿದೆ. ಸದರಿ ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಅವಕಾಶವಿರುತ್ತದೆ.

ರಾಷ್ಟ್ರೀಯ ಜನತಾ ನ್ಯಾಯಲಯದಲ್ಲಿ ಉಭಯ ಪಕ್ಷಗಾರರು ಹಾಗೂ ಅವರ ವಕೀಲರು ಪೂರ್ವ ಸಂಧಾನ ಪ್ರಕಿಯೆಯಲ್ಲಿ ಪಾಲ್ಗೊಂಡು ತಮ್ಮ ಪ್ರಕರಣಗಳನ್ನು ಸಂಧಾನ ಮೂಲಕ ಬಗೆಹರಿಸಿಕೊಳ್ಳುವ ಅವಕಾಶವಿರುತ್ತದೆ. ಸದರಿ ಪರ್ಯಾಯ ನ್ಯಾಯ ವಿತರಣೆ ಜನಮನ್ನಣೆ ಪಡೆದುಕೊಂಡಿದ್ದು, ಅದರಲ್ಲಿ ಉಭಯ ಪಕ್ಷಗಾರರು ತಮ್ಮ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಲು ಮುಕ್ತ ಅವಕಾಶವಿರುತ್ತದೆ. ಸದರಿ ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಇಚ್ಚಿಸುವ ಪಕ್ಷಗಾರರು ಮುಂಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು. ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಸಿವಿಲ್ ಪ್ರಕರಣಗಳು, ರಾಜಿಯಾಗುವ ಕ್ರಿಮಿನಲ್ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ವೈವಾಹಿಕ-ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಛೇದನೆಯನ್ನು ಹೊರತುಪಡಿಸಿ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧಿಕರಣದ ಪ್ರಕರಣಗಳು, ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು, ರಾಜಿಯಾಗಬಲ್ಲ ಸಿವಿಲ್ ಪ್ರಕರಣಗಳು ಮತ್ತು ಜೀವನಾಂಶ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳುವ ಅವಕಾಶವಿದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು.



ರಾಷ್ಟ್ರೀಯ ಜನತಾ ನ್ಯಾಯಾಲಯದ ಪ್ರಯೋಜನಗಳು-ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯಗಳಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂಧಾನದ ಮೂಲ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಸಂಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ.

ಈ ಹಿಂದೆ ದಿನಾಂಕ:14-09-2024 ರಂದು ನಡೆದ ಜನತಾ ನ್ಯಾಯಾಲಯದಲ್ಲಿ ಒಟ್ಟು 8377 ಕೋಲಾರ ಜಿಲ್ಲೆಯ ನ್ಯಾಯಾಲಯಗಳಲ್ಲಿದ್ದ ಚಾಲ್ತಿ ಪ್ರಕರಣಗಳು ಹಾಗೂ 26093 ವ್ಯಾಜ್ಯ ಪೂರ್ವ ಬ್ಯಾಂಕ್ ಪ್ರಕರಣಗಳು ಸೇರಿ ಒಟ್ಟು 34470 ಪ್ರಕರಣಗಳು ರಾಜಿ ಮೂಲಕ ಮುಕ್ತಾಯಗೊಂಡಿರುತ್ತವೆ. ಸದರಿ ಜನತಾ ನ್ಯಾಯಾಲಯದಲ್ಲಿ ಒಟ್ಟು 00-125,75,91,729-00 ಪರಿಹಾರದ ಹಣ ರಾಜಿ ಮೂಲಕ ಪಾವತಿಯಾಗಿರುತ್ತದೆ.

ಈ ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುನಾಥ ಜಿ.ಎ ರವರು ರಾಷ್ಟ್ರೀಯ ಜನತಾ ನ್ಯಾಯಾಲಯದ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿರುತ್ತಾರೆ. ಸದರಿ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದ ಜಿಲ್ಲಾ ಕಾನೂನು ಸೇವೆಗಳು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ ಎಸ್ ಹೊಸಮನಿ ರವರು ರಾಷ್ಟ್ರೀಯ ಲೋಕ್ ಆದಾಲತ್‌ನ ಪ್ರಯೋಜನವನ್ನು ಸಾರ್ವಜನಿಕರು ಹಾಗೂ ಕಕ್ಷಿದಾರರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

# ಸಂಜೆ ಟಿಪ್ಸ್

## ಲಕ್ಕಿ ಲಕ್ಷ್ಮಿ ಫೆಸ್ಟಿವಲ್

ಉನ್ನತ ನಿರೀಕ್ಷೆಯ ಲಕ್ಕಿ ಲಕ್ಷ್ಮೀ ಫೆಸ್ಟಿವಲ್ ಅನ್ನು ಪ್ರಕಟಿಸುವಲ್ಲಿ ಆಲ್ ಇಂಡಿಯಾ ಜೆಮ್ ಎಂಡ್ ಜ್ಯುವೆಲರಿ ಡೊಮೆಸ್ಟಿಕ್ ಕೌನ್ಸಿಲ್(ಜಿಜೆಸಿ) ರೋಮಾಂಚಿತಗೊಂಡಿದೆ. ಬೆಂಗಳೂರಿನಲ್ಲಿ ಈ ಉತ್ಸವ ಅಕ್ಟೋಬರ್ 22ರಿಂದ ಡಿಸೆಂಬರ್ 09, 2024ರವರೆಗೆ ನಡೆಯಲಿದ್ದು, 'ಗೆಟ್ ಬ್ಲೆಸ್ಡ್, ಬಿ ಲಕ್ಕಿ'(ಆರ್ಶೀವಾದ ಪಡೆಯಿರಿ, ಅದೃಷ್ಟಶಾಲಿಗಳಾಗಿರಿ) ಎಂಬ ತಿರುಳನ್ನು ಹೊಂದಿರಲಿದೆ. ಈ ವರ್ಷದ ಉತ್ಸವ ಹೆಚ್ಚು ವಿಸ್ತಾರವಾಗಿರಲಿದ್ದು, ತಲ್ಲೀನಗೊಳಿಸುವ ಅನುಭವದೊಂದಿಗೆ ಹಿಂದಿನ ಕಾರ್ಯಕ್ರಮಗಳ ಮೌಲ್ಯಯುತ ಒಳನೋಟಗಳನ್ನು ಅಳವಡಿಸಿಕೊಂಡಿರುವ ಭರವಸೆ ನೀಡುತ್ತದೆ. ನವೀಕರಿಸಿ ಉತ್ತಮಪಡಿಸಲಾದ ಲಕ್ಕಿ ಲಕ್ಷ್ಮೀ ಫೆಸ್ಟಿವಲ್ ಬೆಂಗಳೂರಿನ ಪ್ರಮುಖ ಸ್ಥಳಗಳಲ್ಲಿ ನಡೆಯಲಿದ್ದು, ಆಭರಣ ವ್ಯಾಪಾರಿಗಳಿಗೆ ಗ್ರಾಹಕರೊಂದಿಗೆ ನೇರವಾಗಿ ಸಂಪರ್ಕ ಹೊಂದಲು ಅಸಾಧಾರಣ ವೇದಿಕೆ ಪೂರೈಸಲಿದೆ. ನವೀನ ವಿನ್ಯಾಸಗಳು ಹಾಗೂ ಅಸಾಧಾರಣ ಕರಕುಶಲ ವಿನ್ಯಾಸಗಳ ಹಿಡಿದಿಡುವಂತಹ ಮಿಶ್ರಣವನ್ನು ಇದರಲ್ಲಿ ಭಾಗವಹಿಸಿದವರು ನಿರೀಕ್ಷಿಸಬಹುದು. ಜೊತೆಗೆ ಸಾಂಪ್ರದಾಯಿಕ ಆಕರ್ಷಣೆಯ ಜೊತೆಗೆ ಆಧುನಿಕ ಸೊಬಗಿನ ಮಿಶ್ರಣ ಇಲ್ಲಿ ಕಾಣಸಿಗಲಿದೆ. ಒಟ್ಟು 10 ಕೋಟಿ ರೂ.ಗಳ ಬಹುಮಾನ ಹೊಂದಿರುವ ಈ ಉತ್ಸವ ಎಲ್ಲರನ್ನು ತೊಡಗಿಸುವಂತಹ ಸ್ಪರ್ಧೆಗಳನ್ನು ಅಲ್ಲದೆ, ಚಲನಶೀಲ ಚಟುವಟಿಕೆಗಳ ವೈಶಿಷ್ಟ?ಯಗಳಿಂದ ಕೂಡಿರುತ್ತದೆ. ಭಾಗವಹಿಸಿದವರಿಗೆ ಗಮನಾರ್ಹ ಅವಕಾಶಗಳನ್ನು ಸೃಷ್ಟಿಸುವುದರ ಜೊತೆಗೆ ಭಾರತೀಯ ಆಭರಣ ಕೈಗಾರಿಕೆಗೆ ಹೊಸ ಉತ್ಸಾಹ ನೀಡುವ ಗುರಿ ಹೊಂದಿರುತ್ತದೆ. ಸಂದರ್ಶಕರಿಗೆ ಬಹುಮಾನಗಳನ್ನು ಗೆಲ್ಲುವ ಖಾತ್ರಿಯ ಹಲವಾರು ಅವಕಾಶಗಳು ಇಲ್ಲಿರುತ್ತವೆ. ಜೊತೆಗೆ ಕಾಲಕಾಲಕ್ಕೆ, ಪ್ರತಿ ವಾರಕ್ಕೊಮ್ಮೆ ಮತ್ತು ಬಂಪರ್ ಬಹುಮಾನಗಳ ಡ್ರಾಗಳಿರುತ್ತವೆ. ವೈವಿಧ್ಯಪೂರ್ಣ ಜಾಹೀರಾತು ಮತ್ತು ಮಾರುಕಟ್ಟೆ ಮಾರ್ಗಗಳಲ್ಲಿ ವಿಸ್ತಾರವಾದ ಪ್ರಚಾರವು, ಭಾಗವಹಿಸುವ ಮಳಿಗೆಗಳಿಗೆ ಬೃಹತ್ ಸಂಖ್ಯೆಯಲ್ಲಿ ಜನರು ಬರುವ ಖಾತ್ರಿ ನೀಡುತ್ತದೆ. ಇದರೊಂದಿಗೆ ಈ ಕಾರ್ಯಕ್ರಮ ಜನಜಂಗುಳಿಯಿಂದ ಕೂಡಿದ್ದು, ಅಪಾರ ಚಟುವಟಿಕೆ ಹೊಂದಿರಲಿದೆ. ಈ ಉತ್ಸಾಹಪೂರ್ಣ ಉತ್ಸವದ ನಿರೀಕ್ಷೆಯಲ್ಲಿ ಅಕ್ಟೋಬರ್ 08ರಂದು ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿ ನಡೆಯಲಿದ್ದು, ಇದರಲ್ಲಿ ಇನ್ನು ಹೆಚ್ಚಿನ ವಿವರಗಳು ಮತ್ತು ಒಳನೋಟಗಳನ್ನು ಪೂರೈಸಲಾಗುತ್ತಿದೆ. ಆಲ್ ಇಂಡಿಯಾ ಜೆಮ್ ಎಂಡ್ ಜ್ಯುವೆಲರಿ ಡೊಮೆಸ್ಟಿಕ್ ಕೌನ್ಸಿಲ್(ಜಿಜೆಸಿ)ನ ಚರ್ಮನ್ ಸಾಯ್ಯಾಮ್ ಮೆಹ್ರಾ, ಅವರು ತಮ್ಮ ಉತ್ಸಾಹ ಅಭಿವ್ಯಕ್ತಿಸಿ ಮಾತನಾಡಿ, ''ನವೀಕರಿಸಲಾದ ವೈಶಿಷ್ಟಯಗಳೊಂದಿಗೆ ಬೆಂಗಳೂರಿಗೆ ಲಕ್ಕಿ ಲಕ್ಷ್ಮೀಫೆಸ್ಟಿವಲ್ ಅನ್ನು ತರಲು ಉತ್ಸಾಹಿತರಾಗಿದ್ದೇವೆ ಎಂದರು.

## ತೆಂಗಿನಕಾಯಿ ವಡೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅಕ್ಕಿ ಹಿಟ್ಟು- 3 ಬಟ್ಟಲು, ತೆಂಗಿನಕಾಯಿ ತುರಿ- ಅರ್ಧ ಬಟ್ಟಲು, ಎಳ್ಳು- ಅರ್ಧ ಚಮಚ, ಜೀರಿಗೆ- ಅರ್ಧ ಚಮಚ, ಬೆಣ್ಣೆ- ಅರ್ಧ ಚಮಚ, ಅರಿಶಿನ- ಚಿಟಕೆಯಷ್ಟು, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಕರಿಯಲು ಅಗತ್ಯವಿರುವಷ್ಟು

### ಮಾಡುವ ವಿಧಾನ

ಅಕ್ಕಿ ಹಿಟ್ಟನ್ನು ನೀರು ಹಾಕಿ ಹದಕ್ಕೆ ಕಲೆಸಿಕೊಳ್ಳಬೇಕು, ನಂತರ ತೆಂಗಿನ ತುರಿ, ಎಳ್ಳು, ಜೀರಿಗೆ, ಉಪ್ಪು, ಅರಿಶಿನ ಹಾಕಿ ನಾದಬೇಕು. ಬಾಣಲೆಯಲ್ಲಿ ಎಣ್ಣೆ ಹಾಕಿ ಕಾದ ನಂತರ ನಾದಿದ ಹಿಟ್ಟನ್ನು ಚಿಕ್ಕ ಚಿಕ್ಕ ಉಂಡೆಗಳನ್ನಾಗಿ ಮಾಡಿ ತೆಳ್ಳಗೆ ತಟ್ಟಿ ಎಣ್ಣೆಯಲ್ಲಿ ಕರಿದರೆ ರುಚಿಯಾದ ತೆಂಗಿನಕಾಯಿ ವಡೆ ಸವಿಯಲು ಸಿದ್ಧ.

## ಕಾಡುವ ಕೆಮ್ಮಿಗೆ ಈ ಎಲೆಯೇ ಪರಿಹಾರ!

### ಹೆಲ್ತ್ ಟಿಪ್ಸ್



ಹವಾಮಾನ ಬದಲಾದಂತೆ ನೆಗಡಿ,ಕೆಮ್ಮಿನ ಬಾಧೆ ಆರಂಭವಾಗುತ್ತದೆ. ಅದರಲ್ಲಿಯೂ ಕೆಮ್ಮು ಒಮ್ಮೆ ಆರಂಭವಾದರೆ ವಾರಗಟ್ಟಲೆ ಕಾಡುತ್ತದೆ. ಕೆಮ್ಮಿನ ಕಾರಣದಿಂದ ನಿದ್ದೆಯೂ ಬರುವುದಿಲ್ಲ. ಕೆಲವೊಮ್ಮೆ ಮಲಗಲು ದಿಂಬಿಗೆ ತಲೆ ಕೊಡುತ್ತಿದ್ದ ಹಾಗೆ ಕೆಮ್ಮು ಶುರುವಾಗುತ್ತದೆ.

ಎದೆ ಬಿಗಿ ಹಿಡಿದ ಹಾಗೆ ಆಗುತ್ತದೆ. ಹೀಗಾದಾಗ ಕೆಮ್ಮಿನ ಸಿರಪ್ ಕುಡಿದರೂ ಪರಿಹಾರ ಸಿಗುವುದಿಲ್ಲ. ಆ ಸಂದರ್ಭದಲ್ಲಿ ಕೆಲವು ಮನೆ ಮದ್ದುಗಳೇ ಉಪಯೋಗಕ್ಕೆ ಬರುವುದು. ಹಿತ್ತಲ ಗಿಡ ಮದ್ದಲ್ಲ ಎನ್ನುವ ಮಾತಿದೆ.ಅಂದರೆ ನಮ್ಮ ಕಣ್ಣ ಮುಂದೆ ಪರಿಹಾರವಿದ್ದರೂ ನಾವು ಅದನ್ನು ನಿರ್ಲಕ್ಷಿಸಿ ಬಿಡುತ್ತೇವೆ.ದೊಡ್ಡ ಪತ್ರೆ ಸಾಮಾನ್ಯವಾಗಿ ಬಹುತೇಕ ಮನೆಗಳಲ್ಲಿ ಬೆಳೆಯುತ್ತಾರೆ. ಇದು ಕೆಮ್ಮು, ಶೀತಕ್ಕೆ ರಾಮಬಾಣ ಇದ್ದ ಹಾಗೆ. ಈ ಎಲೆಯ ರಸ ಕುಡಿದರೆ ಸಾಕು ಕೆಮ್ಮು ಮಾಯವಾಗಿ ಬಿಡುತ್ತದೆ.

ದೊಡ್ಡಪತ್ರೆ ಎಲೆ,ತುಳಸಿ ಎಲೆ ಮತ್ತು ವೀಳ್ಯದೆಲೆಯನ್ನು ಅರೆದು ರಸ ತೆಗೆದು ಅದಕ್ಕೆ ಜೇನುತುಪ್ಪ ಬೆರೆಸಿ ಕುಡಿದರೆ ನೆಗಡಿ,ಕೆಮ್ಮು ಹೇಳ ಹೆಸರಿಲ್ಲದೆ ದೂರವಾಗುತ್ತದೆ. ಚಿಕ್ಕ ಮಕ್ಕಳಿಗೂ ಇದನ್ನು ನೀಡಬಹುದು. ಇದರಿಂದ ಯಾವ ಅಡ್ಡ ಪರಿಣಾಮವೂ ಆಗುವುದಿಲ್ಲ. ಬರೀ ದೊಡ್ಡ ಪತ್ರೆ ಮಾತ್ರ ಬಳಸುವುದಾದರೆ ಇದರ ಎಲೆಯನ್ನು ಒಂದು ತವಾ ಮೇಲೆ ಹಾಕಿ ಬಾಡಿಸಿದರೆ ಅದು ಚೆನ್ನಾಗಿ ರಸ ಬಿಡುತ್ತದೆ. ಹೀಗೆ ಬಾಡಿದ ಎಲೆಯನ್ನು ಹಿಸುಕಿ ರಸ ತೆಗೆದು ಅದಕ್ಕೆ ಸ್ವಲ್ಪ ಜೇನು ತುಪ್ಪ ಬೆರೆಸಿ ಕುಡಿದರೆ ಶೀತ ಕೆಮ್ಮಿಗೆ ಉತ್ತಮ ಪರಿಹಾರವಾಗಿ ಬಿಡುತ್ತದೆ.

ಇನ್ನು ಮೂಗು ಕಟ್ಟಿ ತಲೆ ನೋವು ಅತಿಯಾಗಿ ಕಾಡುತ್ತಿದ್ದರೆ, ದೊಡ್ಡ ಪತ್ರೆ ಎಲೆ ಯನ್ನು ತವಾ ಮೇಲೆ ಹಾಕಿ ಬಾಡಿಸಿ ಹಣೆಯ ಭಾಗದಲ್ಲಿ ಇಟ್ಟರೆ ಕಟ್ಟಿದ ಮೂಗಿನಿಂದ ಪರಿಹಾರ ಸಿಗುವುದು.ತಲೆ ನೋವು ಕೂಡಾ ಕಡಿಮೆಯಾಗುವುದು.

## ಗುಂಗುರು ಕೂದಲು ಅಂದ

### ಬ್ಯೂಟಿ ಟಿಪ್ಸ್



ಗುಂಗುರು ಕೂದಲು ಹೊಂದಿರುವವರು ನಿರ್ವಹಣೆ ಕಷ್ಟ ಎಂಬ ಕಾರಣಕ್ಕೆ ಸ್ಟ್ರೈಟ್ ಮಾಡಿಸಿಕೊಳ್ಳುವುದನ್ನು ನೀವು ಕಂಡಿರಬಹುದು. ಗುಂಗುರು ಕೂದಲು ಕೂಡಾ ನಿಮ್ಮ ಸೌಂದರ್ಯವನ್ನು ದುಪ್ಪಟ್ಟು ಮಾಡಬಹುದು.

ಗ್ಲಿಸರಿನ್ ಹೊಂದಿರುವ ಶ್ಯಾಂಪೂ ಬಳಸಿ. ಇದರ ಬಳಕೆಯಿಂದ ಕೂದಲು ಸಿಕ್ಕಾಗುವುದು ತಪ್ಪುತ್ತದೆ.

ಕಂಡಿಷನರ್ ಅನ್ನು ಮರೆಯದೆ ಬಳಸಿ. ಪ್ರತಿದಿನ ಶ್ಯಾಂಪು ಬಳಸಿ ತಲೆ ತೊಳೆಯುವುದು ಒಳ್ಳೆಯದಲ್ಲ. ವಾರಕ್ಕೆ ಎರಡು ಬಾರಿ ಕಂಡಿಷನರ್ ಹಾಕಿದರೆ ಸಾಕು.

ಡ್ರೈಯರ್ ಬಳಸಿ ಕೂದಲು ಒಣಗಿಸುವ ಬದಲು ಗಾಳಿಯಲ್ಲೇ ಒಣಗಲು ಬಿಡಿ. ಇಲ್ಲವಾದರೆ ಕೂದಲು ಹೆಚ್ಚು ಹಾರುವಂತಾದೀತು. ಟವೆಲ್ ನಿಂದ ಸರಿಯಾಗಿ ಕೂದಲು ಒರೆಸಿ. ಗುಂಗುರು ಕೂದಲಿನೊಳಗೆ ನೀರು ಹೆಚ್ಚು ನಿಂತು ಶೀತ ಕೆಮ್ಮು ಸಮಸ್ಯೆಗಳು ಕಂಡು ಬಂದಾವು.

ಗುಂಗುರು ಕೂದಲು ನೋಡಲು ಆಕರ್ಷಣೀಯ ಹಾಗೂ ನಿಮಗೆ ವಿಭಿನ್ನ ಲುಕ್ ನೀಡುತ್ತದೆ. ಗುಂಗುರು ಕೂದಲು ತೆಳುವಾದರೂ ದಪ್ಪ ಕೂದಲಿರುವ ಅನುಭವ ನೀಡುತ್ತದೆ. ಇದೆ ಕಾರಣಕ್ಕೆ ಹೆಚ್ಚಿನ ಮಂದಿ ಗುಂಗುರು ಕೂದಲನ್ನು ಲೈಕ್ ಮಾಡುತ್ತಾರೆ.

## ಶ್ರೀದೇವಿ ಮೂರನೇ ಪುತ್ರಿ ಪ್ರಭಾಸ್‌ಗೆ ನಾಯಕಿ?





ಬಾಲಿವುಡ್‌ನಲ್ಲಿ ಲೇಡಿ ಸೂಪರ್‌ಸ್ಟಾರ್ ಪಟ್ಟಕ್ಕೇರಿದ್ದ ನಟಿ ಶ್ರೀದೇವಿ. ದುರಾದೃಷ್ಟವಶಾತ್ ಈ ನಟಿ ಇಂದು ನಮ್ಮೊಂದಿಗೆ ಇಲ್ಲ. ಆದರೆ, ಇವರ ಸಿನಿಮಾಗಳನ್ನು ಮರೆಯೋಕೆ ಸಾಧ್ಯವೇ..? ಈಗ ಶ್ರೀದೇವಿಯ ಮಕ್ಕಳು ಸಿನಿಮಾರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಇಬ್ಬರೂ ಹೆಣ್ಣು ಮಕ್ಕಳೂ ಚಿತ್ರರಂಗಕ್ಕೆ ಈಗಾಗಲೇ ಎಂಟ್ರಿ ಕೊಟ್ಟಿದ್ದಾರೆ.

ಅದರಲ್ಲಿ ಜಾಹ್ನವಿ ಕಪೂರ್ ಸಿನಿಮಾ ಪ್ರೇಮಿಗಳ ಫೇವರಿಟ್ ಆಗಿ ಹೊರ ಹೊಮ್ಮಿದ್ದಾರೆ.

ಇತ್ತೀಚೆಗೆ ತೆಲುಗು ಚಿತ್ರರಂಗಕ್ಕೆ ಕಾಲಿಟ್ಟಿದ್ದ ಜಾಹ್ನವಿ ಕಪೂರ್ ಪ್ರೇಕ್ಷಕರಿಂದ ಭೇಷ್ ಎನಿಸಿಕೊಂಡಿದ್ದಾರೆ. ಎರಡನೇ ಪುತ್ರಿ ಖುಷಿ ಕಪೂರ್ ಕೂಡ ಬಾಲಿವುಡ್ಗೆ ಎಂಟ್ರಿ ಕೊಟ್ಟಿದ್ದಾರೆ. ಇವರಿಬ್ಬರನ್ನು ಇನ್ನೊಬ್ಬ ಪುತ್ರಿ ಯಾರು? ಆಕೆ ಪಾಕಿಸ್ತಾನದಲ್ಲಿ ಇರುವುದು ಏಕೆ? ಅನ್ನುವ ಗೊಂದಲ ಸಹಜ. ದಿವಂಗತ ನಟಿ ಶ್ರೀದೇವಿಗೆ ವಾಸ್ತವದಲ್ಲಿ ಇರೋದು ಇಬ್ಬರು ಪುತ್ರಿಯರೇ. ಆದರೆ, ಮೂರನೇ ಪುತ್ರಿ ನಿಜಕ್ಕೂ ಸ್ಪೆಷಲ್.

ಹೌದು, ಶ್ರೀದೇವಿಯ ಮೂರನೇ ಮಗಳು ಅಂತಲೇ ಜನಪ್ರಿಯವಾಗಿರುವ ನಟಿಯೊಬ್ಬರು ಇದ್ದಾರೆ. ಆಕೆ ಭಾರತದ ನಟಿಯಲ್ಲ. ಆದರೆ, ಇಲ್ಲಿನ ಹಲವು ಸಿನಿಮಾಗಳಲ್ಲಿ ಈಗಾಗಲೇ ನಟಿಸಿದ್ದಾರೆ. ಇದೇ ನಟೀಗ ಮತ್ತೆ ಭಾರತಕ್ಕೆ ಮರಳುತ್ತಿದ್ದು, ಪ್ರಭಾಸ್ ಸಿನಿಮಾದಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಲಿದ್ದಾರೆ ಅನ್ನೋ ಮಾತು ಕೇಳಿ ಬರುತ್ತಿದೆ. ಅಷ್ಟಕ್ಕೂ ಶ್ರೀದೇವಿಯ ಮೂರನೇ ಪುತ್ರಿ ಯಾರು? ತಿಳಿಯಲು ಮುಂದೆ ಓದಿ..

2017ರಲ್ಲಿ ತೆರೆಕಂಡಿದ್ದ ಶ್ರೀದೇವಿಯ ಸಿನಿಮಾದಲ್ಲಿ ಈ ಪಾಕಿಸ್ತಾನದ ನಟಿ ಕಾಣಿಸಿಕೊಂಡಿದ್ದರು. ಆ ಸಿನಿಮಾದಲ್ಲಿ ಶ್ರೀದೇವಿಯ ಮಗಳ ಪಾತ್ರದಲ್ಲಿ ನಟಿಸಿ ಗಮನ ಸೆಳೆದಿದ್ದರು. ಆಕೆಯ ಹೆಸರು ಸಜಲ್ ಅಲಿ. ಅಷ್ಟಕ್ಕೂ ಸ್ವತ: ಶ್ರೀದೇವಿಯೇ ಈಕೆಯನ್ನು ತನ್ನ ಮೂರನೇ ಮಗಳು ಎಂದು ಹೇಳಿಕೊಂಡಿದ್ದರು. ಈ ನಟಿ ಶ್ರೀದೇವಿಯೊಂದಿಗೆ 2017ರಲ್ಲಿ ತೆರೆಕಂಡಿದ್ದ 'ಮಾಮ್' ಅನ್ನೋ ಸಿನಿಮಾದಲ್ಲಿ ನಟಿಸಿದ್ದರು. ಆ ವೇಳೆ ಇಬ್ಬರ ನಡುವೆ ಒಂದೊಳ್ಳೆ ಬಾಂಧವ್ಯ ಬೆಳೆದಿತ್ತು.

ಶ್ರೀದೇವಿ ಸಂದರ್ಶನವೊಂದರಲ್ಲಿ ನನಗೆ ಇನ್ನೊಬ್ಬ ಮಗಳು ಇದ್ದಾಳೆ ಎಂದು ಪಾಕಿಸ್ತಾನದ ಸಜಲ್ ಅಲಿ ಬಗ್ಗೆ ಹೇಳಿದ್ದರು. 2018ರಲ್ಲಿ ಶ್ರೀದೇವಿ ನಿಧನರಾದಾಗ ಪಾಕಿಸ್ತಾನದ ಈ ನಟಿ ಭಾವಕರಾಗಿದ್ದರು. ನಾನು ಈ ವಿಷಯ ಕೇಳಿ ಶಾಕ್ ಆಗಿದೆ. ನಾನು ಮತ್ತೆ ನನ್ನ ತಾಯಿಯನ್ನು ಕಳೆದುಕೊಂಡಂತೆ ಭಾಸವಾಗುತ್ತಿದೆ ಎಂದು ಹೇಳಿದ್ದರು. 2017ರಲ್ಲಿ ಸಜಲ್ ಅಲಿಯ ತಾಯಿ ಕೂಡ ಕ್ಯಾನ್ಸರ್‌ನಿಂದ ಮೃತಪಟ್ಟಿದ್ದರು.

ಸಜಲ್ ಅಲಿ ಪಾಕಿಸ್ತಾನದಲ್ಲಿ ಜನಪ್ರಿಯ ನಟಿ. ಅಲ್ಲಿನ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. 'ಜಿಂದಗಿ ಕಿತನಿ ಹಸೀನ್ ಹೇ', 'ಖೇಲ್ ಖೇಲ್ ಮೇ' ಅಂತಹ ಸಿನಿಮಾಗಳಲ್ಲಿ ನಟಿಸಿದ್ದಾರೆ. ಹಾಗೇ ಹಿಂದಿ ಸಿನಿಮಾ 'ಮಾಮ್'ನಲ್ಲಿ ನಟಿಸಿದ್ದಾರೆ. ಸಿನಿಮಾ ಅಷ್ಟೇ ಅಲ್ಲ. ಪಾಕಿಸ್ತಾನದ ಹಲವು ಟಿವಿ ಸೀರಿಯಲ್ಗಳಲ್ಲಿಯೂ ಸಜಲ್ ಅಲಿ ಕಾಣಿಸಿಕೊಂಡಿದ್ದು, ಅಲ್ಲಿನ ಜನಪ್ರಿಯ ನಟಿಯರ ಸಾಲಿನಲ್ಲಿ ಸೇರಿಕೊಂಡಿದ್ದಾರೆ.

## ಮಂಗ್ಲಿ ಹಾಡಿಗೆ ಸೊಂಟ ಬಳುಕಿಸಿದ ರಾಗಿಣಿ



ಪವಿತ್ರಾ ಇಂಟರ್‌ನ್ಯಾಷನಲ್ ಮೂವೀಮೇಕರ್ಸ್ ಅಡಿಯಲ್ಲಿ ಛಲವಾದಿ ಕುಮಾರ್ ಅವರು ನಿರ್ಮಿಸಿರುವ ಕನ್ನಡದ ಬಹು ನಿರೀಕ್ಷಿತ ಸಂಜು ವೆಡ್ಸ್ ಗೀತಾ-2 ಚಿತ್ರದ ಹಾಡಿನ ಬಿಡುಗಡೆ ಸಮಾರಂಭ ಅಂಬೇಡ್ಕರ್ ಭವನದ ಸುಂದರ ವೇದಿಕೆಯಲ್ಲಿ ನೆರವೇರಿತು. ತುಪ್ಪದ ಬೆಡಗಿ ರಾಗಿಣಿ ದ್ವಿವೇದಿ ಅಭಿನಯದ ಈ ಹಾಡನ್ನು ಛಲವಾದಿ ಮಹಾಸಭಾದ ಜ್ಞಾನಪ್ರಕಾಶ ಸ್ವಾಮೀಜಿ ಅವರು ಬಿಡುಗಡೆ ಮಾಡಿದರು. ಜೊತೆಗೆ ಬಸನಾಗಿ ಸ್ವಾಮೀಜಿ ಕೂಡ ಉಪಸ್ಥಿತರಿದ್ದರು.

ಇದೇ ವೇದಿಕೆಯಲ್ಲಿ ಉಪಸ್ಥಿತರಿದ್ದ ಛಲವಾದಿ ಮಹಾಸಭಾದ ಅಧ್ಯಕ್ಷ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡುತ್ತ 'ನಮ್ಮ ಸಹೋದರ ಕುಮಾರ್ ಈಗ ಸಿನಿಮಾ ರಂಗದಲ್ಲಿ ನಿರ್ಮಾಪಕನಾಗಿ ಮೊದಲ ಹೆಜ್ಜೆ ಇಟ್ಟಿದ್ದಾರೆ, ತುಂಬಾ ಖರ್ಚು ಮಾಡಿ ಅದ್ದೂರಿಯಾಗಿ ಈ ಚಿತ್ರವನ್ನು ನಿರ್ಮಿಸಿದ್ದಾರೆ, ಅಲ್ಲದೆ ನಮ್ಮವರೇ ಆದ ನಾಗಶೇಖರ್ ಇದಕ್ಕೆ ನಿರ್ದೇಶನ ಮಾಡಿದ್ದಾರೆ. ಸಮಾಜದ ನ್ಯೂನತೆಗಳನ್ನು ತೊಡೆದು ಹಾಕೋ ಕೆಲಸವನ್ನು ನಮ್ಮ ಸಿನಿಮಾಗಳು ಮಾಡಲಿ, ಈ ಚಿತ್ರವು ಅತ್ಯಂತ ಯಶಸ್ವಿಯಾಗಲಿ ಅಂತ ಹಾರೈಸುತ್ತೇನೆ ಎಂದು ಶುಭ ಹಾರೈಸಿದರು. ನಾಗಶೇಖರ್ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿರುವ ಈ ಚಿತ್ರದಲ್ಲಿ ಸಂಜು ಹಾಗೂ ಗೀತಾ ಪ್ರೇಮಕಥೆಯನ್ನು ರೇಷ್ಮೆ ಬೆಳೆಯುವ ರೈತರ ಹೋರಾಟದ ಹಿನ್ನೆಲೆ ಇಟ್ಟುಕೊಂಡು ನಿರೂಪಿಸಿದ್ದಾರೆ. ಈ ಚಿತ್ರದಲ್ಲಿ ಒಬ್ಬ ರೇಷ್ಮೆ ಬೆಳೆಗಾರನಾಗಿ ಶ್ರೀನಗರ ಕಿಟ್ಟಿ ಕಾಣಿಸಿಕೊಂಡಿದ್ದು, ನಾಯಕಿಯಾಗಿ ರಚಿತಾರಾಮ್ ಅಭಿನಯಿಸಿದ್ದಾರೆ. ನಂತರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ನಿರ್ಮಾಪಕ ಛಲವಾದಿ ಕುಮಾರ್, ಡಿಫರೆಂಟ್ ಪ್ಯಾಟ್ರನ್‌ನಲ್ಲಿ ಮೂಡಿಬಂದಿರುವ, ರಾಗಿಣಿ ಅಭಿನಯದ ಈ ಹಾಡನ್ನು ನಮ್ಮ ನಾರಾಯಣಸ್ವಾಮಿ ಅವರ ಕೈಲೇ ರಿಲೀಸ್ ಮಾಡಿಸಬೇಕೆಂದಿತ್ತು, ಹಾಡು ಅದ್ಭುತವಾಗಿ ಮೂಡಿಬಂದಿದೆ. ಇದು ಅಪ್ಪಟ ಫ್ಯಾಮಿಲಿ ಸ್ಟೋರಿ, ಡಾ.ರಾಜ್‌ಕುಮಾರ್ ಅವರ ಸಿನಿಮಾಗಳನ್ನು ನೆನಪಿಸುತ್ತೆ, ರಚಿತಾರಾಮ್, ರಂಗಾಯಣ ರಘು, ಸಾಧುಕೋಕಿಲ, ತಬಲಾನಾಣಿ ಸಂಪತ್ ಹೀಗೆ ಎಲ್ಲಾ ದೊಡ್ಡ ದೊಡ್ಡ ಕಲಾವಿದರೇ ಅಭಿನಯಿಸಿದ್ದಾರೆ ಎಂದು ಹೇಳಿದರು.

## ನವರಾತ್ರಿಗೆ ಮನರಂಜನೆ ಹೂರಣ ಹೊತ್ತು ಬರ್ತಿದೆ ಸುವರ್ಣ ದಸರಾ ದರ್ಬಾರ್...




ದಸರಾ ಹಬ್ಬದ ವಿಶೇಷವಾಗಿ ವೀಕ್ಷಕರಿಗೆ ಇನ್ನಷ್ಟು ಮನರಂಜನೆಯನ್ನು ನೀಡುವ ಉದ್ದೇಶದಿಂದ ಸ್ಟಾರ್ ಸುವರ್ಣ ವಾಹಿನಿಯು ಕಿರುತೆರೆಯ ಅತೀ ದೊಡ್ಡ ದಸರಾ ಸಂಭ್ರಮವನ್ನೊಳಗೊಂಡ ಸುವರ್ಣ ದಸರಾ ದರ್ಬಾರ್ ಎಂಬ ವಿಶೇಷ ಕಾರ್ಯಕ್ರಮವನ್ನು ಪ್ರಸಾರ ಮಾಡಲು ಸಜ್ಜಾಗಿದೆ. ನವರಾತ್ರಿಯ ಈ ಸಂಭ್ರಮದಲ್ಲಿ ಸಡಗರವನ್ನು ಇನ್ನಷ್ಟು ಹೆಚ್ಚಿಸಲು ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ನಾಡಹಬ್ಬದ ಪ್ರಯುಕ್ತ ಸುವರ್ಣ ದಸರಾ ದರ್ಬಾರ್ ವೇದಿಕೆಯಲ್ಲಿ ಅಂಬಾರಿಯಲ್ಲಿರುವ ಚಾಮುಂಡೇಶ್ವರಿ ದೇವಿಗೆ ಪೂಜೆ ಪುರಸ್ಕಾರಗಳನ್ನು ಮಾಡಲಾಗಿದೆ. ನವಶಕ್ತಿಯರ ಮಹತ್ವವನ್ನು ಸಾರುವ ಈ ನವರಾತ್ರಿಯಂದು ಇದೇ ಮೊದಲ ಬಾರಿಗೆ ತಾಯಂದಿರ ಮಹತ್ವವನ್ನು ಸಾರಲು ಕಿರುತೆರೆ ಕಲಾವಿದರು ತಮ್ಮ ತಾಯಂದಿರೊಂದಿಗೆ ವೇದಿಕೆಯಲ್ಲಿ ಭಾಗಿಯಾಗಿದ್ದು, ತಾಯಂದಿರ ಬಗ್ಗೆ ಹಿತನುಡಿಗಳನ್ನಾಡಿ, ತಾಯಂದಿರ ಪಾದ ಪೂಜೆಯನ್ನು ಮಾಡಿ ಉಡುಗೊರೆಯನ್ನು ನೀಡಿದ್ದಾರೆ. ಇನ್ನು ಈ ಕಾರ್ಯಕ್ರಮದ ಮತ್ತೊಂದು ವಿಶೇಷ ಅಂದ್ರೆ, ನಟ ರೋರಿಂಗ್ ಸ್ಟಾರ್ ಶ್ರೀ ಮುರಳಿಯವರು ಆಗಮಿಸಿ ಕಾರ್ಯಕ್ರಮಕ್ಕೆ ಇನ್ನಷ್ಟು ಮೆರುಗು ತಂದು ಕೊಟ್ಟಿದ್ದಾರೆ. ಜೊತೆಗೆ ತಾಯಿಯ ಬಗ್ಗೆ ಮಾತನಾಡಿ ಭಾವುಕರಾಗಿದ್ದರು.

'ನೀನಾದೆನಾ' ಖ್ಯಾತಿಯ ವಿಕ್ರಂ-ವೇದಾ, ನಟಿ ತನಿಷಾ, ವರ್ತೂರ್ ಸಂತೋಷ್, ಕಿರಿಕ್ ಕೀರ್ತಿ, ರೆಮೋ, ಸ್ನೇಹಿತ್, ಅನನ್ಯ, ನಟಿ ಪ್ರಿಯಾಂಕ, ಗಾಯಕ ಚಿನ್ಮಯ್ ಆತ್ರೇಯಸ್ ಎಲ್ಲರೂ ಒಂದಾಗಿ ವೇದಿಕೆಯಲ್ಲಿ ಭರ್ಜರಿ ಮನರಂಜನೆಯ ಮಹಾ ಮಳೆಯನ್ನೇ ಸುರಿಸಿದ್ದಾರೆ. ನಟಿ ಮಾನ್ವಿತಾ ಹರೀಶ್ ಹಾಗು ರಕ್ಷಕ್ ಬುಲೆಟ್ ಅದ್ಬುತ ಡಾನ್ಸ್ ಪರ್ಫಾರ್ಮೆನ್ಸ್ ನೀಡಿದ್ದು, ಕಾರ್ತಿಕ್ ಹಾಗು ನಮ್ರತಾ ಜೋಡಿಯಾಗಿ ಮಾಡಿರೋ ರೇನ್ ಡಾನ್ಸ್ ಗೆ ವೀಕ್ಷಕರು ಮನಸೋಲೋದಂತೂ ಖಚಿತ.

'ಸುವರ್ಣ ಸೂಪರ್ ಸ್ಟಾರ್' ಖ್ಯಾತಿಯ ನಟಿ, ನಿರೂಪಕಿ ಶಾಲಿನಿಯವರು 'ದಸರಾ ದರ್ಬಾರ್' ಕಾರ್ಯಕ್ರಮದ ನಿರೂಪಣೆಯ ಜವಾಬ್ದಾರಿಯನ್ನು ನಿಭಾಯಿಸಿದ್ದಾರೆ. ಜೊತೆಗೆ ಭರ್ಜರಿ ಡಾನ್ಸ್, ಹಾಡು ಹರಟೆ, ಆಟ ತುಂಟಾಟಗಳಿಂದ ವೀಕ್ಷಕರಿಗೆ ಮನರಂಜನೆಯ ಹೂರಣವನ್ನು ನೀಡಲಿದೆ ಸ್ಟಾರ್ ಸುವರ್ಣ.

ಜಬರ್ದಸ್ತ್ ಮೋಜು ಮಸ್ತಿಯನ್ನು ಹೊತ್ತು ಬರ್ತಿದೆ ಸುವರ್ಣ ದಸರಾ ದರ್ಬಾರ್ ಇದೇ ಭಾನುವಾರ ರಾತ್ರಿ 8 ಗಂಟೆಗೆ ನಿಮ್ಮ ನೆಚ್ಚಿನ ಸ್ಟಾರ್ ಸುವರ್ಣ ವಾಹಿನಿಯಲ್ಲಿ ತಪ್ಪದೇ ವೀಕ್ಷಿಸಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕ ನಷ್ಟಗಳು, ಸಾಲದ ಚಿಂತೆ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಪಾಲುದಾರಿಕೆಯಲ್ಲಿ ನಷ್ಟ

**ವೃಷಭ:** ಆರೋಗ್ಯದಲ್ಲಿ ವ್ಯತ್ಯಾಸ, ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ಪ್ರೀತಿ ಪ್ರೇಮದಲ್ಲಿ ಸಮಸ್ಯೆ, ಮಕ್ಕಳಿಗಾಗಿ ಅಧಿಕ ಖರ್ಚು

**ಮಿಥುನ:** ವಿದ್ಯಾಭ್ಯಾಸದಲ್ಲಿ ಹಿನ್ನಡೆ, ಬಂಧುಗಳಿಂದ ಸಹಾಯ, ಮಕ್ಕಳ ಜೀವನದಲ್ಲಿ ವ್ಯತ್ಯಾಸ, ಭಾವನೆಗಳಿಗೆ ಪೆಟ್ಟು

**ಕಟಕ:** ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ, ಮಾನಸಿಕ ಅಸಮತೋಲನ, ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ಆರ್ಥಿಕ ಒತ್ತಡಗಳಿಂದ ಅನಾರೋಗ್ಯ

**ಸಿಂಹ:** ಬಂಧುಗಳು ದೂರ, ದೈಹಿಕ ಅಸಮರ್ಥತೆ, ಆತ್ಮವಿಶ್ವಾಸದಿಂದ ಜಯ, ಅನಗತ್ಯ ತಿರುಗಾಟ

**ಕನ್ಯಾ:** ಆರ್ಥಿಕ ಹಿನ್ನಡೆಗಳು, ಮಾತಿನಿಂದ ಸಮಸ್ಯೆ, ಹಳೆಯ ನೆನಪುಗಳು ಕಾಡುವವು, ಪ್ರಯಾಣದಲ್ಲಿ ಸಮಸ್ಯೆ

**ತುಲಾ:** ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ಅಪಕೀರ್ತಿ ಅವಮಾನ, ಆತ್ಮ ಸಂಕಟಗಳು, ಆಯುಷ್ಯದ ಭೀತಿ

**ವೃಶ್ಚಿಕ:** ಅಕ್ರಮ ಸಂಪಾದನೆ, ಸಂಗಾತಿಯಿಂದ ಲಾಭ, ಕೆಟ್ಟ ಆಲೋಚನೆಗಳು, ಉದ್ಯೋಗದಲ್ಲಿ ಅನುಕೂಲ

**ಧನಸ್ಸು:** ಪ್ರಯಾಣದಲ್ಲಿ ಅನುಕೂಲ, ತಂದೆಯಿಂದ ಸಹಕಾರ, ಉದ್ಯೋಗ ನಷ್ಟಗಳು, ಲೋಕ ನಿಂದನೆ

**ಮಕರ:** ಭಾವನಾತ್ಮಕವಾಗಿ ಸೋಲು, ಬಾಲಗ್ರಹ ದೋಷಗಳು, ಮಕ್ಕಳ ಭವಿಷ್ಯದಲ್ಲಿ ಹಿನ್ನಡೆ, ಅನಿರೀಕ್ಷಿತ ಆಪತ್ತು

**ಕುಂಭ:** ಸ್ಥಿರಾಸ್ತಿಯಿಂದ ನಷ್ಟ, ಮಾನಸಿಕ ದೌರ್ಬಲ್ಯ, ಸಂಸಾರದಲ್ಲಿ ಸಮಸ್ಯೆಗಳು, ವಿದ್ಯಾಭ್ಯಾಸದಲ್ಲಿ ತೊಡಕು

**ಮೀನ:** ದಾಂಪತ್ಯದಲ್ಲಿ ಸಮಸ್ಯೆಗಳು, ದುರ್ವಾರ್ತೆ ಕೇಳುವಿರಿ, ಬಂಧುಗಳ ಜೀವನದಲ್ಲಿ ವ್ಯತ್ಯಾಸ, ಕೆಲಸ ಕಾರ್ಯಗಳಲ್ಲಿ ಸೋಲು

## ವಿಶ್ವ ಮಾನಸಿಕ ಆರೋಗ್ಯ ದಿನ

ಅಕ್ಟೋಬರ್ 10 ರಂದು ವಿಶ್ವ ಮಾನಸಿಕ ಆರೋಗ್ಯ ದಿನ ಮತ್ತು ಮಾನಸಿಕ ಆರೋಗ್ಯದ ಬಗ್ಗೆ ನಮ್ಮ ತಿಳುವಳಿಕೆ ಬೆಳೆದಂತೆ, ನಾವು ಅದರೊಂದಿಗೆ ಬೆಳೆಯುತ್ತೇವೆ. ತೊಂಬತ್ತರ ದಶಕದ ಆರಂಭದಲ್ಲಿ ವರ್ಲ್ಡ್ ಫೆಡರೇಶನ್ ಆಫ್ ಮೆಂಟಲ್ ಹೆಲ್ತ್ (ಫಊಈಒಊ) ಅಧಿಕೃತವಾಗಿ ದಿನವನ್ನು ಸ್ಥಾಪಿಸಿದಾಗಿನಿಂದ ಮಾನಸಿಕ ಆರೋಗ್ಯವು ಬಹಳ ದೂರ ಸಾಗಿದೆ. ನಮ್ಮ ಸ್ವಯಂ-ಅರಿವು ಮತ್ತು ಅದರ ಬಗೆಗಿನ ಸೂಕ್ಷ್ಮತೆಯು ವಿಷಯಗಳನ್ನು ಉತ್ತಮವಾಗಿ ಬದಲಾಯಿಸಿದೆ. ಮಾನಸಿಕ ಆರೋಗ್ಯದ ಸುತ್ತಲಿನ ನಮ್ಮ ಭಾಷೆಯು ಹುಚ್ಚು ಮತ್ತು ಹುಚ್ಚು ಪದಗಳನ್ನು ಕಡಿಮೆ ಚಪ್ಪಲಿಯಾಗಿ ಬಳಸುವುದರಿಂದ ಸುಧಾರಿಸಿದೆ ಮತ್ತು ಅವು ಉದ್ದೇಶಪೂರ್ವಕವಾಗಿ ನೋಯಿಸುತ್ತವೆ ಮತ್ತು ಕಳಂಕವನ್ನು ಉಂಟುಮಾಡಬಹುದು ಎಂದು ನಾವು ಚೆನ್ನಾಗಿ ಅರ್ಥಮಾಡಿಕೊಳ್ಳುತ್ತೇವೆ. ನಾವು ಬಹಳಷ್ಟು ಕಲಿತಿದ್ದರೂ, ಸಮಾಜವಾಗಿ ವಿಕಸನಗೊಳ್ಳಲು ನಾವು ಇನ್ನೂ ಹೆಚ್ಚಿನದನ್ನು ಮಾಡಬಹುದು.

1992 ರಲ್ಲಿ, ಆ ಸಮಯದಲ್ಲಿ ಡೆಪ್ಯುಟಿ ಸೆಕ್ರೆಟರಿ ಜನರಲ್ ರಿಚರ್ಡ್ ಹಂಟರ್ ನೇತೃತ್ವದ ವರ್ಲ್ಡ್ ಫೆಡರೇಶನ್ ಆಫ್ ಮೆಂಟಲ್ ಹೆಲ್ತ್ ವಿಶ್ವ ಮಾನಸಿಕ ಆರೋಗ್ಯ ದಿನವನ್ನು ರಚಿಸಿತು. ಒಟ್ಟಾರೆಯಾಗಿ ಮಾನಸಿಕ ಆರೋಗ್ಯವನ್ನು ಪ್ರತಿಪಾದಿಸುವುದನ್ನು ಹೊರತುಪಡಿಸಿ ಅವರಿಗೆ ನಿಖರವಾದ ಉದ್ದೇಶವಿರಲಿಲ್ಲ.

ಪ್ರಪಂಚವು ಹಲವಾರು ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಹೊಂದಿದ್ದು ಅದನ್ನು ಸರಿಯಾಗಿ ಚಿಕಿತ್ಸೆ ನೀಡಲಾಗಿಲ್ಲ. ಫ್ರಾನ್ಸ್‌ನಲ್ಲಿ ಚಿಕಿತ್ಸೆಗಾಗಿ ಸಾರ್ವಜನಿಕ ಹಣವನ್ನು ಪಡೆಯಲು ಹೋರಾಟಗಳು, ನ್ಯೂಜಿಲೆಂಡ್ನಲ್ಲಿ ಅಮಾನವೀಯ ಚಿಕಿತ್ಸೆ ಮತ್ತು ಮಾನಸಿಕ ಆರೋಗ್ಯವು ನಿಜವಾಗಿ ಏನೆಂಬುದರ ಬಗ್ಗೆ ಒಟ್ಟಾರೆ ಅಜ್ಞಾನ. ಜಾಗತಿಕ ಬಿಕ್ಕಟ್ಟನ್ನು ಪರಿಹರಿಸಲು ಜಾಗತಿಕ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು WFMH ಗೆ ತಿಳಿದಿತ್ತು.

ಮೊದಲ ಮೂರು ವರ್ಷಗಳ ಕಾಲ, U.S. ಮಾಹಿತಿ ಏಜೆನ್ಸಿ ಉಪಗ್ರಹದ ಮೂಲಕ ಜಗತ್ತಿನಾದ್ಯಂತ ಎರಡು-ಗಂಟೆಗಳ ಟೆಲಿಕಾಸ್ಟ್ ಪ್ರಸಾರವಿತ್ತು. ಸ್ಟುಡಿಯೊವು ಫ್ಲೋರಿಡಾದ ತಲ್ಲಾಹಸ್ಸಿಯಲ್ಲಿ ನೆಲೆಗೊಂಡಿದೆ ಮತ್ತು ಅವರ ವಕಾಲತ್ತು ಸಂದೇಶವನ್ನು ಜಗತ್ತಿಗೆ ತಲುಪಿಸಲು ಇದು ಉಪಯುಕ್ತ ಮಾರ್ಗವಾಗಿದೆ. ಅವರು ಚಿಲಿ, ಇಂಗ್ಲೆಂಡ್, ಆಸ್ಟ್ರೇಲಿಯಾ ಮತ್ತು ಜಾಂಬಿಯಾದಿಂದ ಭಾಗವಹಿಸಿದ್ದರು, ಆದರೆ ಜಿನೀವಾ, ಅಟ್ಲಾಂಟಾ ಮತ್ತು ಮೆಕ್ಸಿಕೋ ಸಿಟಿಗಳು ಪ್ರಸಾರಕ್ಕಾಗಿ ಪೂರ್ವ-ಟೇಪ್ ಮಾಡಿದ ವಿಭಾಗಗಳನ್ನು ಹೊಂದಿದ್ದವು. ಮೊದಲ ವಿಶ್ವ ಮಾನಸಿಕ ಆರೋಗ್ಯ ದಿನದ ಥೀಮ್ 1994 ರಲ್ಲಿ 'ವಿಶ್ವದಾದ್ಯಂತ ಮಾನಸಿಕ ಆರೋಗ್ಯ ಸೇವೆಗಳ ಗುಣಮಟ್ಟವನ್ನು ಸುಧಾರಿಸುವುದು'. ಅಭಿಯಾನದ ನಂತರ 27 ದೇಶಗಳು ಪ್ರತಿಕ್ರಿಯೆ ವರದಿಗಳನ್ನು ಕಳುಹಿಸಿದವು ಮತ್ತು ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ನಲ್ಲಿ ರಾಷ್ಟ್ರೀಯ ಅಭಿಯಾನಗಳು ನಡೆದವು.

# ಧ್ಯಾನ ಮಂದಿರದಲ್ಲಿ ರೈಸಿಂಗ್ ವಿತ್ ಕೈಂಡ್‌ನೆಸ್ ಯುವ ಶೃಂಗಸಭೆ

**ಬೆಂಗಳೂರು:** ಕಾಮನ್ವೆಲ್ತ್, ಮರುಭೂಮೀಕರಣವನ್ನು ಎದುರಿಸಲು ವಿಶ್ವಸಂಸ್ಥೆಯ ಸಮಾವೇಶ ತೆಲಂಗಾಣ ಸರ್ಕಾರ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಮತ್ತು ಭಾರತೀಯ ಕೃಷಿ ಸಂಶೋಧನಾ ಮಂಡಳಿ ಹಾರ್ಟ್ಫುಲ್ನೆಸ್ ಸಂಸ್ಥೆಯು ಜಂಟಿಯಾಗಿ, ಹೈದರಾಬಾದ್ನ ಹೊರವಲಯದಲ್ಲಿರುವ ಹಾರ್ಟ್ಫುಲ್ನೆಸ್ನ ಪ್ರಧಾನ ಕಚೇರಿಯಾದ ಕಾನ್ಹಾ ಶಾಂತಿ ವನಂನಲ್ಲಿ ಮೂರು ದಿನಗಳ ಯುವ ಶೃಂಗಸಭೆಯಾದ ''ರೈಸಿಂಗ್ ವಿತ್ ಕೈಂಡ್ನೆಸ್'' ನ್ನು ಉದ್ಘಾಟಿಸಿದವು. ದಯಾಪೂರ್ವಕತೆ ಮತ್ತು ಸಹಾನುಭೂತಿಯನ್ನು ಬೆಳೆಸಲು ಯುವಕರನ್ನು ಪ್ರೇರೇಪಿಸುವ ಗುರಿಯನ್ನು ಹೊಂದಿರುವ ಈ ವಾರ್ಷಿಕ ಶೃಂಗಸಭೆಯು ಪ್ರಸಕ್ತ ವರ್ಷದ ಎರಡನೇ ಆವೃತ್ತಿಯಲ್ಲಿದೆ ಮತ್ತು ದೇಶಾದ್ಯಂತದ ವಿವಿಧ ಶಿಕ್ಷಣ ವಿಭಾಗಗಳಿಂದ 10,000 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಯುವಕರನ್ನು ಆಕರ್ಷಿಸಿದೆ. ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡೆ, ಕಾರ್ಮಿಕ ಮತ್ತು ಉದ್ಯೋಗ ಸಚಿವರಾದ ಗೌರವಾನ್ವಿತ ಡಾ.ಮನ್ಸುಖ್ ಮಾಂಡವಿಯಾ ಅವರು ಇಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಖಅಂಖ.. ಶಿಕ್ಷಣ ಇಲಾಖೆಯ ಉಪ ಮಹಾನಿರ್ದೇಶಕ ಡಾ. ಆರ್. ಸಿ. ಅಗ್ರವಾಲ್, ಹರಿ ಕೃಷ್ಣ ಎಕ್ಸ್ಪ್ಲೋರ್ಟ್ ಅಇಔ. ಬ್ರಿಜೇಶ್ ಧೋಲಾಕಿಯಾ ಮತ್ತು ಗೌರವಾನ್ವಿತ ಅತಿಥಿಗಳಾಗಿ ಭಾಗವಹಿಸಿದ್ದ ವಿಶ್ವ ಚಾಂಪಿಯನ್ ಸಿಂಧು ಇತರ ಗಣ್ಯರಲ್ಲಿ ಸೇರಿದ್ದರು. ಅವರನ್ನು ಹಾರ್ಟ್ಫುಲ್ನೆಸ್ ಮಾರ್ಗದರ್ಶಿಗಳು ಮತ್ತು ಶ್ರೀ ರಾಮಚಂದ್ರ ಮಿಷನ್ನಿನ ಅಧ್ಯಕ್ಷರಾದ ಪೂಜ್ಯ ದಾಜಿಯವರು ಕೂಡಿಕೊಂಡರು. ದಾಜಿಯವರು, ಗೌರವಾನ್ವಿತ ಗಣ್ಯರನ್ನು ಸನ್ಮಾನಿಸಿದರು ಮತ್ತು ಅವರೊಂದಿಗೆ ರೈಸಿಂಗ್ ವಿತ್ ಕೈಂಡ್ನೆಸ್ನ ಭಿತ್ತಿಪತ್ರವನ್ನು ಅನಾವರಣಗೊಳಿಸಿದರು. ಗೌರವಾನ್ವಿತ ಮುಖ್ಯ ಅತಿಥಿಗಳಾದ ಡಾ.ಮನ್ಸುಖ್ ಮಾಂಡವಿಯಾ ಜೀ ಅವರು, ಕಾನ್ಹಾ ಶಾಂತಿ ವನಂನ ಆವರಣದಲ್ಲಿ ಪೂಜ್ಯ ದಾಜಿಯವರ ದೈವೀ ಉಪಸ್ಥಿತಿಯಲ್ಲಿ ಒಂದು ಮರವನ್ನೂ ನೆಟ್ಟರು. ಕೊರಿಯನ್ ಭಾಷೆಯಲ್ಲಿ ಸಹಜಮಾರ್ಗ, ದಿ ಹಾರ್ಟ್ಫುಲ್ನೆಸ್ ವೇ, ಡಿಸೈನಿಂಗ್ ಡೆಸ್ಟಿನಿ ಮತ್ತು ಎ ಹಾರ್ಟ್ಫುಲ್ನೆಸ್ ಡೈರಿ ಎಂಬ ನಾಲ್ಕು ಪುಸ್ತಕಗಳನ್ನು ಬಿಡುಗಡೆ ಮಾಡಲಾಯಿತು.



ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡೆ, ಕಾರ್ಮಿಕ ಮತ್ತು ಉದ್ಯೋಗ ಸಚಿವರಾದ ಡಾ. ಮನ್ಸುಖ್ ಮಾಂಡವಿಯಾ ಅವರು ತಮ್ಮ ಮುಖ್ಯ ಭಾಷಣದಲ್ಲಿ, ಧ್ಯಾನವು ನಮಗೆ ಸ್ಥಿರತೆಯನ್ನು ನೀಡುತ್ತದೆ, ನಮ್ಮನ್ನು ಪೋಷಿಸುತ್ತದೆ, ಜೀವನಕ್ಕೆ ನಿರ್ದೇಶನವನ್ನು ತೋರಿಸುತ್ತದೆ. ಯಶಸ್ವಿಯಾಗಲು ನಿಮಗೆ ಕೇವಲ ಎರಡು ವಿಷಯಗಳು ಬೇಕಾಗುತ್ತವೆ. 1. ಯಶಸ್ವಿ ಜನರ ಜೀವನವನ್ನು ಅಧ್ಯಯನ ಮಾಡುವುದರಿಂದ, ಇಂತಹ ಜನರು ಮಾತ್ರವೇ ನಮ್ಮನ್ನು ಯಶಸ್ವಿಯಾಗಲು ಪ್ರೇರೇಪಿಸಬಹುದು, ಯಶಸ್ವಿ ವ್ಯಕ್ತಿಯಿಂದ ಕಲಿಯಬಹುದು ಮತ್ತು ನಿಮ್ಮ ಶಕ್ತಿಯನ್ನು ಇಂತಹ ಕಡೆಗೆ ತಿರುಗಿಸಬಹುದು. 2. ಬದ್ಧತೆ ಮತ್ತು ಸಮರ್ಪಣೆ. ವಿಕಾಸ್ ಭಾರತ್ಗೆ, ಇದು ಎರಡೂ ವಿಷಯಗಳು ಸರ್ಕಾರಗಳ ಜವಾಬ್ದಾರಿಯಾಗಿದೆ. ಮತ್ತು ಯುವಕರು ಪರಸ್ಪರರ ನಿರೀಕ್ಷೆಗಳೊಂದಿಗೆ ಹೊಂದಿಕೊಳ್ಳುತ್ತಾರೆ. ಮೇಕ್ ಇನ್ ಇಂಡಿಯಾ ಯೋಜನೆಗಳಿಗಾಗಿ ಮತ್ತು ನವೋದ್ಯಮಗಳನ್ನು ಬೆಂಬಲಿಸಲು ನಾವು ಸಂಶೋಧನೆ ಮತ್ತು ಅಭಿವೃದ್ಧಿ ಮತ್ತು ಅಂತರರಾಷ್ಟ್ರೀಯ ಮಾನ್ಯತೆಗಾಗಿ ಪರಿಸರ ವ್ಯವಸ್ಥೆಯನ್ನು ನಿರ್ಮಿಸಿದ್ದೇವೆ. ಭಾರತ ಸರ್ಕಾರವು ಯುವ ಸಂಶೋಧಕರು, ನವೋದ್ಯಮಗಳನ್ನು ಬೆಂಬಲಿಸುತ್ತದೆ ಮತ್ತು ಯುವ ನವೋದ್ಯಮಗಳಿಗೆ ಸಾಲ ನೀಡಲು ಸಹಾಯ ಮಾಡುತ್ತದೆ. ನಾವು ಕಳೆದ ಏಳು ತಿಂಗಳಲ್ಲಿ ಏಕ-ಕಿಟಕಿ ವೇದಿಕೆಯಾದ 'ಮೈ ಭಾರತ್' ವೇದಿಕೆಯನ್ನು ಮಾಡಿದ್ದೇವೆ ಮತ್ತು 33 ಲಕ್ಷಕ್ಕೂ ಹೆಚ್ಚು ಭಾರತೀಯ ಕಂಪನಿಗಳು ಮತ್ತು ಅಂತರರಾಷ್ಟ್ರೀಯ ನೋಂದಾಯಿತ ಕಂಪನಿಗಳೊಂದಿಗೆ ವಿವರಗಳೊಂದಿಗೆ ನೋಂದಾಯಿಸಿದ್ದೇವೆ. ಈ ವರ್ಷದ ಬಜೆಟ್ 100% ಯುವ ಕೇಂದ್ರಿತವಾಗಿದೆ. ಭಾರತ ಸರ್ಕಾರವು ಕಐಖ ಮೂಲಕ ಭಾರತವು ಭಾರತವನ್ನು 'ಆತ್ಮನಿರ್ಭರ' ವನ್ನಾಗಿ ಮಾಡುತ್ತಿದೆ. ಕೋವಿಡ್ ಲಾಕ್ಡೌನ್ ಸಮಯದಲ್ಲಿ ಭಾರತದೊಳಗೆ ಎಪಿಐ ತಯಾರಿಕೆಗೆ ಪ್ರೋತ್ಸಾಹಕಗಳ ಮೂಲಕ ಭಾರತದೊಳಗೆ ಎಪಿಐಗಳನ್ನು ತಯಾರಿಸಲು ನಾವು ಸ್ಫೂರ್ತಿ ಪಡೆದಿದ್ದೇವೆ. ಯುವಕರು ಉತ್ಸಾಹಭರಿತರಾಗಿರಬೇಕು ಮತ್ತು ಪ್ರೇರೇಪಿತರಾಗಿರಬೇಕು ಮತ್ತು ಸಾಧಿಸಿದ ಜ್ಞಾನವನ್ನು ದೇಶದ ಅಭಿವೃದ್ಧಿಗಾಗಿ ಸಕಾರಾತ್ಮಕತೆಯಿಂದ ಇಡಬೇಕು. ಕೆಲಸ ಮತ್ತು ಸಮಾಜ ಸೇವೆಯು ನಮ್ಮ ಚಿಂತನೆಯ ಪ್ರಕ್ರಿಯೆಯಾಗಿರಬೇಕು. ಮುಂದಿನ 25 ವರ್ಷಗಳ ದೇಶದ ಅಭಿವೃದ್ಧಿಗಾಗಿ, ನಾವು ಭಾರತವನ್ನು ಕ್ರೀಡಾ ಕ್ಷೇತ್ರದಲ್ಲಿ ವಿಶ್ವದ ಅಗ್ರ 5 ಕ್ಕೆ ತರುವ ಗುರಿಯನ್ನು ಹೊಂದಿದ್ದೇವೆ ಎಂದು ಹೇಳಿದರು.

## ಅದಾನಿ ಪೋರ್ಟ್ ಹೆಸರಿನಲ್ಲಿ ಬಿಡಗಡೆಯಾಯ್ತು ಅಂಚೆ ಚೀಟಿ

**ಗುಜರಾತ್:** ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಸ್ಮರಣಾರ್ಥ ಅಂಚೆಚೀಟಿಯನ್ನ ಬಿಡುಗಡೆ ಮಾಡಿದ್ದಾರೆ.




ಮುಂದ್ರಾ ಬಂದರು 25 ವರ್ಷಗಳನ್ನು ಪೂರೈಸಿರುವ ಸ್ಮರಣಾರ್ಥ ಈ ಅಂಚೆಚೀಟಿ ಬಿಡುಗಡೆ ಮಾಡಲಾಗಿದೆ.

ಗುಜರಾತ್ ನ ಮುಂದ್ರಾ ಬಂದರು ಅದಾನಿ ಸಮೂಹದ ಭಾಗವಾಗಿದ್ದು, ಭಾರತದ ಪ್ರಮುಖ ಬಂದರುಗಳಲ್ಲಿ ಒಂದಾಗಿದೆ. ಹೀಗಾಗಿ ಅದಾನಿ ಗ್ರೂಪ್ ಅಧ್ಯಕ್ಷ ಗೌತಮ್ ಅದಾನಿ ಗುಜರಾತ್ ಮುಖ್ಯಮಂತ್ರಿಗೆ ಧನ್ಯವಾದ ಅರ್ಪಿಸಿದ್ದಾರೆ. 1998 ರಲ್ಲಿ ಸಣ್ಣ ಜೆಟ್ಟಿಯಿಂದ ಮುಂದ್ರಾ ಬಂದರು ಕಾರ್ಯಾರಂಭ ಮಾಡಿತು. ಆದ್ರೆ ಅದ್ಭುತವಾದ ಸುದೀರ್ಘ ಪಯಣದ ನಂತರ 25 ವರ್ಷಗಳನ್ನು ಪೂರೈಸಿದ್ದು, ಇಂದು ವಿಶ್ವದ ಪ್ರಮುಖ ಬಂದರುಗಳಲ್ಲಿ ಒಂದಾಗಿದೆ ಎಂದು ಗೌತಮ್ ಅದಾನಿ ಸಂತಸ ಹಂಚಿಕೊಂಡಿದ್ದಾರೆ.

## ಕಿಡ್ನ್ಯಾಪ್ ಆಗಿದ್ದ ಇಬ್ಬರಲ್ಲಿ ಓರ್ವ ಯೋಧ ಶವವಾಗಿ ಪತ್ತೆ: ಗುಂಡಿಕ್ಕಿ ಹತ್ಯೆಗೈದಿರುವ ಶಂಕೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯಲ್ಲಿ ಉಗ್ರರು ಅಪಹರಿಸಿದ್ದ ಭಾರತೀಯ ಸೇನೆಯ ಇಬ್ಬರು ಯೋಧರಲ್ಲಿ ಓರ್ವ ಯೋಧ ಶವವಾಗಿ ಪತ್ತೆಯಾಗಿದ್ದಾರೆ. ಯೋಧನ ಮೈಮೇಲೆ ಗುಂಡು ಹಾರಿಸಿರುವ ಗಾಯದ ಗುರುತುಗಳು ಕಂಡುಬಂದಿದ್ದು, ಗುಂಡಿಕ್ಕಿ ಹತ್ಯೆಗೈದಿರುವ ಶಂಕೆ ವ್ಯಕ್ತವಾಗಿದೆ.ಮಂಗಳವಾರ ನಾಪತ್ತೆಯಾಗಿದ್ದ ಟೆರಿಟೋರಿಯಲ್ ಆರ್ಮಿ ಜವಾನ್ ಹಿಲಾಲ್ ಅಹ್ಮದ್ ಭಟ್ ಅವರ ದೇಹವನ್ನು ಅನಂತನಾಗ್‌ನ ಉತ್ರಾಸೂ ಪ್ರದೇಶದ ಸಾಂಗ್ಲಾನ್ ಅರಣ್ಯ ಪ್ರದೇಶದಲ್ಲಿ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೃತದೇಹದಲ್ಲಿ ಗುಂಡು ಮತ್ತು ಚಾಕುವಿನಿಂದ ಚುಚ್ಚಿರುವ ಗುರುತುಗಳು ಪತ್ತೆಯಾಗಿವೆ ಎಂದು ಸೇನಾ ಮೂಲಗಳು ತಿಳಿಸಿವೆ. ಇನ್ನು ಉಗ್ರರಿಂದ ಅಪಹರಣಕ್ಕೆ ಒಳಗಾದ ಇಬ್ಬರು ಸೈನಿಕರ ಪೈಕಿ ಓರ್ವ ಸೈನಿಕ ಉಗ್ರರ ಹಿಡಿತದಿಂದ ಪಾರಾಗಿ ತಪ್ಪಿಸಿಕೊಂಡು ಬಂದಿದ್ದಾರೆ. ಭದ್ರತಾ ಪಡೆಗಳು ಈ ಭಾಗದಲ್ಲಿ ತುರ್ತು ರಕ್ಷಣಾ ಕಾರ್ಯಾಚರಣೆ ಆರಂಭ ಮಾಡಿತ್ತು. ಈ ಕುರಿತು ಭದ್ರತಾ ಪಡೆಗಳು ಮಾಧ್ಯಮಗಳಿಗೆ ಮಾಹಿತಿ ನೀಡಿದ್ದು, ಅಪಹರಣವಾಗಿದ್ದ ಇಬ್ಬರು ಸೈನಿಕರು ಟೆರಿಟೋರಿಯಲ್ ಆರ್ಮಿಗೆ ಸೇರಿದ ಯೋಧರು ಎಂದು ಖಚಿತಪಡಿಸಿದೆ. ಈ ಪೈಕಿ ಓರ್ವ ಯೋಧ ಸುರಕ್ಷಿತವಾಗಿ ವಾಪಸ್ ಆಗಿದ್ದಾರೆ ಎಂದೂ ಭದ್ರತಾ ಪಡೆಗಳು ಮಾಹಿತಿ ನೀಡಿದೆ. ಈ ಭಾಗದಲ್ಲಿ ಸೇನಾ ಪಡೆಗಳು ಕಾರ್ಯಾಚರಣೆ ನಡೆಸಿದ್ದು, ನಾಪತ್ತೆಯಾಗಿದ್ದ ಮತ್ತೋರ್ವ ಯೋಧನಿಗಾಗಿ ಶೋಧಕಾರ್ಯ ನಡೆಸಿತ್ತು.

ಇನ್ನು ಉಗ್ರರ ಗುಂಡಿನ ದಾಳಿಗೆ ಬಲಿಯಾದ ಯೋಧನ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ರಾಹುಲ್‌ಗೆ ಸ್ವಿಗ್ಗಿ ಕ್ಯಾಶ್ ಆನ್ ಡೆಲಿವರಿಯಲ್ಲಿ ಜಿಲೇಬಿ ರವಾನೆ!

**ಚಂಡೀಗಢ:** ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಸತತ ಮೂರನೇ ಬಾರಿಗೆ ಗೆಲುವು ಸಾಧಿಸಿದೆ. ಗೆಲುವಿನ ಹಿನ್ನೆಲೆ ರಾಜ್ಯಾದ್ಯಂತ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ಜಿಲೇಬಿ ಹಂಚಿ ಸಂಭ್ರಮಿಸುತ್ತಿದ್ದಾರೆ. ಈ ನಡುವೆ ಹರಿಯಾಣ ಬಿಜೆಪಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ವಿಳಾಸಕ್ಕೆ ಒಂದು ಕೆಜಿ ಜಿಲೇಬಿಯನ್ನು ಕಳುಹಿಸಿ ಕಾಲೆಳೆದಿದೆ.



ಹೌದು, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ದೆಹಲಿ ನಿವಾಸದ ವಿಳಾಸಕ್ಕೆ ಆನ್ಲೈನ್ ಆಹಾರ ಡೆಲಿವರಿ ಫ್ಲಾಟ್ಫಾರ್ಮ್ ಸ್ವಿಗ್ಗಿ ಮೂಲಕ ಬಿಜೆಪಿ 1 ಕೆಜಿ ಜಿಲೇಬಿ ಕಳುಹಿಸಿದೆ. ಆದರೆ ಪಾವತಿಯನ್ನು ಕ್ಯಾಶ್ ಆನ್ ಡೆಲಿವರಿ ಆಯ್ಕೆ ಮಾಡಿ, ರಾಹುಲ್ ಸ್ವತಃ ಪಾವತಿ ಮಾಡುವಂತೆ ಮಾಡಿದ್ದಾರೆ.

ಈ ಕುರಿತು ಬಿಜೆಪಿ ಎಕ್ಸ್ ಖಾತೆಯಲ್ಲಿ ಜಿಲೇಬಿಯನ್ನು ಆರ್ಡರ್ ಮಾಡಿರುವ ಸ್ಕ್ರೀನ್ ಶಾಟ್ ಅನ್ನು ಹಂಚಿಕೊಂಡಿದೆ. ಅದರಲ್ಲಿ ಹರಿಯಾಣ ಬಿಜೆಪಿಯ ಎಲ್ಲಾ ಕಾರ್ಯಕರ್ತರ ಪರವಾಗಿ ರಾಹುಲ್ ಗಾಂಧಿ ಅವರ ಮನೆಗೆ ಜಿಲೇಬಿಯನ್ನು ಕಳುಹಿಸಲಾಗಿದೆ ಎಂದು ಬರೆಯಲಾಗಿದೆ.

ಈ ಹಿಂದೆ ರಾಹುಲ್ ಗಾಂಧಿ ಅವರು ಚುನಾವಣಾ ಪ್ರಚಾರದ ಸಂದರ್ಭ ಹರಿಯಾಣದಲ್ಲಿ ತಯಾರಿಸುವ ಜಿಲೇಬಿ ತನಗೆ ಇಷ್ಟ ಎಂದಿದ್ದರು. ರಾಜ್ಯದಲ್ಲಿ ಪ್ರಸಿದ್ಧವಾಗಿರುವ ಮಾತು ರಾಮ್ ಹಲ್ವಾಯಿ ಜಿಲೇಬಿಯನ್ನು ನಾನು ಸವಿದಿದ್ದೇನೆ. ಇದು ನನ್ನ ಜೀವನದಲ್ಲೇ ಸವಿದ ಅತ್ಯಂತ ರುಚಿಕರವಾದ ಜಿಲೇಬಿ. ಈ ಜಿಲೇಬಿ ಜಗತ್ತಿನ ಎಲ್ಲಾ ಪ್ರದೇಶಕ್ಕೂ ತಲುಪಬೇಕು ಎಂದು ಹೇಳಿದ್ದರು.

## ಚುನಾವಣಾಧಿಕಾರಿಗಳನ್ನು ಭೇಟಿಯಾದ ಕೈ ನಾಯಕರು

**ನವದೆಹಲಿ:** ಹರಿಯಾಣ ವಿಧಾನಸಭೆ ಚುನಾವಣಾ ಫಲಿತಾಂಶದಿಂದ ಅಸಮಾಧಾನಗೊಂಡಿದ್ದ ಕಾಂಗ್ರೆಸ್ ನಾಯಕರು ಇಂದು ಚುನಾವಣಾಧಿಕಾರಿಗಳನ್ನು ಭೇಟಿ ಮಾಡಿದ್ದಾರೆ. ಬಳಿಕ ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ನಾಯಕ ಪವನ್ ಖೇರಾ, ಇಂದು ಕೆಸಿ ವೇಣುಗೋಪಾಲ್, ಅಶೋಕ್ ಗೆಹ್ಲೋಟ್, ಜೈರಾಮ್ ರಮೇಶ್, ಅಜಯ್ ಮಾಕನ್, ಭೂಪಿಂದರ್ ಸಿಂಗ್ ಹೂಡಾ ಮತ್ತು ಇತರ ಪಕ್ಷದ ಮುಖಂಡರು ಚುನಾವಣಾಧಿಕಾರಿಗಳನ್ನು ಭೇಟಿಯಾದೆವು.ಈ ವೇಳೆ 20 ದೂರುಗಳನ್ನು ಅಧಿಕಾರಿಗಳ ಮುಂದಿಟ್ಟಿದ್ದೇವೆ ಎಂದ್ರು.

ಅದರಲ್ಲಿ 7 ಕ್ಷೇತ್ರಗಳ ದೂರನ್ನು ಲಿಖಿತ ರೂಪದಲ್ಲಿ ಕೊಟ್ಟಿದ್ದೇವೆ. ಇನ್ನು ಎಣಿಕೆಯ ದಿನದಂದು ಬೂತ್‌ಗಳಲ್ಲಿ ಮತಹಾಕುವ ಮೆಷಿನ್‌ಗಳ ಬಗ್ಗೆಯೂ ಅವರ ಗಮನಕ್ಕೆ ತಂದಿದ್ದೇವೆ. ಹೀಗಾಗಿ ತನಿಖೆ ಪೂರ್ಣಗೊಳ್ಳುವವರೆಗೆ ಆ ಯಂತ್ರಗಳನ್ನು ಸೀಲ್ ಮಾಡಿ ಭದ್ರಪಡಿಸಬೇಕು ಎಂದು ಆಗ್ರಹಿಸಿದ್ದೇವೆ. ಮುಂದಿನ 48 ಗಂಟೆಗಳಲ್ಲಿ ನಾವು ಉಳಿದ ದೂರುಗಳನ್ನು ಸಹ ಸಲ್ಲಿಸುವುದಾಗಿ ಅಧಿಕಾರಿಗಳಿಗೆ ತಿಳಿಸಿದ್ದೇವೆ ಎಂದು ಎಂದು ಪವನ್ ಖೇರಾ ಹೇಳಿದರು.



## ಇಸ್ಲಾಮ್ ಬೋಧಕ ಝಾಕಿರ್ ನಾಯ್ಕ್ ಟ್ರೋಲ್

**ಪಾಕಿಸ್ತಾನ:** ಪಾಕ್ ಪ್ರವಾಸದಲ್ಲಿರುವ ವಿವಾದಿತ ಇಸ್ಲಾಮಿಕ್ ಬೋಧಕ ಝಾಕಿರ್ ನಾಯ್ಕ್ ದೇಶಾದ್ಯಂತದ ಹಲವು ನಗರಗಳಲ್ಲಿ ತನ್ನ ಭಾಷಣಗಳಲ್ಲಿ ಆಡಿದ ಮಾತುಗಳಿಗೆ ಸೋಶಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ಟ್ರೋಲ್ ಆಗುತ್ತಿದ್ದಾರೆ. ಇತ್ತೀಚಿನ ಹೇಳಿಕೆಯಲ್ಲಿ ಅವರು ಮದುವೆಯಾಗಲು ಬಯಸುವ ಒಂಟಿ ಮಹಿಳೆಯರಿಗೆ ನೀಡಿರುವ ಚಿತ್ರ, ವಿಚಿತ್ರ ಸಲಹೆಗಳು ತೀರಾ ಟ್ರೋಲ್ ಗೆ ಒಳಗಾಗಿದೆ. ಹೀಗಾಗಿ ಪಾಕಿಸ್ತಾನದ ಸೋಶಿಯಲ್ ಮೀಡಿಯಾ ಬಳಕೆದಾರರು ಈತನನ್ನು ಮನಸೋಯಿಚ್ಛೆ ಟ್ರೋಲ್ ಮಾಡಿದ್ದಾರೆ. ಈತನನ್ನು ಯಾರು ಆಹ್ವಾನಿಸಿದ್ದಾರೆ ದಯವಿಟ್ಟು ಮುಂದಿನ ಬಾರಿ ಅಂತಹ ಅನಕ್ಷರಸ್ಥರನ್ನು ಆಹ್ವಾನಿಸಬೇಡಿ ಎಂದು ಹಲವರು ಜರಿದಿದ್ದಾರೆ. ಭಾರತ ಮತ್ತು ಇತರ ದೇಶಗಳು ಅವನನ್ನು ಏಕೆ ನಿಷೇಧಿಸಿವೆ ಎಂದು ಈಗ ಅರ್ಥವಾಗುತ್ತಿದೆ ಎಂದು ಹಲವರು ಕಾಮೆಂಟ್ ಮಾಡಿದ್ದಾರೆ. ಮಲೇಷ್ಯಾದಲ್ಲಿ ನೆಲೆಸಿರುವ ಈ ನಾಯಕ್, ಕಳೆದ ವಾರ ಪಾಕಿಸ್ತಾನಕ್ಕೆ ಸುಮಾರು ತಿಂಗಳ ಪ್ರವಾಸವನ್ನು ಆರಂಭಿಸಿದ್ದು, ಇದೀಗ ವಿಲಕ್ಷಣ ಹೇಳಿಕೆಗಳನ್ನು ನೀಡಿ ಇಂಟರ್ನೆಟ್ ನಲ್ಲಿ ಟ್ರೊಲ್‌ಗೆ ಸಿಲುಕಿದ್ದಾರೆ.



## ಬ್ರೆಝಿಲ್‌ನ ಕ್ರೈಸ್ತ ಸನ್ಯಾಸಿನಿಗೆ ವಿಶ್ವಸಂಸ್ಥೆಯ ನ್ಯಾನ್ಸೆನ್ ಪ್ರಶಸ್ತಿ

**ವಿಶ್ವಸಂಸ್ಥೆ:** ಕಳೆದ 40 ವರ್ಷಗಳಿಂದ ನಿರಾಶ್ರಿತರು ಮತ್ತು ವಲಸಿಗರಿಗೆ ಸಹಾಯ ಮಾಡಿದ ಬ್ರೆಝಿಲ್ನ ಕ್ರೈಸ್ತ ಸನ್ಯಾಸಿನಿ ಭಗಿನಿ ರೋಸಿಟಾ ಮಿಲೆಸಿ ವಿಶ್ವಸಂಸ್ಥೆಯ ನ್ಯಾನ್ಸೆನ್ ಪ್ರಶಸ್ತಿಗೆ ಆಯ್ಕೆಗೊಂಡಿದ್ದಾರೆ. ಆಂತರಿಕವಾಗಿ ಸ್ಥಳಾಂತರಗೊಂಡವರು ಹಾಗೂ ರಾಷ್ಟ್ರತ್ವ ಇಲ್ಲದ ಜನರ ರಕ್ಷಣೆಗಾಗಿ ಅಸಾಧಾರಣ ಕೆಲಸ ಮಾಡುವವರಿಗೆ ನಿರಾಶ್ರಿತರಿಗಾಗಿನ ವಿಶ್ವಸಂಸ್ಥೆ ಹೈಕಮಿಷನ್ (ಯುಎನ್‌ಎಚ್ಸಿಆರ್) ಪ್ರತೀ ವರ್ಷ ಈ ಪುರಸ್ಕಾರ ನೀಡುತ್ತದೆ. ವಿಶ್ವದಾದ್ಯಂತ ನಿರಾಶ್ರಿತರಿಗೆ ಸೇವೆ ಸಲ್ಲಿಸುವಲ್ಲಿ ಹೆಸರಾದ ಸ್ಕಲಾಬ್ರಿನಿ ಕ್ರೈಸ್ತ ಸನ್ಯಾಸಿನಿ ಸಂಘಟನೆಯ ಸದಸ್ಯೆಯಾದ 79 ವರ್ಷದ ರೋಸಿಟಾ ಮಿಲೆಸಿ ದಕ್ಷಿಣ ಬ್ರೆಝಿಲ್ ಮೂಲದವರಾಗಿದ್ದು 19ನೇ ವಯಸ್ಸಿಗೇ ಕ್ರೈಸ್ತ ಸನ್ಯಾಸಿನಿ ದೀಕ್ಷೆ ಪಡೆದವರು. ನ್ಯಾಯವಾದಿ, ಸಾಮಾಜಿಕ ಕಾರ್ಯಕರ್ತೆ ಮತ್ತು ಮಾನವ ಹಕ್ಕು ಕಾರ್ಯಕರ್ತೆಯಾಗಿ ಬ್ರೆಝಿಲ್ನಲ್ಲಿ 4 ದಶಕಗಳಿಂದ ವಿವಿಧ ರಾಷ್ಟ್ರೀಯತೆಯ ನಿರಾಶ್ರಿತರು ಮತ್ತು ವಲಸಿಗರ ಹಕ್ಕುಗಳು ಮತ್ತು ಘನತೆಯನ್ನು ಪ್ರತಿಪಾದಿಸಿದವರು. ನಾರ್ವೆಯ ಮಾನವತಾವಾದಿ, ವಿಜ್ಞಾನಿ, ಪರಿಶೋಧಕ ಮತ್ತು ರಾಜತಾಂತ್ರಿಕ ಫ್ರಿಡೋಫ್ ನ್ಯಾನ್ಸೆನ್ ಅವರ ಗೌರವಾರ್ಥ 1954ರಲ್ಲಿ ಯುಎನ್‌ಎಚ್ಸಿಆರ್ ನ್ಯಾನ್ಸೆನ್ ನಿರಾಶ್ರಿತರ ಪುರಸ್ಕಾರ ಸ್ಥಾಪಿಸಲಾಗಿದೆ.



## ದಕ್ಷಿಣ ಕೊರಿಯಾ ಜತೆಗಿನ ಗಡಿ ಶಾಶತ ಮುಚ್ಚಲು ಉತ್ತರ ಕೊರಿಯಾ ನಿರ್ಧಾರ

**ಪ್ಯೊಂಗ್ಯಾಂಗ್:** ದಕ್ಷಿಣ ಕೊರಿಯಾ ಜತೆಗಿನ ಗಡಿಯನ್ನು ಶಾಶ್ವತವಾಗಿ ಮುಚ್ಚಲು ನಿರ್ಧರಿಸಲಾಗಿದೆ. ಯಾವುದೇ ಆಕಸ್ಮಿಕ ಘರ್ಷಣೆ ತಡೆಯಲು ಅಮೆರಿಕದ ಮಿಲಿಟರಿಗೆ ಮಾಹಿತಿ ನೀಡಲಾಗಿದೆ ಎಂದು ಉತ್ತರ ಕೊರಿಯಾ ಸೇನೆ ಬುಧವಾರ ಹೇಳಿದೆ. ಮುಂದೊಂದು ದಿನ ಎರಡೂ ಕೊರಿಯಾಗಳ ನಡುವಿನ ಪ್ರಯಾಣವನ್ನು ಸುಗಮಗೊಳಿಸುವ ಸಾಧ್ಯತೆ ಇರುವುದರಿಂದ ರಸ್ತೆಗಳು ಮತ್ತು ರೈಲು ಮಾರ್ಗಗಳನ್ನೂ ಕಡಿತಗೊಳಿಸಲಾಗುವುದು. ದಕ್ಷಿಣದ ಗಡಿಪ್ರದೇಶದಲ್ಲಿ ಪ್ರಾರಂಭಿಸಲಿರುವ ರಕ್ಷಣಾ ಯೋಜನೆಯ ಬಗ್ಗೆ ಯಾವುದೇ ತಪ್ಪು ನಿರ್ಣಯ ಮತ್ತು ಆಕಸ್ಮಿಕ ಸಂಘರ್ಷವನ್ನು ಬುಧವಾರ ಬೆಳಿಗ್ಗೆ ಅಮೆರಿಕದ ಪಡೆಗಳಿಗೆ ದೂರವಾಣಿ ಸಂದೇಶ ರವಾನಿಸಲಾಗಿದೆ ಎಂದು ಉತ್ತರ ಕೊರಿಯಾ ಸೇನೆ ಹೇಳಿದೆ. ಉಭಯ ಕೊರಿಯಾಗಳ ನಡುವಿನ ಗಡಿಪ್ರದೇಶದಲ್ಲಿ ಉತ್ತರ ಕೊರಿಯಾ ನೆಲ ಬಾಂಬ್‌ಗಳನ್ನು ಹುಗಿದಿರಿಸಿದೆ ಮತ್ತು ತಡೆಗೋಡೆ ನಿರ್ಮಿಸುತ್ತಿದೆ ಎಂದು ಜುಲೈಯಲ್ಲಿ ದಕ್ಷಿಣ ಕೊರಿಯಾ ಸೇನೆ ಹೇಳಿತ್ತು.



## ಪೆಟ್ರೋಲ್ ಪಂಪ್‌ಗಳಲ್ಲಿ ಸಾರ್ವಜನಿಕ ಶೌಚಾಲಯ ಕಡ್ಡಾಯ: ನಿತಿನ್ ಗಡ್ಕರಿ!

**ನವದೆಹಲಿ:** ಭಾರತದಾದ್ಯಂತ ಕಳೆದ ಕೆಲವು ವರ್ಷದಿಂದ ಅತಿ ವೇಗವಾಗಿ ಹೆದ್ದಾರಿಗಳು ಅಭಿವೃದ್ಧಿಗೊಳ್ಳುತ್ತಿದ್ದು, ದೇಶದ ಉದ್ದಗಲಕ್ಕೂ ರಸ್ತೆ ಸಂಚಾರ ಸುಲಭವಾಗಿ ಪರಿಣಮಿಸುತ್ತಿದೆ. ಆದ್ರೆ ಪ್ರಯಾಣದ ಸಂದರ್ಭದಲ್ಲಿ ಹೆದ್ದಾರಿಗಳಲ್ಲಿ ಒದಗಿಸಬೇಕಾದ ಸೌಕರ್ಯಗಳು ಮಾತ್ರ ಹಿಂದುಳಿದಿವೆ.



ಈ ರೀತಿ ಹೆದ್ದಾರಿಯಲ್ಲಿ ಪ್ರಯಾಣಿಸುವ ಜನರಿಗೆ ಅತ್ಯಾವಶ್ಯಕತೆ ಇರುವುದು ಸಾರ್ವಜನಿಕ ಶೌಚಾಲಯದ ವ್ಯವಸ್ಥೆ. ಈ ಬಗ್ಗೆ ಮಾತನಾಡಿರುವ ಕೇಂದ್ರ ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ, ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಎಲ್ಲಾ ಪೆಟ್ರೋಲ್ ಪಂಪ್ ಗಳು ಖಡ್ಡಾಯವಾಗಿ ಸಾರ್ವಜನಿಕ ಶೌಚಾಲಯಗಳನ್ನು ಹೊಂದಿರಬೇಕು ಮತ್ತು ಅವುಗಳನ್ನು ಉತ್ತಮವಾಗಿ ನಿರ್ವಹಿಸಬೇಕು ಎಂದು ಎಚ್ಚರಿಕೆ ನೀಡಿದ್ದಾರೆ.

ಒಂದ್ವೇಳೆ ಈ ನಿಯಮ ಉಲ್ಲಂಘಿಸಿದಲ್ಲಿ ರಾಷ್ಟ್ರೀಯ ಹೆದ್ದಾರಿಯಿಂದ ಪೆಟ್ರೋಲ್ ಪಂಪ್ಗೆ ಸಂಪರ್ಕ ಕಲ್ಪಿಸುವ ಎನ್ ಒಸಿ ರದ್ದುಪಡಿಸುವುದಾಗಿ ಸಚಿವ ನಿತಿನ್ ಗಡ್ಕರಿ ಪೆಟ್ರೋಲ್ ಪಂಪ್ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ.

ಬಸ್‌ಗಳು ಮತ್ತು ಟ್ರಕ್‌ಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರು ನೂರಾರು ಕಿಲೋ ಮೀಟರ್‌ಗಟ್ಟಲೆ ಸಾಗುವಾಗ ಮಹಿಳೆಯರಿಗೆ ಉತ್ತಮ ಶೌಚಾಲಯ ವ್ಯವಸ್ಥೆ ಇಲ್ಲವಾದ್ರೆ ಬಹಳ ತೊಂದರೆಯಾಗುತ್ತದೆ. ಹೀಗಾಗಿ ಇನ್ಮುಂದೆ ಖಡ್ಡಾಯವಾಗಿ ಈ ನಿಯಮ ಪಾಲನೆಗೆ ಮುಂದಾಗಬೇಕು ಎಂದು ಸಚಿವ ನಿತಿನ್ ಗಡ್ಕರಿ ಎಚ್ಚರಿಸಿದ್ದಾರೆ.

## ತಮಿಳುನಾಡಿನಲ್ಲಿ 250 ಪ್ರತಿಭಟನಾನಿರತ ಸ್ಯಾಮಸಂಗ್ ಕಾರ್ಮಿಕರ ಬಂಧನ

**ಚೆನ್ನೈ:** ಅನುಮತಿಯಿಲ್ಲದೆ ಖಾಸಗಿ ಜಮೀನನ್ನು ಅತಿಕ್ರಮಿಸಿ, ಪ್ರತಿಭಟನೆಯನ್ನು ನಡೆಸಿದ ಆರೋಪದಲ್ಲಿ 250 ಮಂದಿ ಮುಷ್ಕರ ನಿರತ ಸ್ಯಾಮಸ್ಸಂಗ್ ಸಂಸ್ಥೆಯ ಕಾರ್ಮಿಕರನ್ನು ತಮಿಳುನಾಡಿನ ಕಾಂಚಿಪುರಂನಲ್ಲಿ ಪೊಲೀಸರು ಬುಧವಾರ ಬಂಧಿಸಿದ್ದಾರೆ.



ತಮ್ಮ ಒಕ್ಕೂಟಕ್ಕೆ ಮಾನ್ಯತೆ, ವೇತನ ಪರಿಷ್ಕರಣೆ, ಎಂಟು ತಾಸುಗಳ ಕೆಲಸದ ಶೆಡ್ಯೂಲ್ ಮತ್ತಿತರ ಸವಲತ್ತುಗಳನ್ನು ಆಗ್ರಹಿಸಿ ಈ ಕಾರ್ಮಿಕರು ಕಳೆದ ಒಂದು ತಿಂಗಳಿನಿಂದ ಮುಷ್ಕರ ನಡೆಸುತ್ತಿದ್ದಾರೆ.

ಐದು ಸಾವಿರ ರೂ. ವೇತನ ಹೆಚ್ಚಳ ಸೇರಿದಂತೆ ಕಾರ್ಮಿಕರ ಹಲವಾರು ಬೇಡಿಕೆಗಳನ್ನು ಈಡೇರಿಸಲು ಸ್ಯಾಮ್ಸಂಗ್ ಸಮ್ಮತಿಸಿತು. ಎಲ್ಲಾ ಕಾರ್ಮಿಕರ ಸಾಗಾಟಕ್ಕೆ ಹವಾನಿಯಂತ್ರಿತ ಬಸ್ಗಳ ವ್ಯವಸ್ಥೆ, ಕಾರ್ಮಿಕ ಸಾವನ್ನಪಿದ ಸಂದರ್ಭದಲ್ಲಿ ಒಂದು ಲಕ್ಷ ರೂ. ತುರ್ತು ಪರಿಹಾರ ಸೇರಿದಂತೆ ಮತ್ತಿತರ ಬೇಡಿಕೆಗಳ ಬಗ್ಗೆ ಚರ್ಚಿಸಲೂ ಅದು ಒಪ್ಪಿಕೊಂಡಿತ್ತು. ಆದರೆ ಕಾರ್ಮಿಕರ ಒಕ್ಕೂಟಕ್ಕೆ ಮಾನ್ಯತೆಯನ್ನು ನೀಡಲು ಅದು ನಿರಾಕರಿಸಿತು.

ಇದು ಕಾರ್ಮಿಕರು ಹಾಗೂ ಆಡಳಿತ ಮಂಡಳಿಯ ನಡುವೆ ತಿಕ್ಕಾಟಕ್ಕೆ ಕಾರಣವಾಗಿತ್ತು. ಪ್ರತಿಭಟನೆಯಿಂದ ಹಿಂದೆ ಸರಿಯುವಂತೆಯೂ ತಮಿಳುನಾಡು ವಿತ್ತ ಸಚಿವ ತಂಗಮ್ ತೆನ್ನರಸು ಕಾರ್ಮಿಕ ಒಕ್ಕೂಟ ಸಿಜಿಟಿಯುಗೆ ಮನವಿ ಮಾಡಿದ್ದರು.

## ಜಪಾನ್ ಸಂಸತ್ ವಿಸರ್ಜನೆ: ಪ್ರಧಾನಿ ಶಿಗೆರು ಇಷಿಬಾ ಘೋಷಣೆ

ಟೋಕಿಯೊ: ಜಪಾನ್ ಸಂಸತ್ತನ್ನು ವಿಸರ್ಜಿಸುವುದಾಗಿ ಪ್ರಧಾನಿ ಶಿಗೆರು ಇಷಿಬಾ ಬುಧವಾರ ಘೋಷಿಸಿದ್ದಾರೆ. ಕಳೆದ ವಾರವಷ್ಟೇ ಪ್ರಧಾನಿಯಾಗಿ ನೇಮಕಗೊಂಡಿದ್ದ ಲಿಬರಲ್ ಡೆಮೊಕ್ರಟಿಕ್ ಪಾರ್ಟಿ(ಎಲ್ಡಿ ಪಿ) ಮುಖಂಡ ಶಿಗೆರು ಅಕ್ಟೋಬರ್ 27ರಂದು ನಡೆಯುವ ಚುನಾವಣೆಗೂ ಮುನ್ನ ಸಂಸತ್ ವಿಸರ್ಜಿಸುವ ನಿರ್ಧಾರ ಪ್ರಕಟಿಸಿದ್ದಾರೆ. ದಶಕಗಳಿಂದಲೂ ಜಪಾನ್ನಧಲ್ಲಿ ಅಡೆತಡೆಯಿಲ್ಲದೆ ಆಡಳಿತ ನಡೆಸುತ್ತಿರುವ ಎಲ್ಡಿವಪಿಯ ಜನಪ್ರಿಯತೆ ಕಳೆದ 3 ವರ್ಷದಿಂದ ತೀವ್ರವಾಗಿ ಕುಸಿತ ಕಂಡ ಹಿನ್ನೆಲೆಯಲ್ಲಿ ಪ್ರಧಾನಿಯಾಗಿದ್ದ ಫುಮಿಯೊ ಕಿಷಿಡಾ ರಾಜೀನಾಮೆ ನೀಡಿದ್ದರು. ಕಳೆದ ವಾರವಷ್ಟೇ ಅಧಿಕಾರದ ಪ್ರಮಾಣ ವಚನ ಸ್ವೀಕರಿಸಿದ್ದ ಇಷಿಬಾಗೆ ಹಗರಣ ಕಳಂಕಿತ ಪಕ್ಷವನ್ನು ಮತ್ತೊಮ್ಮೆ ಗೆಲುವಿನ ದಡ ಸೇರಿಸುವ ಮಹತ್ತರ ಸವಾಲು ಎದುರಾಗಿದೆ.

ಈ ಸರಕಾರ ಸಾರ್ವಜನಿಕರ ವಿಶ್ವಾಸವನ್ನು ಪಡೆಯಲು ನಾವು ಚುನಾವಣೆಯನ್ನು ಪ್ರಾಮಾಣಿಕವಾಗಿ ಮತ್ತು ನ್ಯಾಯಯುತವಾಗಿ ಎದುರಿಸಲು ಬಯಸಿದ್ದೇವೆ ಎಂದು ಬುಧವಾರ ಸುದ್ದಿಗೋಷ್ಟಿಯಲ್ಲಿ ಇಷಿಬಾ ಘೋಷಿಸಿದ್ದಾರೆ. ಬಳಿಕ, ಸಂಸತ್ತನ್ನು ವಿಸರ್ಜಿಸುವ ಪ್ರಧಾನಿಯ ಘೋಷಣೆಯ( ದೊರೆಯ ಮೊಹರನ್ನು ಒಳಗೊಂಡ) ಪತ್ರವನ್ನು ಸಂಸತ್ತು ಸ್ಪೀಕರ್ ಅಧಿಕೃತವಾಗಿ ಓದಿ ಹೇಳಿದರು.



## ಪ್ರಯಾಣದ ವೇಳೆ ಕುಸಿದು ಬಿದ್ದು ಪೈಲೈಟ್ ಸಾವು: ವಿಮಾನ ತುರ್ತು ಲ್ಯಾಂಡಿಂಗ್

**ನ್ಯೂಯಾರ್ಕ್:** ನ್ಯೂಯಾರ್ಕ್ ಜೆಎಫ್‌ಕೆ ವಿಮಾನ ನಿಲ್ದಾಣದಲ್ಲಿ ಟರ್ಕಿಶ್ ಏರ್ಲೈನ್ಸ್ ವಿಮಾನವು ತುರ್ತು ಲ್ಯಾಂಡಿಂಗ್ ಆಗಿದೆ.

ಸಿಯಾಟಲ್ನಿಂದ ಇಸ್ತಾನ್ಬುಲ್ಗೆ ಪ್ರಯಾಣ ಮಾಡುತ್ತಿದ್ದ ಏರ್ಬಸ್ ಎ350-900ನ 59 ವರ್ಷದ ಕ್ಯಾಪ್ಟನ್ ಇಲ್ಸೆಹಿನ್ ಪೆಹ್ಲಿವನ್ ಪ್ರಯಾಣದ ವೇಳೆ ಕುಸಿದು ಬಿದ್ದಿದ್ದರು.ಆದ್ರೆ ಪ್ರಥಮ ಚಿಕಿತ್ಸೆ ನೀಡಲು ಪ್ರಯತ್ನಿಸಿದರೂ, ವಿಮಾನ ಲ್ಯಾಂಡ್ ಆಗುವ ಮೊದಲೇ ಅವರುಸಾವನ್ನಪ್ಪಿದ್ದಾರೆ.

ಟರ್ಕಿಶ್ ಏರ್‌ಲೈನ್ಸ್‌ನ ವಕ್ತಾರ ಯಾಹ್ಯಾ ಉಸ್ತುನ್, ಎಕ್ಸ್‌ನಲ್ಲಿ ಬೇಸರದ ಸುದ್ದಿಯನ್ನು ಹಂಚಿಕೊಂಡಿದ್ದಾರೆ:'ಮತ್ತೊಬ್ಬ ಪೈಲಟ್ ಮತ್ತು ಸಹ-ಪೈಲಟ್ ಸೇರಿದಂತೆ ವಿಮಾನ ಸಿಬ್ಬಂದಿ ಕ್ಯಾಪ್ಟನ್ ಪೆಹ್ಲಿವನ್ ಅವರ ಜೀವವನ್ನು ಉಳಿಸಲು ದೊಡ್ಡ ಮಟ್ಟದ ಪ್ರಯತ್ನಗಳನ್ನು ಮಾಡಿದರು ಆದರೆ ಅಂತಿಮವಾಗಿ ವಿಫಲರಾದರು. ಪ್ರಥಮ ಚಿಕಿತ್ಸೆ ನೀಡಲು ಪ್ರಯತ್ನಿಸಿದರೂ, ವಿಮಾನ ಲ್ಯಾಂಡ್ ಆಗುವ ಮೊದಲೇ ಅವರು ಸಾವು ಕಂಡರು' ಎಂದು ಪೋಸ್ಟ್ ಮಾಡಿದ್ದಾರೆ.



ಸುರಕ್ಷತೆ ಮತ್ತು ತುರ್ತು ಪರಿಸ್ಥಿತಿಗೆ ಆದ್ಯತೆ ನೀಡಿದ ಸಿಬ್ಬಂದಿ ವಿಮಾನವನ್ನು ನ್ಯೂಯಾರ್ಕ್ಗೆ ತಿರುಗಿಸುವ ಕಠಿಣ ನಿರ್ಧಾರವನ್ನು ತೆಗೆದುಕೊಂಡಂತೆ, ಫ್ಲೈಟ್‌ಅವೇರ್‌ನಿಂದ ಬಂದ ವಿಮಾನ ಡೇಟಾವು ಜೆಎಫ್ಕೆ ಕಡೆಗೆ ತಿರುಗಿದ್ದನ್ನು ದೃಢಪಡಿಸಿದೆ. ಬುಧವಾರ ಬೆಳಗ್ಗೆ 6 ಗಂಟೆಯ ವೇಳೆಗೆ ವಿಮಾನ ಯಾವುದೇ ಸಮಸ್ಯೆ ಇಲ್ಲದೆ ಜೆಎಫ್ಕೆ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆಯಿತು.

2007 ರಿಂದ ಟರ್ಕಿಶ್ ಏರ್‌ಲೈನ್ಸ್‌ನಲ್ಲಿ ಕೆಲಸ ಮಾಡುತ್ತಿದ್ದ ಕ್ಯಾಪ್ಟನ್ ಪೆಹ್ಲಿವನ್ ಮಾರ್ಚ್‌ನಲ್ಲಿ ನಿಯಮಿತ ವ್ಯಾಯಾಮ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದರು ಮತ್ತು ಯಾವುದೇ ಆರೋಗ್ಯ ಸಮಸ್ಯೆಗಳ ಲಕ್ಷಣ ಅವರಲ್ಲಿ ಕಂಡುಬಂದಿರಲಿಲ್ಲ ಎಂದು ವರದಿಯಾಗಿದೆ. ಅವರ ಹಠಾತ್ ಸಾವು ಸಹೋದ್ಯೋಗಿಗಳು ಮತ್ತು ಪ್ರಯಾಣಿಕರನ್ನು ಆಘಾತಕ್ಕೀಡು ಮಾಡಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಯುವ ರಾಜ್‌ಕುಮಾರ್‌ಗೆ ರೋಹಿತ್ ಪದಕಿ ಆಕ್ಷನ್ ಕಟ್



ದೊಡ್ಮನೆ ಕುಡಿ ಯುವ ರಾಜ್‌ಕುಮಾರ್ ಅವರು 'ಯುವ' ಚಿತ್ರದ ಮೂಲಕ ಗ್ರ್ಯಾಂಡ್ ಆಗಿ ಎಂಟ್ರಿ ಕೊಟ್ಟಿದ್ದರು. ಅದಾದ ನಂತರ ಅವರ ಮುಂದಿನ ಸಿನಿಮಾ ಬಗ್ಗೆ ಯಾವುದೇ ಅಪ್‌ಡೇಟ್ ಸಿಕ್ಕಿರಲಿಲ್ಲ. ಇದೀಗ ಸ್ವತಃ ಅವರೇ ಮುಂದಿನ ಚಿತ್ರದ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಡೈರೆಕ್ಟರ್ ರೋಹಿತ್ ಪದಕಿ ಜೊತೆ ಸಿನಿಮಾ ಮಾಡೋದಾಗಿ ತಿಳಿಸಿದ್ದಾರೆ.

'ಯುವ' ಚಿತ್ರದಲ್ಲಿ ಯುವನ ಎಂಟ್ರಿ ನೋಡಿ ಅಭಿಮಾನಿಗಳಲ್ಲಿ ಭರವಸೆ ಮೂಡಿತ್ತು. ಈ ಚಿತ್ರದ ನಂತರ ಮುಂದೇನು? ಅಂತ ಕೇಳುತ್ತಿದ್ದವರಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಒಂದೊಳ್ಳೆಯ ಕಂಟೆಂಟ್ ಇರುವ ಚಿತ್ರ ಇದಾಗಿದ್ದು, ಡಿಫರೆಂಟ್ ರೋಲ್‌ನಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಈ ಚಿತ್ರವನ್ನು ಡೈರೆಕ್ಟರ್ ರೋಹಿತ್ ಪದಕಿ ನಿರ್ದೇಶನ ಮಾಡುತ್ತಿದ್ದಾರೆ. ನಿರ್ಮಾಣದ ಹೊಣೆಯನ್ನು ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರು ವಹಿಸಿಕೊಂಡಿರೋದಾಗಿ ಯುವ ತಿಳಿಸಿದ್ದಾರೆ. ಇನ್ನೂ ಈ ಚಿತ್ರಕ್ಕೆ ಇನ್ನೂಳಿದ ಕಲಾವಿದರ ಆಯ್ಕೆ ಆಗಬೇಕಿದೆ. ದಸರಾ ಹಬ್ಬದಂದು ಅಧಿಕೃತ ಘೋಷಣೆ ಆಗಲಿದೆ ಎಂದು ಯುವ ಮಾತನಾಡಿದ್ದಾರೆ. ಇನ್ನೂ 'ರತ್ನನ್ ಪ್ರಪಂಚ' ನಿರ್ದೇಶಕನ ಜೊತೆ ಯುವನ ಹೊಸ ಸಿನಿಮಾ ಬಗ್ಗೆ ಅಭಿಮಾನಿಗಳಿಗೆ ಕುತೂಹಲ ಮೂಡಿಸಿದೆ. ಚಿತ್ರದ ಹೆಚ್ಚಿನ ಅಪ್‌ಡೇಟ್‌ಗಾಗಿ ಫ್ಯಾನ್ಸ್ ಕಾಯುತ್ತಿದ್ದಾರೆ.

# ಟ್ರೈಲರ್ ಮೂಲಕ ಬೆರಗು ಮೂಡಿಸೋ ನಿಶಾ ನಟನೆಯ ಅಂಶು



ಸಾಮಾಜಿಕ ಪಲ್ಲಟಗಳಿಗೆ ಕಣ್ಣಾದ ಕಥೆ ಹೊಂದಿರುವ ಚಿತ್ರಗಳೆಂದರೆ ಕನ್ನಡದ ಪ್ರೇಕ್ಷಕರಲ್ಲಿ ಒಂದು ಬಗೆಯ ಸೆಳೆತವಿದೆ. ಅಂಥಾದ್ದೊಂದು ಕಥೆ ಭಿನ್ನ ಜಾನರಿನಲ್ಲಿ, ಪಕ್ಕಾ ಕಮರ್ಶಿಯಲ್ ಬಗೆಯಲ್ಲಿ ರೂಪುಗೊಂಡಿದೆಯೆಂದರೆ ಅಂಥಾ ಸೆಳೆತ ಮತ್ತಷ್ಟು ತೀವ್ರವಾಗಿರುತ್ತದೆ. ಸದ್ಯ ಬಿಡುಗಡೆಗೊಂಡಿರುವ 'ಅಂಶು' ಚಿತ್ರದ ಟ್ರೈಲರ್ ನಲ್ಲಿಯೂ ಅಂಥಾದ್ದೊಂದು ಸೆಳೆತವಿದ್ದಂತಿದೆ. ಇದೀಗ ಬಿಡುಗಡೆಗೆ ಸಜ್ಜುಗೊಂಡಿರುವ 'ಅಂಶು' ಮಹಿಳಾ ಪ್ರಧಾನ ಕಥಾನಕವನ್ನು ಒಳಗೊಂಡಿರುವ ಚಿತ್ರ. ಅದರ ಒಟ್ಟಾರೆ ಸಾರದತ್ತ ಕುತೂಹಲ ಕೇಂದ್ರೀಕರಿಸುವಂತೆ ಮಾಡುವಲ್ಲಿ ಈ ಟ್ರೈಲರ್ ಯಶ ಕಂಡಿದೆ.

ಈ ಚಿತ್ರದಲ್ಲಿ ನಿಶಾ ರವಿಕೃಷ್ಣನ್ ನಾಯಕಿಯಾಗಿ ನಟಿಸಿದ್ದಾರೆ. ಗಟ್ಟಿಮೇಳ ಸೀರಿಯಲ್ಲಿನ ಅಮೂಲ್ಯಾ ಪಾತ್ರದ ಮೂಲಕ ಮಿಂಚಿದ್ದ ನಿಶಾ ಈ ಟ್ರೈಲರ್‌ನಲ್ಲಿ ಸೀರಿಯಲ್ ಇಮೇಜನ್ನು ಮೀರಿದ ಪಾತ್ರವೊಂದರಲ್ಲಿ ಕಾಣಿಸಿಕೊಂಡಿದ್ದಾರೆ. ಎಂ.ಸಿ ಚನ್ನಕೇಶವ ನಿರ್ದೇಶನದ ಚೊಚ್ಚಲ ಚಿತ್ರ ಅಂಶು. 'ನಾವು ನಂಬೋದೆಲ್ಲ ನಿಜ ಅಲ್ಲ, ಸಹಿಸೋಕ್ ಆಗ್ದೆ ಇರೋದೆಲ್ಲ ಸುಳ್ಳಲ್ಲ' ಅಂತ ಶುರುವಾಗುವ ಈ ಟ್ರೈಲರ್ ನೋಡಿದ ಮಂದಿಯಲ್ಲಿ ಒಂದಷ್ಟು ಪ್ರಶ್ನೆಗಳು ಮೂಡಿಕೊಂಡಿವೆ. ಅದಕ್ಕುತ್ತರವೆಂಬಂಥಾ, ಬೆರಗಿನ ಸಂಗತಿಗಳನ್ನು ಚಿತ್ರತಂಡ ತೆರೆದಿಟ್ಟಿದೆ. ಅದರ ಪ್ರಕಾರ ಹೇಳೋದಾದರೆ, ಇದೊಂದು ಸೈಕ್ಯಾಡೆಲಿಕ್ ಥ್ರಿಲ್ಲರ್ ಜಾನರಿನ ಚಿತ್ರ. ಈ ಸಮಾಜದಲ್ಲಿ ಇಂದಿನ ದಿನಮಾನದಲ್ಲಿ ಘಟಿಸುತ್ತಿರುವ ವಿಚಾರಗಳನ್ನಿಲ್ಲಿ ಅತ್ಯಂತ ಪರಿಣಾಮಕಾರಿಯಾಗಿ ದೃಶ್ಯೀಕರಿಸಲಾಗಿದೆಯಂತೆ. ಅದರ ಆವೇಗ ಎಂಥಾದ್ದಿದೆ ಎಂಬುದಕ್ಕೆ ಸಾಕ್ಷಿ ಎಂಬಂತೆ ಈ ಟ್ರೈಲರ್ ಮೂಡಿ ಬಂದಿದೆ.

ಗ್ರಹಣ ಎಲ್‌ಎಲ್‌ಪಿ ಬ್ಯಾನರಿನಡಿಯಲ್ಲಿ ಈ ಸಿನಿಮಾ ನಿರ್ಮಾಣಗೊಂಡಿದೆ. ರತನ್ ಗಂಗಾಧರ್,ಸಂಪತ್ ಶಿವಶಂಕರ್, ಕೃತಿ ನಾಣಯ್ಯ ನಿರ್ಮಾಣ ಕಾರ್ಯದ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸಿದ್ದಾರೆ. ಭಜರಂಗಿ2, ವೇದ ಚಿತ್ರಗಳಲ್ಲಿ ವಿಲನ್ ಆಗಿ ನಟಿಸಿದ, ಈಗ ಬಾಲಿವುಡ್ಡಿನಲ್ಲೂ ಸಕ್ರಿಯರಾಗಿರುವ ಚಲುವರಾಜ್ ನಿರ್ಮಾಣದಲ್ಲಿ ಸಾಥ್ ಕೊಟ್ಟಿದ್ದಾರೆ. ಜೈಚಂದ್ರ, ಪ್ರಮೋದ್ ಡಾ.ಮಧುರಾಜ್, ಮತ್ತು ವೀರನ್ ಗೌಡ ಕೂಡಾ ಅಂಶು ನಿರ್ಮಾಣದಲ್ಲಿ ಸಹಭಾಗಿಗಳಾಗಿದ್ದಾರೆ. ಈ ಹಿಂದೆ ಅಂಶು ಚಿತ್ರದ ಫಸ್ಟ್ ಲುಕ್ ಟೀಸರ್ ಬಿಡುಗಡೆಗೊಂಡಿತ್ತು. ಲಂಡನ್ನಿನಲ್ಲಿ ಡಾಕ್ಟರ್ ಆಗಿರುವ ಮಧುರಾಜ್ ಅದನ್ನು ನೋಡಿ ಥ್ರಿಲ್ ಆಗಿ ನಿರ್ಮಾಣ ತಂಡಕ್ಕೆ ಸೇರಿಕೊಂಡಿದ್ದರಂತೆ.



ಇನ್ನುಳಿದಂತೆ ನಿರ್ದೇಶಕ ಚನ್ನಕೇಶವ ಸೇಂಟ್ ಜೋಸೆಫ್ಸ್ ಯೂನಿವರ್ಸಿಟಿಯಲ್ಲಿ ಫಿಲಂ ಮೇಕಿಂಗ್ ಕೋರ್ಸ್ ಮುಗಿಸಿಕೊಂಡಿರುವವರು. ಅವರಿಲ್ಲಿ ಸಮಾಜಮುಖಿ ಕಥನವೊಂದಕ್ಕೆ ಕಮರ್ಶಿಯಲ್ ಧಾಟಿಯಲ್ಲಿ ದೃಷ್ಯ ರೂಪ ನೀಡಿದ್ದಾರೆ. ಇನ್ನುಳಿದಂತೆ ದೂಡಿ ಎಂಬ ತಮಿಳು ಚಿತ್ರ, ಕನ್ನಡದ ಗರುಡ ಪುರಾಣ ಮುಂತಾದ ಸಿನಿಮಾಗಳಿಗೆ ಕೆಲಸ ಮಾಡಿದ್ದ ಸುನೀಲ್ ನರಸಿಂಹಮೂರ್ತಿ ಛಾಯಾಗ್ರಾಹಕರಾಗಿ ಈ ಚಿತ್ರ ಭಾಗವಾಗಿದ್ದಾರೆ.

# ಹನಿಮೂನ್ ಫೋಟೋ ಶೇರ್ ಮಾಡಿ ಪತಿಗೆ ಸೋನಲ್ ಲವ್ಲಿ ವಿಶ್



ಕಾಟೇರ, ರಾಬರ್ಟ್ ಸಿನಿಮಾಗಳ ನಿರ್ದೇಶಕ ತರುಣ್ ಸುಧೀರ್‌ಗೆ ನಿನ್ನೆ ಹುಟ್ಟುಹಬ್ಬದ ಸಂಭ್ರಮವಾಗಿದ್ದು, ಹನಿಮೂನ್ ಫೋಟೋ ಶೇರ್ ಮಾಡಿ ಪತಿಗೆ ಸೋನಲ್ ರೊಮ್ಯಾಂಟಿಕ್ ಆಗಿ ವಿಶ್ ಮಾಡಿದ್ದಾರೆ.

ತರುಣ್ ಜೊತೆಗಿನ ರೊಮ್ಯಾಂಟಿಕ್ ಫೋಟೋ ಶೇರ್ ಮಾಡಿ, ಜಗತ್ತಿನ ಅತೀ ಹೆಚ್ಚು ಪ್ರೀತಿಸುವ, ಕಾಳಜಿ ತೋರಿಸುವ, ಕರುಣೆಯ ಮನಸಿರುವ ಗಂಡನಿಗೆ ಹುಟ್ಟುಹಬ್ಬದ ಶುಭಾಶಯಗಳು. ನನ್ನನ್ನು ಪ್ರತಿದಿನ ಪ್ರೇರೆಪಿಸುವ ಹಾಗೂ ನಾನು ಜೊತೆಯಾಗಿ ನಡೆಯಲು ಬಯಸುವ ವ್ಯಕ್ತಿಗೆ ಜನ್ಮದಿನದ ಶುಭಾಶಯಗಳು. ಐ ಲವ್ ಯೂ ಎಂದು ಸೋನಲ್ ಅವರು ಪತಿಗೆ ಪ್ರೀತಿಯಿಂದ ವಿಶ್ ಮಾಡಿದ್ದಾರೆ. ಅದಕ್ಕೆ ತರುಣ್ ಕೂಡ ಪ್ರತಿಕ್ರಿಯಿಸಿ, ಥ್ಯಾಂಕ್ಯೂ ಲವ್ ಎಂದಿದ್ದಾರೆ.

ಸದ್ಯ ತರುಣ್ ದಂಪತಿ ಮಾಲ್ಡೀವ್ಸ್‌ನಲ್ಲಿ ಸಮಯ ಕಳೆಯುತ್ತಿದ್ದಾರೆ. ಅಲ್ಲಿನ ಸುಂದರ ತಾಣಗಳಿಗೆ ನಟಿ ಭೇಟಿ ನೀಡಿದ್ದಾರೆ. ಅಂದಹಾಗೆ, ಆಗಸ್ಟ್ 11ರಂದು ತರುಣ್ ಮತ್ತು ಸೋನಲ್ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

# ಆಲಿಯಾ ಭಟ್ ಮನೆಯಲ್ಲಿ ನಿತ್ಯವೂ ಪ್ಲೇ ಆಗುತ್ತೆ 'ನಾಟು ನಾಟು..' ಹಾಡು

ಬಾಲಿವುಡ್ ನಟಿ ಆಲಿಯಾ ಭಟ್ ಅವರು ದೊಡ್ಡ ಮಟ್ಟದ ಜನಪ್ರಿಯತೆ ಪಡೆದಿದ್ದಾರೆ. ಅವರ ನಟನೆಯ 'ಜಿಗ್ರಾ' ಚಿತ್ರವು ಈ ವಾರ ಬಿಡುಗಡೆ ಕಾಣುತ್ತಿದೆ. ಅವರು ಈ ಚಿತ್ರಕ್ಕೆ ನಿರ್ಮಾಪಕಿ ಕೂಡ ಹೌದು. ಇದು ಪ್ಯಾನ್ ಇಂಡಿಯಾ ಚಿತ್ರವಾಗಿದ್ದು, ತೆಲುಗಿಗೂ ಡಬ್ ಆಗಿ ಬಿಡುಗಡೆ ಕಾಣುತ್ತಿದೆ. 'ಏಷ್ಯನ್ ಸುರೇಶ್ ಎಂಟರ್ಟೇನ್ಮೆಂಟ್ಸ್' ಈ ಚಿತ್ರವನ್ನು ತೆಲುಗಿನಲ್ಲಿ ರಿಲೀಸ್ ಮಾಡುತ್ತಿದೆ. ಅಕ್ಟೋಬರ್ 11ರಂದು ರಿಲೀಸ್ ಆಗಲಿರುವ ಈ ಚಿತ್ರದ ಪ್ರಚಾರಕ್ಕಾಗಿ ಆಲಿಯಾ ಭಟ್ ಅವರು ಹೈದರಾಬಾದ್ ಗೆ ಬಂದಿದ್ದರು. ಈ ವೇಳೆ ಅವರು ನೀಡಿದ ಹೇಳಿಕೆ ಗಮನ ಸೆಳೆದಿದೆ.



ಆಲಿಯಾ ಭಟ್ ಅವರಿಗೆ ತೆಲುಗು ಚಿತ್ರರಂಗ ಹೊಸದೇನು ಅಲ್ಲ. ಅವರು ಅಭಿನಯಿಸಿದ್ದ 'ಬ್ರಹ್ಮಾಸ್ತ್ರ' ಚಿತ್ರವು ತೆಲುಗಿಗೆ ಡಬ್ ಆಗಿ ರಿಲೀಸ್ ಆಗಿತ್ತು. ರಾಜಮೌಳಿ ಅವರು ನಿರ್ದೇಶನ ಮಾಡಿದ್ದ 'ಆರ್‌ಆರ್‌ಆರ್' ಚಿತ್ರದಲ್ಲಿ ಆಲಿಯಾ ಅವರು ನಟಿಸಿದ್ದರು. ಆಲಿಯಾ ನಿರ್ಮಾಣ ಮಾಡಿದ ಚಿತ್ರವು ತೆಲುಗಿನಲ್ಲಿ ರಿಲೀಸ್ ಆಗುತ್ತಿರುವುದು ಇದೇ ಮೊದಲು.

ಈ ಕಾರಣದಿಂದ ಹೈದರಾಬಾದ್ ನಲ್ಲಿ ಆಲಿಯಾ ಭಟ್ ಅವರು 'ಜಿಗ್ರಾ' ಚಿತ್ರದ ಪ್ರೀ-ರಿಲೀಸ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಈ ಕಾರ್ಯಕ್ರಮಕ್ಕೆ ಸಮಂತಾ ಅವರು ಅತಿಥಿಯಾಗಿ ಆಗಮಿಸಿದ್ದರು. ಆಲಿಯಾ ಅವರು 'ನಾಟು ನಾಟು..' ಹಾಡಿನ ಬಗ್ಗೆ ಮಾತನಾಡಿದರು.

'ನಮ್ಮ ಮನೆಯಲ್ಲಿ ಯಾವಾಗಲೂ ನಾಟು ನಾಟು ಹಾಡನ್ನು ಪ್ಲೇ ಮಾಡುತ್ತೇವೆ. ನಮ್ಮ ಮಗಳು ರಹಾ ಈ ಹಾಡಿನ ದೊಡ್ಡ ಅಭಿಮಾನಿ. ಅವಳಿಗೆ ಹಾಡು ಕೇಳೋದು ಮಾತ್ರವಲ್ಲ, ಡ್ಯಾನ್ಸ್ ಮಾಡೋದು ಇಷ್ಟ. ನಾನು ನಾಟು ನಾಟು ಹಾಡಿಗೆ ಡ್ಯಾನ್ಸ್ ಮಾಡೋದನ್ನು ನೋಡಿದ್ದಾಳೆ. ಈ ಕಾರಣಕ್ಕೆ ಅವಳೂ ಡ್ಯಾನ್ಸ್ ಮಾಡುತ್ತಾಳೆ. ಹೀಗಾಗಿ, ಹಾಡು ನನಗೆ ವಿಶೇಷ' ಎಂದು ಆಲಿಯಾ ಹೇಳಿದ್ದಾರೆ.

ಆಲಿಯಾ ಭಟ್ ನಟನೆಯ 'ರಾಕಿ ಔರ್ ರಾಣಿ ಕಿ ಪ್ರೇಮ್ ಕಹಾನಿ' ಚಿತ್ರವು ಕಳೆದ ವರ್ಷ ರಿಲೀಸ್ ಆಗಿ ಮೆಚ್ಚುಗೆ ಪಡೆಯಿತು. ಈ ಚಿತ್ರ 100 ಕೋಟಿ ರೂಪಾಯಿ ಕ್ಲಬ್ ಸೇರಿತ್ತು. ಪ್ರೆಗ್ನೆನ್ಸಿ ಬಳಿಕ ಆಲಿಯಾ ದೊಡ್ಡ ಬ್ರೇಕ್ ಪಡೆದಿಲ್ಲ. ಈಗ ಅವರ ನಟನೆಯ 'ಜಿಗ್ರಾ' ರಿಲೀಸ್ ಆಗುತ್ತಿದೆ. ಇದಲ್ಲದೆ, 'ಲವ್ ಆ ಯಂಡ್ ವಾರ್' ಸಿನಿಮಾದಲ್ಲಿ ನಟಿಸುತ್ತಿದ್ದು, ಸಂಜಯ್ ಲೀಲಾ ಬನ್ಸಾಲಿ ನಿರ್ದೇಶನ ಈ ಚಿತ್ರಕ್ಕೆ ಇದೆ.

# ಟೆಸ್ಟ್ ಕ್ರಿಕೆಟ್‌ನಲ್ಲಿ ಐತಿಹಾಸಿಕ ದಾಖಲೆ ಬರೆದ ಜೋ ರೂಟ್

**ಲಂಡನ್:** ಇಂಗ್ಲೆಂಡ್ ತಂಡದ ಸ್ಟಾರ್ ಬ್ಯಾಟರ್ ಜೋ ರೂಟ್‌ಟೆಸ್ಟ್ ಕ್ರಿಕೆಟ್‌ನಲ್ಲಿ ಐತಿಹಾಸಿಕ ದಾಖಲೆ ಬರೆದಿದ್ದಾರೆ.

ಸದ್ಯ ಪಾಕ್ ವಿರುದ್ಧ ನಡೆಯುತ್ತಿರುವ ಮೂರು ಪಂದ್ಯಗಳ ಟೆಸ್ಟ್ ಸರಣಿಯನ್ನಾಡುತ್ತಿರುವ ರೂಟ್ ಮೊದಲ ಇನ್ನಿಂಗ್ಸ್‌ನಲ್ಲೇ ಅಮೋಘ ಶತಕ ಸಿಡಿಸಿದ್ದಾರೆ. 167 ಎಸೆತಗಳಲ್ಲಿ 7 ಬೌಂಡರಿಗಳೊಂದಿಗೆ 100 ರನ್ ಬಾರಿಸಿದ್ದಾರೆ. ಇದರೊಂದಿಗೆ ಟೆಸ್ಟ್ ಕ್ರಿಕೆಟ್‌ನಲ್ಲಿ ಅತಿಹೆಚ್ಚು ರನ್ ಗಳಿಸಿದ ವಿಶ್ವದ 5ನೇ ಆಟಗಾರ ಎಂಬ ಖ್ಯಾತಿಗೆ ಪಾತ್ರರಾಗಿದ್ದಾರೆ. ಅಲ್ಲದೇ ಇಂಗ್ಲೆಂಡ್‌ನ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಅತಿಹೆಚ್ಚು ರನ್ ಗಳಿಸಿದ ಮೊದಲ ಆಟಗಾರ ಎನಿಸಿಕೊಂಡಿದ್ದಾರೆ.



**ವಿಶ್ವದ 5ನೇ ಆಟಗಾರ:** ಸಕ್ರೀಯ ಆಟಗಾರನಾಗಿರುವ ಜೋ ರೂಟ್ 80 ರನ್ ಸಿಡಿಸುತ್ತಿದ್ದಂತೆ 12,473 ರನ್ ಪೂರೈಸಿದರು. ಈ ಮೂಲಕ ಇಂಗ್ಲೆಂಡ್ ತಂಡದ ಮಾಜಿ ನಾಯಕ ಆಲಸ್ಟೈರ್ ಕುಕ್ ಅವರ 12,472 ರನ್‌ಗಳ ದಾಖಲೆ ಮುರಿದಿದರು. ಸದ್ಯ ಪಾಕ್ ವಿರುದ್ಧ 3ನೇ ದಿನದಾಟದಲ್ಲಿ ಅಜೇಯ 146 ರನ್ ಸಿಡಿಸಿರುವ ರೂಟ್ ಅತಿ ಶೀಘ್ರದಲ್ಲೇ ಭಾರತದ ಕ್ರಿಕೆಟ್ ದಿಗ್ಗಜ ರಾಹುಲ್ ದ್ರಾವಿಡ್ ಅವರ ದಾಖಲೆ ಮುರಿಯುವ ವಿಶ್ವಾಸ ಮೂಡಿಸಿದ್ದಾರೆ.

**ವಿಶ್ವದ ಟಾಪ್-5 ಟೆಸ್ಟ್ ಬ್ಯಾಟರ್ಸ್ ಇವರೇ**
- **ಸಚಿನ್ ತೆಂಡೂಲ್ಕರ್ : 15,921 ರನ್**
- **ರಿಕಿ ಪಾಂಟಿಂಗ್ : 13,378 ರನ್**
- **ಜಾಕ್ ಕಾಲೀಸ್ : 13,289 ರನ್**
- **ರಾಹುಲ್ ದ್ರಾವಿಡ್ : 13,288 ರನ್**
- **ಜೋ ರೂಟ್ : 12,521 ರನ್**

**ಇಂಗ್ಲೆಂಡ್‌ನ ಟಾಪ್-2 ಟೆಸ್ಟ್ ಬ್ಯಾಟರ್**
- **ಜೋ ರೂಟ್ : 12,521 ರನ್**
- **ಆಲಸ್ಟೈರ್ ಕುಕ್ : 12,472 ರನ್**

# ಶತಕದಂಚಿನಲ್ಲಿ ಟೊಮೆಟೊ ದರ

## ವರ್ಷದಲ್ಲಿ 2ನೇ ಬಾರಿಗೆ 100 ರೂ. ಸನಿಹಕ್ಕೆ 'ಕೆಂಪಣ್ಣ'

**ಬೆಂಗಳೂರು:** ಕಳೆದ ಕೆಲ ದಿನಗಳಿಂದ ದಿನಬೆಳಗಾದರೆ ಒಂದಲ್ಲ ಒಂದು ವಸ್ತುಗಳ ದರ ಏರಿಕೆಯಾಗುತ್ತಲೇ ಇದೆ. ಅದರಲ್ಲೂ ಅಗತ್ಯ ತರಕಾರಿಗಳಾದ ಈರುಳ್ಳಿ, ಬೆಳ್ಳುಳ್ಳಿ ದರ ಗಗನ ಸಖಿಯಾಗಿದ್ದು, ಈ ಸಾಲಿಗೆ ಟೊಮೆಟೊ ಕೂಡ ಸೇರ್ಪಡೆಯಾಗಿದೆ.

ಕಳೆದ ಕೆಲ ದಿನಗಳಿಂದ ಈರುಳ್ಳಿ, ಬೆಳ್ಳುಳ್ಳಿ ದರ ಕೇಳಿದ್ರೆನೆ ಜನ ಹೆದರುವ ಪರಿಸ್ಥಿತಿ ನಿರ್ಮಾಣ ಆಗಿದೆ. ಈಗಾಗಲೇ ಬೆಳ್ಳುಳ್ಳಿ ಕೆಜಿಗೆ 400 ರೂ. ದಾಟಿದ್ರೆ ಈರುಳ್ಳಿ 100 ರೂ. ಸನಿಹಕ್ಕೆ ಬಂದಿದೆ. ಈ ನಡುವೆ ಟೊಮೆಟೊ ಕೂಡ ಇದೇ ಸಾಲಿಗೆ ಸೇರಿದ್ದು. ಟೊಮೆಟೊ ದರ 100 ರೂ. ದರ ಏರಿಕೆಯಾಗಿದೆ.

ಕಳೆದ ನಾಲ್ಕೈದು ತಿಂಗಳ ಹಿಂದಷ್ಟೇ ಮಳೆ ಅಭಾವ ಮತ್ತು ರೋಗದ ಕಾರಣ ಭಾರೀ ಪ್ರಮಾಣದಲ್ಲಿ ಟೊಮೆಟೊ ಇಳುವರಿ ಕಡಿಮೆಯಾಗಿತ್ತು. ಪರಿಣಾಮ ಟೊಮೆಟೊ ದರ 100 ರೂ. ದಾಟಿತ್ತು. ಆ ಬಳಿಕ ಈಗ ಮತ್ತೆ ಅದೇ ಪರಿಸ್ಥಿತಿ ನಿರ್ಮಾಣ ಆಗಿ ದಿಢೀರ್ ದರ ಏರಿಕೆಯಾಗಿದ್ದು, ಟೊಮೆಟೊ ಕೊಳ್ಳೋಕು ಹಿಂದೂಮುಂದು ನೋಡುವ ಸ್ಥಿತಿ ನಿರ್ಮಾಣ ಆಗಿದೆ. ಈ ಬಾರಿ ಮಳೆ ಪ್ರಮಾಣ ಹೆಚ್ಚಾದ ಕಾರಣ ಇತರೆ ಜಿಲ್ಲೆಗಳಿಂದ ಬೆಂಗಳೂರಿಗೆ ಸರಬರಾಜು ಆಗುತ್ತಿದ್ದ ಟೊಮೆಟೊದಲ್ಲಿ ಭಾರೀ ಇಳಿಕೆ ಕಂಡಿದೆ. ಬೆಂಗಳೂರಿನ ಕೆಲ ಭಾಗಗಳಿಂದ ಮಾತ್ರ ಟೊಮೆಟೊ ಬರುತ್ತಿದ್ದು, ಸಂಪೂರ್ಣ ಪೂರೈಕೆ ಆಗುತ್ತಿಲ್ಲ. ಹೀಗಾಗಿ ದರ ಏರಿಕೆ ಆಗುತ್ತಿದೆ ಎಂದು ವ್ಯಾಪಾರಿಗಳು ಹೇಳುತ್ತಿದ್ದಾರೆ.



ಹೊರ ರಾಜ್ಯಗಳು ಕೂಡ ಹೆಚ್ಚಾಗಿ ರಾಜ್ಯದ ಟೊಮೆಟೊ ಮೇಲೆ ಅವಲಂಬನೆ ಕಾರಣ ಅನೇಕ ಗಡಿ ಜಿಲ್ಲೆಗಳು ಹೊರ ರಾಜ್ಯಗಳಿಗೆ ಹೆಚ್ಚಾಗಿ ಪೂರೈಕೆ ಮಾಡುತ್ತಿವೆ. ಇದು ಕೂಡ ದರ ಏರಿಕೆಗೆ ಕಾರಣ ಆಗುತ್ತಿದೆ. ಸದ್ಯ ಇದೇ ಪರಿಸ್ಥಿತಿ ಇನ್ನೂ ಒಂದೆರೆಡು ವಾರ ಮುಂದುವರಿಯುವ ಸಾಧ್ಯತೆ ಇದೆ. ಹೊಸ ಬೆಳೆ ಬಂದು ಅಗತ್ಯಕ್ಕೆ ತಕ್ಕಂತೆ ಪೂರೈಕೆಯಾಗಬೇಕಿದೆ. ಮಳೆ ಕಡಿಮೆಯಾದರೆ ಮುಂದಿನ ಒಂದೆರೆಡು ವಾರಗಳಲ್ಲಿ ಸ್ವಲ್ಪ ಪ್ರಮಾಣದಲ್ಲಿ ದರ ಇಳಿಕೆಯಾಗುವ ಸಾಧ್ಯತೆ ಇದೆ ಎಂದು ವ್ಯಾಪಾರಿಗಳು ಅಂತಿದ್ದಾರೆ.

ಹಬ್ಬದ ನಡುವೆಯೇ ದರ ಏರಿಕೆ ಜನರನ್ನ ಹೈರಾಣಾಗಿಸುತ್ತಿದೆ ಅನ್ನೋ ಬೇಸರ ಒಂದು ಕಡೆಯಾದರೆ, ಮತ್ತೊಂದೆಡೆ ಈಗಾಗಲಾದರು ಬೆಳೆದ ಬೆಳೆಗೆ ರೈತ ಸ್ವಲ್ಪ ಲಾಭ ಕಾಣುವ ಸಮಯ ಬಂತಲ್ಲ ಅನ್ನೋದೇ ನೆಮ್ಮದಿ ವಿಚಾರ.

# ನಂ.1 ಸ್ಥಾನಕ್ಕೇರುವ ಸನಿಹದಲ್ಲಿ ಹಾರ್ದಿಕ್; ರ‍್ಯಾಂಕಿಂಗ್‌ನಲ್ಲಿ ಭಾರತೀಯರದ್ದೇ ಪಾರುಪತ್ಯ

ಐಸಿಸಿ ನೂತನ ರ‍್ಯಾಂಕಿಂಗ್ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಇತ್ತೀಚಿನ ಶ್ರೇಯಾಂಕ ಪಟ್ಟಿಯಲ್ಲಿ ಟೀಂ ಇಂಡಿಯಾ ಆಟಗಾರರು ಬಂಪರ್ ಲಾಭ ಗಳಿಸಿದ್ದಾರೆ. ಬಾಂಗ್ಲಾದೇಶ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ ಅಮೋಘ ಪ್ರದರ್ಶನ ನೀಡಿದ್ದ ಹಾರ್ದಿಕ್ ಪಾಂಡ್ಯ, ಆಲ್‌ರೌಂಡರ್‌ಗಳ ಶ್ರೇಯಾಂಕ ಪಟ್ಟಿಯಲ್ಲಿ ಭರ್ಜರಿ ಏರಿಕೆ ಕಂಡಿದ್ದಾರೆ.

ಬಾಂ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ 39 ರನ್‌ಗಳ ಗೆಲುವಿನ ಇನ್ನಿಂಗ್ಸ್ ಆಡಿದ್ದ ಹಾರ್ದಿಕ್ ಬೌಲಿಂಗ್‌ನಲ್ಲೂ 1 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾಗಿದ್ದರು. ತಮ್ಮ ಆಟದ ಮೂಲಕ ತಂಡಕ್ಕೆ ಗೆಲುವು ತಂದುಕೊಟ್ಟಿದ್ದ ಪಾಂಡ್ಯ, ಇದೀಗ ಟಿ20 ಆಲ್‌ರೌಂಡರ್‌ಗಳ ರ‍್ಯಾಂಕಿಂಗ್ ಪಟ್ಟಿಯಲ್ಲಿ ಬರೋಬ್ಬರಿ 4 ಸ್ಥಾನ ಮೇಲೇರಿದ್ದು, 3ನೇ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಬಾಂಗ್ಲಾದೇಶ ವಿರುದ್ಧ ಉಳಿದಿರುವ ಇನ್ನೇರಡು ಪಂದ್ಯಗಳಲ್ಲಿ ಹಾರ್ದಿಕ್ ತಮ್ಮ ಇದೇ ಆಟವನ್ನು ಮುಂದುವರೆಸಿದರೆ ನಂಬರ್ 1ಸ್ಥಾನಕ್ಕೇರುವ ಅವಕಾಶ ಹೊಂದಿದ್ದಾರೆ. ಹಾರ್ದಿಕ್ ಇದೀಗ 216 ರೇಟಿಂಗ್ ಅಂಕಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದರೆ, ಇಂಗ್ಲೆಂಡ್‌ನ ಲಿಯಾಮ್ ಲಿವಿಂಗ್ ಸ್ಟನ್ ಮೊದಲ ಸ್ಥಾನದಲ್ಲಿ ಮುಂದುವರಿದಿದ್ದಾರೆ. ಇವರಲ್ಲದೇ ನೇಪಾಳದ ದೀಪೇಂದ್ರ ಸಿಂಗ್ ಐರಿ ಎರಡನೇ ಸ್ಥಾನದಲ್ಲಿದ್ದಾರೆ.



ಇದಲ್ಲದೆ ಬಾಂಗ್ಲಾದೇಶದ ವಿರುದ್ಧ ಆಡಿದ ಎರಡು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ರವೀಂದ್ರ ಜಡೇಜಾ ಅದ್ಭುತ ಪ್ರದರ್ಶನ ನೀಡಿದ್ದರು.ಅದರ ಲಾಭ ಪಡೆದಿರುವ ಜಡೇಜಾ ಟೆಸ್ಟ್ ಆಲ್‌ರೌಂಡರ್ ಗಳ ಶ್ರೇಯಾಂಕದಲ್ಲಿ ನಂಬರ್ ಒನ್ ಸ್ಥಾನದಲ್ಲಿ ಮುಂದುವರಿದಿದ್ದಾರೆ. 468 ರೇಟಿಂಗ್ ಪಾಯಿಂಟ್ ಗಳೊಂದಿಗೆ ಜಡೇಜಾ ಮೊದಲ ಸ್ಥಾನದಲ್ಲಿದ್ದರೆ, 358 ರೇಟಿಂಗ್ ಅಂಕ ಹೊಂದಿರುವ ಆರ್.ಅಶ್ವಿನ್ ಎರಡನೇ ಸ್ಥಾನದಲ್ಲಿ ಮುಂದುವರಿದಿದ್ದಾರೆ.

ಹಾಗೆಯೇ ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಅದ್ಭುತ ಬೌಲಿಂಗ್ ಪ್ರದರ್ಶಿಸಿದ್ದ ವೇಗದ ಬೌಲರ್ ಜಸ್ಪ್ರೀತ್ ಬುಮ್ರಾ ಕೂಡ ಐಸಿಸಿ ಟೆಸ್ಟ್ ಬೌಲರ್‌ಗಳ ಶ್ರೇಯಾಂಕದಲ್ಲಿ ಭರ್ಜರಿ ಲಾಭ ಪಡೆದಿದ್ದು ಪ್ರಸ್ತುತ, ಬುಮ್ರಾ 870 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಟೆಸ್ಟ್ ಬೌಲರ್‌ಗಳ ಶ್ರೇಯಾಂಕದಲ್ಲಿ ಮೊದಲ ಸ್ಥಾನದಲ್ಲಿದ್ದಾರೆ.

ಇವರೊಂದಿಗೆ ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಅದ್ಭುತ ಬ್ಯಾಟಿಂಗ್ ಪ್ರದರ್ಶನ ನೀಡಿದ್ದ ಯಶಸ್ವಿ ಜೈಸ್ವಾಲ್, ಐಸಿಸಿ ಟೆಸ್ಟ್ ಬ್ಯಾಟ್ಸ್‌ಮನ್‌ಗಳ ಶ್ರೇಯಾಂಕದಲ್ಲಿ 2 ಸ್ಥಾನಗಳನ್ನು ಮೇಲೇರಿದ್ದಾರೆ. ಪ್ರಸ್ತುತ, ಜೈಸ್ವಾಲ್ 792 ರೇಟಿಂಗ್ ಪಾಯಿಂಟ್ ಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ.

# ರಾಷ್ಟ್ರ ಮಟ್ಟದ ಮಾನಿಟರಿಂಗ್ ಬಗ್ಗೆ ವಿಶೇಷ ಅಧಿವೇಶನ

**ಬೆಂಗಳೂರು:** ಪಶುಸಂಗೋಪನೆ ಇಲಾಖೆ ವತಿಯಿಂದ ರಾಷ್ಟ್ರಮಟ್ಟದ ಮಾನಿಟರಿಂಗ್ ಕಾರ್ಯಕ್ರಮಗಳು ಮತ್ತು ಉದ್ದೇಶಗಳ ಬಗ್ಗೆ ಅರಿವು ಮೂಡಿಸಲು ಸಲುವಾಗಿ ವಿಶೇಷ ಅಧಿವೇಶನವನ್ನು ಆಯೋಜಿಸಲಾಗಿತ್ತು. ಈ ಅಧಿವೇಶನದಲ್ಲಿ ರಾಷ್ಟ್ರ ಮಟ್ಟದ ಮಾನಿಟರಿಂಗ್ ಯೋಜನೆಗಳ ಅನುಷ್ಠಾನವನ್ನು ಮಾರ್ಗಸೂಚಿಗಳನ್ವಯ ಕ್ರಮಬದ್ಧವಾಗಿ ಮತ್ತು ಸುಲಲಿತವಾಗಿ ಅನುಷ್ಠಾನಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಷ

ಪಶುಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆ (ಡಿಎಚ್‌ಡಿ) ಯ ವಿವಿಧ ಯೋಜನೆಗಳೊಂದಿಗೆ ವಿಶೇಷವಾಗಿ ಗೋಕುಲ್ ಮಿಷನ್, ರಾಷ್ಟ್ರೀಯ ಜಾನುವಾರು ವಿಷನ್, ಡೈರಿ ಅಭಿವೃದ್ಧಿಗಾಗಿ ರಾಷ್ಟ್ರೀಯ ಕಾರ್ಯಕ್ರಮ ಮತ್ತು ಜಾನುವಾರು ಆರೋಗ್ಯ ಮತ್ತು ರೋಗ ನಿಯಂತ್ರಣ ಕಾರ್ಯಕ್ರಮ ಯೋಜನೆಗಳಡಿ ರಾಷ್ಟ್ರೀಯವಾಗಿ ತೊಡಗಿಸಿಕೊಂಡಿರುವ ರಾಜ್ಯ ಮಟ್ಟದ ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಾಯಿತು. ಈ ಬ್ರೀಫಿಂಗ್ ಸಭೆಯು ರಾಜ್ಯಾದ್ಯಂತ ಕ್ಷೇತ್ರ ಮಟ್ಟದಲ್ಲಿ ಯೋಜನೆಗಳ ಅನುಷನವನ್ನು ಮೇಲ್ವಿಚಾರಣೆ ಮಾಡಲು ರಾಷ್ಟ್ರಮಟ್ಟದ ಮಾನಿಟರ್‌ಗಳ ವಾರಾಂತ್ಯದ ಕ್ಷೇತ್ರ ಭೇಟಿಯ ಒಂದು ಭಾಗವಾಗಿದೆ.



ಆರ್‌ಜಿಎಂ, ಎನ್‌ಐಎಮ್, ಎನ್‌ಪಿಡಿಡಿ ಮತ್ತು ಎಲ್‌ಹೆಚ್‌ಸಿಡಿ ಯೋಜನೆಗಳನ್ನು ಅನುಷನಗೊಳಿಸುವ ರಾಜ್ಯದ ಅಧಿಕಾರಿಗಳು ಯೋಜನೆಯ ಪ್ರಸ್ತುತ ಸ್ಥಿತಿ, ಫಲಶೃತಿ ಮತ್ತು ಸವಾಲುಗಳು ಸೇರಿದಂತೆ ಇಲ್ಲಿಯವರೆಗಿನ ಅನುಷ್ಟಾನದ ವಿವರಗಳನ್ನು ರಾಷ್ಟ್ರ ಮಟ್ಟದ ಮಾನಿಟರ್‌ಗಳ ಮುಂದೆ ಪ್ರಸ್ತುತಪಡಿಸಿದರು. ಸಭೆಯ ನಂತರ ಎನ್‌ಎಲ್‌ಎಂಗಳು ಅನುಷನಗೊಂಡಿರುವ ಕಾರ್ಯಕ್ರಮಗಳ ಮೌಲ್ಯಮಾಪನ ಮಾಡಲು ಕ್ಷೇತ್ರಕ್ಕೆ ತೆರಳುವರು. ಯೋಜನೆಗಳ ಅನುಷನದಲ್ಲಿನ ಕಾರ್ಯಕ್ಷಮತೆ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಸಮರ್ಥ ಅನುಷ್ಟಾನದ ಖಚಿತತೆ ಕುರಿತು ಎನ್‌ಎಲ್ ಎಂಗಳು ಮತ್ತು ಡಿಎಚ್‌ಎಡಿಗಳಿಗೆ ವರದಿಯನ್ನು ಸಲ್ಲಿಸಲಿದ್ದು, ಇದು ಜಾನುವಾರು ಸಾಕಾಣಿ ರೈತರ ಸಬಲೀಕರಣದತ್ತ ಸರ್ಕಾರದ ದೃಷ್ಟಿಯ ಸಾಧನೆಯನ್ನು ಖಚಿತ ಪಡಿಸಿಕೊಳ್ಳಲು ಅನುವಾಗುತ್ತದೆ.

ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಕಾರ್ಯದರ್ಶಿ ಡಾ. ಅಜಯ್ ನಾಗಭೂಷಣ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಆಯುಕ್ತರು ಶ್ರೀಮತಿ. ಶ್ರೀರೂಪ, ಹಾಗೂ ಕೇಂದ್ರ ಸರ್ಕಾರದ ಡಿಎಚ್‌ಎಡಿ ಸಲಹೆಗಾರರು (ಅಂಕಿಅಂಶ) ಜಗತ್ ಹಝಾರಿಕಾ, ಮತ್ತು ಕೇಂದ್ರ, ಪಶುಸಂಗೋಪನೆ ಅಂಕಿ ಅಂಶ ವಿಭಾಗದ ಸಹಾಯಕ ನಿರ್ದೇಶಕ ಮುಖೇಶ್ ದತ್ ಶರ್ಮಾ ಸಭೆಯಲ್ಲಿ ಉಪಸ್ಥಿತರಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com